ನಿಮ್ಮೂರು ಸುದ್ದಿ

ಕನ್ನಡ ದಿನ ಪತ್ರಿಕೆ NIMMURU SUDDI

ಸಂಪಾದಕರು: ಸುಂದರ್ Editor : Sundar

ಏಕ ಕಾಲಕ್ಕೆ ಬಳ್ಳಾರಿ, ಕೊಪ್ಪಳ, ಯಾದಗಿರಿ, ರಾಯಚೂರು, ಕಲಬುರ್ಗಿ, ಬೀದರ, ವಿಜಯನಗರ ಜಿಲ್ಲೆಗಳಲ್ಲಿ ಪ್ರಕಟ

Volume: 01, Issue: 125 RNI Number : KNKAN/25/A2770 14-05-2026 Thursday Page 04, Price 2/- suddinimmuru@gmail.com Mob:-8660146563

ಸಂಪುಟ :01 ಸಂಚಿಕೆ :125 ರಾಯಚೂರು 14-05-2026 ಗುರುವಾರ ಪುಟ 04 ಬೆಲೆ ರೂ.2/- ಮೊ:8660146563

23 ಲಕ್ಷ ಮಾಲೀಕರಿಗೆ ಭೂ ಗ್ಯಾರಂಟಿ: 100 ದಿನದೊಳಗೆ ಬಿ ಖಾತಾದಿಂದ ಎ ಖಾತಾ ಮಾಡಿಸಿಕೊಂಡರೆ ಶೇ.2ರಷ್ಟು ಶುಲ್ಕ

ಬೆಂಗಳೂರು: ಗ್ರೇಟರ್ ಬೆಂಗಳೂರು ಪ್ರಾಧಿಕಾರ (ಜಿಬಿಎ) ವ್ಯಾಪ್ತಿಯ ಬಿ ಖಾತಾ ಮಾಲೀಕರಿಗೆ ಸಿಹಿ ಸುದ್ದಿ ನೀಡಿರುವ ರಾಜ್ಯ ಸರ್ಕಾರ, 100 ದಿನದೊಳಗೆ ದಾಖಲಾತಿಗಳನ್ನು ಒದಗಿಸಿ ಅರ್ಜಿ ಸಲ್ಲಿಸಿದರೆ ಶುಲ್ಕ ಪಾವತಿಸಬೇಕಾದ ಮಾರ್ಗಸೂಚಿ ದರದಲ್ಲಿ ಶೇ.5ರಿಂದ ಶೇ.2ಕ್ಕೆ ಇಳಿಸಿ ವಿನಾಯಿತಿ ನೀಡಿದೆ.

'ನನ್ನ ಖಾತಾ ನನ್ನ ಹಕ್ಕು' ಅಭಿಯಾನ ಮೂಲಕ ನಗರದಲ್ಲಿರುವ 23 ಲಕ್ಷ ಆಸ್ತಿ ಮಾಲೀಕರಿಗೆ ಮನೆ ಬಾಗಿಲಿಗೆ ನೀಡುವ ವ್ಯವಸ್ಥೆಯೇ ಸರ್ಕಾರದ ಆರನೇ ಭೂ ಗ್ಯಾರಂಟಿ ಎಂದು ಉಪಮುಖ್ಯಮಂತ್ರಿ, ಹಾಗೂ ಬೆಂಗಳೂರು ನಗರಾಭಿವೃದ್ಧಿ ಸಚಿವ ಡಿ.ಕೆ.ಶಿವಕುಮಾರ್ ವ್ಯಾಖ್ಯಾನಿಸಿದ್ದಾರೆ.

'ರಾಜ್ಯ ಸರ್ಕಾರದ ಆರನೇ ಗ್ಯಾರಂಟಿ': ಜಿಬಿಎ ವ್ಯಾಪ್ತಿಯಲ್ಲಿ 23 ಲಕ್ಷ ಅಧಿಕೃತ ಆಸ್ತಿ ಮಾಲೀಕರಿದ್ದಾರೆ. ಇವುಗಳಲ್ಲಿ 16 ಲಕ್ಷ ಎ ಹಾಗೂ 7 ಲಕ್ಷ ಬಿ ಖಾತಾದಾರರಿದ್ದಾರೆ. ಈ ಆಸ್ತಿಗಳಿಗೆ ಸ್ಪಷ್ಟ ದಾಖಲಾತಿ ಒದಗಿಸಲು ಡಿಜಿಟಲ್ ಮ್ಯಾಪಿಂಗ್ ಮಾಡಲಾಗುತ್ತಿದೆ. ಆಧಾರ್ ಕಾರ್ಡ್, ಪೋನ್ ನಂಬರ್ ಹಾಗೂ ಗೂಗಲ್ ಲೊಕೇಷನ್ ಬಳಸಿ ಆಸ್ತಿಗಳನ್ನು ಡಿಜಿಟಲೀಕರಣ ಮಾಡಲಾಗುತ್ತಿದ್ದು, ಈಗಾಗಲೇ 7 ಸಾವಿರ ದಾಖಲಾತಿಗಳನ್ನು ಸ್ಕ್ಯಾನ್ ಮಾಡಲಾಗಿದೆ. ನಾಗರಿಕರ ಆಸ್ತಿಗಳಿಗೆ ಖಾತ್ರಿ ಒದಗಿಸುವುದೇ ರಾಜ್ಯ ಸರ್ಕಾರದ ಆರನೇ ಗ್ಯಾರಂಟಿ ಎಂದು ಅವರು ಬಣ್ಣಿಸಿದ್ದಾರೆ.

23 ಲಕ್ಷ ಆಸ್ತಿ ಮಾಲೀಕರಿಗೆ ಖಾತಾ ನೀಡಲು ನಿರ್ಧರಿಸಲಾಗಿದೆ. ಇದಕ್ಕಾಗಿ ನನ್ನ ಖಾತಾ ನನ್ನ ಹಕ್ಕು ಅಭಿಯಾನವನ್ನು ಮೇ 16ರಿಂದ ಆರಂಭಿಸಲಾಗುತ್ತಿದ್ದು, 100 ದಿನದೊಳಗೆ ಮಾಲೀಕರು ಅರ್ಜಿ ಸಲ್ಲಿಸಬಹುದಾಗಿದೆ. ಮುಂದಿನ ಮೂರು ತಿಂಗಳವರೆಗೂ ಪ್ರತಿ ಶನಿವಾರ ಆಯಾ ವಿಧಾನಸಭಾ ಕ್ಷೇತ್ರಗಳ ನಿಗದಿತ ಕೇಂದ್ರಗಳಲ್ಲಿ ನಡೆಯಲಿದ್ದು, ನಾಗರಿಕರು ಈ ಸೌಲಭ್ಯದ ಸದ್ಬಳಕೆ ಮಾಡಿಕೊಳ್ಳಬೇಕು ಎಂದು ಡಿಸಿಎಂ ಮನವಿ ಮಾಡಿದರು.

ಗೈಡ್‌ಲೈನ್ಸ್ ವ್ಯಾಲ್ಯೂ ಶೇ.2ಕ್ಕೆ ಇಳಿಕೆ: ಅಕ್ರಮವಾಗಿ ಕಟ್ಟಡ ನಿರ್ಮಿಸಿರುವ ಕಟ್ಟಡದ ಮಾಲೀಕರು ಕುಡಿಯುವ ನೀರು ಹಾಗೂ ವಿದ್ಯುತ್ ಸಂಪರ್ಕ ಪಡೆಯಲು ಬಿ ಖಾತಾ ನೀಡಲಾಗಿದೆ. ಬಿ ಖಾತಾದಿಂದ ಎ ಖಾತಾಗೆ ವರ್ಗಾಯಿಸಿಕೊಳ್ಳಲು ಅವಕಾಶ ನೀಡಲಾಗಿದ್ದು, ಇದಕ್ಕಾಗಿ ಶೇ.5ರಷ್ಟು ಶುಲ್ಕ ಪಾವತಿಸಬೇಕಿದೆ. ಸದ್ಯ ಮೂರು ತಿಂಗಳೊಳಗೆ ಅರ್ಜಿ ಸಲ್ಲಿಸುವವರಿಗೆ ಶುಲ್ಕವನ್ನು ಶೇ.2ಕ್ಕೆ ಇಳಿಸಿ ವಿನಾಯಿತಿ ನೀಡಲಾಗುತ್ತಿದೆ. ಸರ್ಕಾರವೇ ಆಸ್ತಿ ಮಾಲೀಕರ ಮನೆ ಬಾಗಿಲಿಗೆ ತೆರಳಿ ಖಾತಾ ಅಭಿಯಾನ ಮಾಡಲಿದೆ ಎಂದರು.

ಜಿಬಿಎ ನಗರ ಯೋಜನಾ ವಿಭಾಗದಿಂದ ನಗರದಲ್ಲಿ ಕಾನೂನುಬಾಹಿರವಾಗಿ ನಿರ್ಮಿಸಿರುವ ಕಟ್ಟಡದ ಸೆಟ್ ಬ್ಯಾಕ್ ಜಾಗದ ನಿಯಮ ಉಲ್ಲಂಘನೆಯನ್ನು ಶೇ.5ರಿಂದ 15ಕ್ಕೆ ಅಕ್ರಮದ ಮಿತಿಯನ್ನು



ಹೆಚ್ಚಿಸಲಾಗಿದೆ. ಇದರಿಂದ 20/30, 30/40 ಮತ್ತು40/60 ಅಳತೆಯ ನಿವೇಶನದಾರರಿಗೆ ಅನುಕೂಲವಾಗಲಿದೆ. ಬಿಡಿಎ ವ್ಯಾಪ್ತಿಯ ಶಿವರಾಮ ಕಾರಂತ ಬಡಾವಣೆಗೆ ಭೂಮಿ ನೀಡಿರುವ 3,052 ಮಾಲೀಕರಿಗೆ ನಿವೇಶನ ಹಂಚಿಕೆ ಮಾಡಲಾಗುತ್ತಿದೆ. ಮೇ 16ರಿಂದ ಮಾಲೀಕರಿಂದ ದಾಖಲಾತಿ ಪಡೆದುಕೊಂಡು ನಿವೇಶನ ನೀಡಲು ಕ್ರಮ ಕೈಗೊಳ್ಳಲಾಗುವುದು ಎಂದು ಡಿ.ಕೆ.ಶಿವಕುಮಾರ್ ತಿಳಿಸಿದರು.

ರಾಜಧಾನಿಯನ್ನು ಗ್ರೀನ್ ಬೆಂಗಳೂರು ಮಾಡಲು ನಗರದಲ್ಲಿ 15 ಲಕ್ಷ ಸಸಿಗಳನ್ನು ನೆಡಲಾಗುವುದು. ಕೆಂಪೇಗೌಡ ಜಯಂತಿ ದಿನದಂದು ಇದಕ್ಕೆ ಚಾಲನೆ ನೀಡಲಾಗುವುದು. ಸಂಘ-ಸಂಸ್ಥೆಗಳ ಸಹಯೋಗದಲ್ಲಿ ಸಸಿ ನೆಡಲಾಗುವುದು ಎಂದರು.

ಬೆಂಗಳೂರು ಬಿಸಿನೆಸ್ ಕಾರಿಡಾರ್ ಯೋಜನೆಯ ಮೊದಲ ಹಂತದಲ್ಲಿ ಟೆಂಡರ್ ಪ್ರಕ್ರಿಯೆ ಪೂರ್ಣಗೊಳಿಸಲಾಗಿದೆ. ಹೊಸೂರು ರಸ್ತೆಯಿಂದ ಮೈಸೂರು ರಸ್ತೆಯ ಸುಮಾರು 33 ಕಿ.ಮೀ. ಉದ್ದದ ರಸ್ತೆ ನಿರ್ಮಾಣಕ್ಕೆ ಈಗಾಗಲೇ ಅಧಿಸೂಚನೆ ಹೊರಡಿಸಲಾಗಿದೆ. ಭೂಮಿ ನೀಡುವ ಮಾಲೀಕರಿಗೆ ಐದು ರೀತಿಯ ಪರಿಹಾರ ಆಯ್ಕೆಗಳನ್ನು ನೀಡಲಾಗಿದ್ದು, ಮುಂದಿನ ಸಚಿವ ಸಂಪುಟದಲ್ಲಿ ಈ ಬಗ್ಗೆ ಚರ್ಚಿಸಿ ಕ್ರಮ ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದರು.

ಬಿಡಿಎ ವತಿಯಿಂದ ವೈಟ್ ಫೀಲ್ಡ್‌ನಲ್ಲಿ 1,900 ಮನೆಗಳನ್ನು ನಿರ್ಮಿಸಲಾಗಿದೆ. ಮೇ 15ರಿಂದ ಸಾರ್ವಜನಿಕರು ತಮ್ಮ ಆಯ್ಕೆಯ ಫ್ಲ್ಯಾಟ್ ಖರೀದಿಸಬಹುದು. ಹೆಬ್ಬಾಳ ಜಂಕ್ಷನ್‌ನಿಂದ ಬೆಂಗಳೂರು ಕೃಷಿ ವಿವಿವರೆಗಿನ 2.2 ಕಿಲೋಮೀಟರ್‌ವರೆಗಿನ ಟನಲ್ ರಸ್ತೆ ಹಾಗೂ ಮೇಕ್ರಿ ಸರ್ಕಲ್ ಬಳಿ ಎಲಿವೇಟೆಡ್ ಕಾರಿಡಾರ್ ನಿರ್ಮಿಸಲಾಗಿದ್ದು, ಗುತ್ತಿಗೆ ಪಡೆದ ಸಂಸ್ಥೆಗೆ 18 ತಿಂಗಳೊಳಗೆ ಕಾಮಗಾರಿ ಮುಗಿಸಬೇಕೆಂದು ಗಡುವು ವಿಧಿಸಲಾಗಿದೆ. ಮುಂದಿನ ತಿಂಗಳು ಭೂಮಿ ಪೂಜೆ ನೆರವೇರಿಸಲಾಗುವುದು ಎಂದು ಡಿಸಿಎಂ ಮಾಹಿತಿ ನೀಡಿದರು.

ಪೌರ ಕಾರ್ಮಿಕರಿಗೆ ಆರೋಗ್ಯ ತಪಾಸಣೆ ಶಿಬಿರ

ಪೌರ ಕಾರ್ಮಿಕರು ಆರೋಗ್ಯ ವಿಮೆಯ ಸೌಲಭ್ಯ ಪಡೆಯಿರಿ: ಅಶೋಕ ಸಾಲಪ್ಪ

ರಾಯಚೂರು ಮೇ.13

ಪೌರ ಕಾರ್ಮಿಕರ ಆರೋಗ್ಯ ಕಾಪಾಡುವ ನಿಟ್ಟಿನಲ್ಲಿ 5 ಲಕ್ಷ ರೂ. ನಗದು ರಹಿತ ಆರೋಗ್ಯ ವಿಮಾ ಸೌಲಭ್ಯವನ್ನು ಸರ್ಕಾರ ಪೌರ ಕಾರ್ಮಿಕರಿಗೆ ನೀಡುತ್ತಿದೆ. ನಿವೃತ್ತಿಯವರೆಗೂ ಕಾರ್ಡ್ ಬಳಸಿ ಆರೋಗ್ಯ ಚಿಕಿತ್ಸೆ ಪಡೆಯಬಹುದೆಂದು ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿ ಅಭಿವೃದ್ಧಿ ನಿಗಮದ ಅಧ್ಯಕ್ಷ ಮುರಳಿ ಅಶೋಕ ಸಾಲಪ್ಪ ಅವರು ಹೇಳಿದರು.

ಮೇ.13ರ ಬುಧವಾರ ದಂದು ನಗರದ ಪಂಡಿತ ಸಿದ್ಧರಾಮ ಜಂಬಲದಿನ್ನಿ ರಂಗಮದಿರದಲ್ಲಿ ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿ ಅಭಿವೃದ್ಧಿ ನಿಗಮ ಹಾಗೂ ರಾಯಚೂರು ಮಹಾನಗರ ಪಾಲಿಕೆ ಇವರ ಸಂಯುಕ್ತಾಶ್ರಯದಲ್ಲಿ ನೇರ ಪಾವತಿ ಪೌರಕಾರ್ಮಿಕರಿಗೆ ಆರೋಗ್ಯ ತಪಾಸಣೆ ಶಿಬಿರ ಮತ್ತು ಅರಿವು ಮೂಡಿಸುವ ಕಾರ್ಯಕ್ರಮ ಹಾಗೂ ಆರೋಗ್ಯ ವಿಮೆ ಕಾರ್ಡ್ ವಿತರಣೆ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ರಾಜ್ಯದಲ್ಲಿ ಮುಖ್ಯಮಂತ್ರಿಗಳಿದ 5,744 ಪೌರ ಕಾರ್ಮಿಕರಿಗೆ ಆರೋಗ್ಯ ಕಾರ್ಡಗಳ ವಿತರಣೆ ಮಾಡಲಾಗಿದೆ. ರಾಯಚೂರು ಕಳೆದ ಹತ್ತು ವರ್ಷಗಳಲ್ಲಿ ಬಹಳಷ್ಟು ಬದಲಾವಣೆಯಾಗಿದೆ. ಸ್ವಚ್ಚತೆಯಲ್ಲಿ ಹಲವಾರು ಪ್ರಶಸ್ತಿಗಳನ್ನು ಪಡೆದಿದೆ. ನಮ್ಮ ತಾಯಿಯು ಬೆಂಗಳೂರಿನಲ್ಲಿ ಸ್ವೀಪರ್ ಆಗಿ



ಕೆಲಸ ಮಾಡಿದ್ದಾರೆ. ಆರೋಗ್ಯ ವಿಚಾರದಲ್ಲಿ ಪೌರ ಕಾರ್ಮಿಕರು ಹೆಚ್ಚಿನ ಕಾಳಜಿ ವಹಿಸಬೇಕು. ಮುಂದಿನ ದಿನಗಳಲ್ಲಿ ಪೌರ ಕಾರ್ಮಿಕ ಅವಲಂಬಿತ ಕುಟುಂಬಕ್ಕೆ ಈ ಯೋಜನೆಯನ್ನು ವಿಸ್ತರಣೆ ಮಾಡಲಾಗುತ್ತದೆ ಎಂದರು.

ಪೌರ ಕಾರ್ಮಿಕರು ಧೈರ್ಯವಾಗಿ ಆರೋಗ್ಯ ಕಾರ್ಡ್ ಉಪಯೋಗಿಸಬಹುದಾಗಿದೆ. ಐಟಿಬಿಟಿ ಉದ್ಯೋಗಿಗಳಿಗೆ ನೀಡುವ ಸೌಲಭ್ಯಗಳನ್ನು ತಮಗೆ ನೀಡಲಾಗುತ್ತಿದೆ. ಐಪಿಡಿ ಸಾಲಪ್ಪ ವರದಿ ಪ್ರಕಾರ 36 ಅಂಶಗಳನ್ನು ಜಾರಿ ಮಾಡಲಾಗಿದೆ. ಪೌರ ಕಾರ್ಮಿಕ ಎಂಬ ಪದವನ್ನು ಐಪಿಡಿ ಸಾಲಪ್ಪ ಅವರ ವರದಿಯಿಂದ ಬಳಸಲಾಗಿದೆ. ಪಾಲಿಕೆಯ ಆಯುಕ್ತರು ಪತ್ರಿ ಮೂರು ತಿಂಗಳಿಗೊಮ್ಮೆ ಪೌರ ಕಾರ್ಮಿಕರಿಗೆ ಆರೋಗ್ಯ ಶಿಬಿರ ಆಯೋಜನೆ ಮಾಡಬೇಕು. ಪತ್ರಿ ಎರಡು ತಿಂಗಳಿಗೊಮ್ಮೆ ಸಭೆ ಮಾಡಬೇಕು ಎಂದರು.

ರಾಜ್ಯದಲ್ಲಿ ಮ್ಯಾನುಯಲ್ ಸ್ಕ್ಯಾವೆಂಜಿಗ್ ಸಂಪೂರ್ಣವಾಗಿ ನಿಷೇಧ ಮಾಡಲಾಗಿದೆ. ರಾಜ್ಯದ ಸಫಾಯಿ ಕಾರ್ಮಿಕರನ್ನು ಗುರುತಿಸಲಾಗಿದೆ. ರಾಯಚೂರಿನಲ್ಲಿ ಮ್ಯಾನುಯಲ್ ಸ್ಕ್ಯಾವೆಂಜಿಗ್ ಗುರುತಿಸಿ ಅವರಿಗೆ ಸೌಲಭ್ಯಗಳನ್ನು ನೀಡಬೇಕು. ಅದಕ್ಕಾಗಿ ನಮ್ಮ ನಿಗಮದಲ್ಲಿ ಸಾಕಷ್ಟು ಅನುದಾನ ಲಭ್ಯವಿದೆ. ಜಿಲ್ಲೆಯಿಂದ ಫಲಾನುಭವಿಗಳ ಪಟ್ಟಿಯನ್ನು ಕಳಿಸುವಂತೆ ಜಿಲ್ಲಾಧಿಕಾರಿಗಳ ಗಮನಕ್ಕೆ ತಂದರು. ಸಫಾಯಿ ಕರ್ಮಚಾರಿ ಮಕ್ಕಳಿಗೆ ವಿದ್ಯಾರ್ಥಿ ವೇತನವನ್ನು ನೀಡಲಾಗುತ್ತಿದೆ ಅದನ್ನು ಸರಿಯಾಗಿ ಬಳಸಿಕೊಳ್ಳಬೇಕು ಎಂದರು. ಜಿಲ್ಲಾಧಿಕಾರಿ ಪೂವಿತಾ ಎಸ್. ಅವರು ಮಾತನಾಡಿ, ಪೌರ ಕಾರ್ಮಿಕರನ್ನು ನೇರ ಪಾವತಿ ಪೌರ ಕಾರ್ಮಿಕರನ್ನಾಗಿ ಮಾಡಲು ಸರ್ಕಾರ ಹಂತ ಹಂತವಾಗಿ

3ನೇ ಪುಟಕ್ಕೆ

ಮೇ 17ರಂದು ಜಿಲ್ಲಾ ಮಟ್ಟದ ವಾಲ್ಮೀಕಿ ಜಾಗೃತಿ ಸಮಾವೇಶ



ರಾಯಚೂರು,ಮೇ.13–

ಶ್ರೀ ಆದಿಕವಿ ಭಗವಾನ್ ಮಹರ್ಷಿ ವಾಲ್ಮೀಕಿ ಯುವ ಬ್ರಿಗೇಡ್ ಸಂಘದ ವತಿಯಿಂದ ಮೇ 17ರಂದು ಸಿರವಾರ ತಾಲ್ಲೂಕಿನಲ್ಲಿ ''ಜಿಲ್ಲಾ ಮಟ್ಟದ ವಾಲ್ಮೀಕಿ ಜಾಗೃತಿ ಸಮಾವೇಶ ಹಾಗೂ ಸಮಾಜದ ಸಾಧಕರಿಗೆ ಸನ್ಮಾನ ಕಾರ್ಯಕ್ರಮ'' ಹಮ್ಮಿಕೊಳ್ಳಲಾಗಿದೆ ಎಂದು ಸಂಘದ ಮುಖಂಡ ರವಿಕುಮಾರ್ ತಿಳಿಸಿದರು.

ನಗರದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಅಂದು ಬೆಳಿಗ್ಗೆ 10 ಗಂಟೆಗೆ ಸಿರವಾರ ಪಟ್ಟಣದ ವಾಲ್ಮೀಕಿ ನಾಮಫಲಕಕ್ಕೆ ಪುಷ್ಪಾರ್ಚನೆ ಸಲ್ಲಿಸುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಗುವುದು. ಬಳಿಕ ಬೃಹತ್ ಬೈಕ್ ರ್ಯಾಲಿ ಮೂಲಕ ಸಿರವಾರ ತಾಲ್ಲೂಕು ಕ್ರೀಡಾಂಗಣ ತಲುಪಿ ಸಮಾವೇಶ ನಡೆಯಲಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಸಮಾಜದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲಾಗುವುದು. ವಾಲ್ಮೀಕಿ ಜಗದ್ಗುರುಗಳಾದ ಶ್ರೀ ಡಾ. ಪ್ರಸನ್ನಾನಂದಪುರಿ ಮಹಾಸ್ವಾಮೀಜಿ ಹಾಗೂ ಶ್ರೀ ವರದಾನೇಶ್ವರ ಸ್ವಾಮೀಜಿ ಸಾನಿಧ್ಯ ವಹಿಸಲಿದ್ದಾರೆ. ಸಚಿವ ಸತೀಶ್ ಜಾರಕಿಹೊಳಿ ಕಾರ್ಯಕ್ರಮ ಉದ್ಘಾಟಿಸಲಿದ್ದು, ಶಾಸಕ ಬಸನಗೌಡ ದದ್ದಲ್ ಅಧ್ಯಕ್ಷತೆ ವಹಿಸಲಿದ್ದಾರೆ ಎಂದು ತಿಳಿಸಿದರು.

ವಿಶೇಷ ಆಹ್ವಾನಿತರಾಗಿ ಐಪಿಎಸ್ ಅಧಿಕಾರಿ ರವಿ ಡಿ. ಚನ್ನಣ್ಣನವರ್, ಸಂಸದ ಜಿ. ಕುಮಾರ್

3ನೇ ಪುಟಕ್ಕೆ

ವಿಶ್ವ ದಾದಿಯರ ದಿನಾಚರಣೆ :ದಾದಿಯರ ಸೇವೆ ಅನನ್ಯಾಗಿದೆ - ಡಾ.ಸುನೀಲ್ ಸರೋದೆ



ಸಿರವಾರ, ಮೇ.13–

ಜಾತಿ, ಮತ, ಧರ್ಮದ ಹಂಗಿಲ್ಲದೆ ಪ್ರತಿಯೊಬ್ಬ ಜೀವವನ್ನು ರಕ್ಷಿಸುವ ಕಾಯಕದಲ್ಲಿ ತೊಡಗಿರುವ ದಾದಿಯರು ಸಮಾಜಕ್ಕೆ ನೀಡುತ್ತಿರುವ ಕೊಡುಗೆಯನ್ನು ನಾವೆಲ್ಲರೂ ಸದಾ ಸ್ಮರಿಸಬೇಕಿದೆ ಎಂದು ಆಯುಷ್ಯ ವೈದ್ಯಾದಿಕಾರಿ ಡಾ.ಸುನೀಲ್ ಸರೋದೆ ಹೇಳಿದರು.

ಪಟ್ಟಣದ ಸಮುದಾಯ ಆರೋಗ್ಯಕೇಂದ್ರದಲ್ಲಿ ವಿಶ್ವ ದಾದಿಯರ ದಿನಾಚರಣೆ ಅಂಗವಾಗಿ ಫ್ಲಾರೆನ್ಸ್ ನೈಟಿಂಗೇಲ್ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಪುಷ್ಪಾರ್ಪಣೆ ಮಾಡಿ, ಕೇಕ್ ಕತ್ತರಿಸುವ ಮೂಲಕ ಆಚರಣೆ ಮಾಡಲಾಯಿತು.

ಡಾ.ಸುರೇಶ ಮಾತನಾಡಿ ಮೇ 12, 1820 ರಂದು ಜನಿಸಿದ ಫ್ಲಾರೆನ್ಸ್ ನೈಟಿಂಗೇಲ್ ಸುಶ್ರೂಷಕರಾಗಿ ನರ್ಸಿಂಗ್ ಶಿಕ್ಷಣಕ್ಕೊಂದು ಹೊಸ ದಾರಿ ಹಾಕಿಕೊಟ್ಟು ಶಿಸ್ತುಬದ್ಧ ಮತ್ತು ಪರಿಣಾಮಕಾರಿ ನರ್ಸಿಂಗ್ ತರಬೇತಿ ಆರಂಭ ಮಾಡಿದವರಲ್ಲಿ ಮೊದಲಿಗರಾಗಿದ್ದಾರೆ. ಪ್ರತಿ ವರ್ಷ ಮೇ 12 ರಂದು ಫ್ಲಾರೆನ್ಸ್ ನೈಟಿಂಗೇಲ್ ಅವರ ಜನ್ಮದಿನದ ನೆನಪಿಗಾಗಿ ಅಂತರರಾಷ್ಟ್ರೀಯ ದಾದಿಯರ ದಿನವನ್ನು ಆಚರಿಸಲಾಗುತ್ತದೆ. ದಾದಿಯರ ದಣಿವರಿಯದ ಕಾಯಕ, ಅವರ ಅಚಲ ಸಹಾನುಭೂತಿ ಮತ್ತು ಅವರು ಸ್ಪರ್ಶಿಸುವ ಜೀವನದ ಮೇಲೆ ಅವರ ಆಳವಾದ ಪ್ರಭಾವವನ್ನು ನಾವು ಗುರುತಿಸಬೇಕಿದೆ ಎಂದರು.

ಡಾ.ಅಭಿಷೇಕ್ ಪಾಟೀಲ್ ಮಾತನಾಡಿ ಕೋವಿಡ್‌ನಂತಹ ಸಂಕಷ್ಟದ ಸಮಯದಲ್ಲಿ ದಾದಿಯರು ಪ್ರಾಣದ ಹಂಗು ತೊರೆದು ಕೆಲಸ ಮಾಡಿದ್ದನ್ನು ಜಗತ್ತು ಕಂಡಿದೆ. ನರ್ಸಿಂಗ್ ಎನ್ನುವುದು ಕೇವಲ ಒಂದು ಕೆಲಸವಲ್ಲ, ಅದೊಂದು ಜೀವನ ವಿಧಾನ. ರೋಗಿಗಳ ನೋವಿನಲ್ಲಿ ಸಾಂತ್ವನ ನೀಡುವ, ವೈದ್ಯರ ಚಿಕಿತ್ಸೆ ಗೆ ಜೀವ ತುಂಬುವ ಶಕ್ತಿ ದಾದಿಯರಲ್ಲಿದೆ. ಇಂದು ವೈದ್ಯಕೀಯ ಕ್ಷೇತ್ರ ಬಹಳ ಮುಂದುವರಿದಿದೆ. ಹೊಸ

3ನೇ ಪುಟಕ್ಕೆ

ಉಡಮಗಲ್ ಖಾನಾಪುರ, ಯಾಪಲದಿನ್ನಿ ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ರಾಷ್ಟಿಯ ಮಟ್ಟದ ಎನ್‌ಕ್ಯೂಎಎಸ್ ಮೌಲ್ಯ ಮಾಪನದಲ್ಲಿ ಸಾಧನೆ



ರಾಯಚೂರು ಮೇ.13 (ಕರ್ನಾಟಕ ವಾರ್ತೆ): ರಾಯಚೂರು ಜಿಲ್ಲೆಯ ಉಡಮಗಲ್ ಖಾನಾಪುರ ಹಾಗೂ ಯಾಪಲದಿನ್ನಿ ಪ್ರಾಥಮಿಕ ಆರೋಗ್ಯ ಕೇಂದ್ರಗಳು ರಾಷ್ಟಿಯ ಗುಣಮಟ್ಟ ಭರವಸೆ ಮಾನದಂಡಗಳ ರಾಷ್ಟಿಯ ಮಟ್ಟದ ಮೌಲ್ಯಮಾಪನವನ್ನು ಯಶಸ್ವಿಯಾಗಿ ಪೂರ್ಣಗೊಳಿಸಿ ಗಮನಾರ್ಹ ಸಾಧನೆ ಮಾಡಿದ್ದು, ಇದು ಜಿಲ್ಲೆಗೆ ಹೆಮ್ಮೆಯ ವಿಷಯವಾಗಿದೆ ಎಂದು ಜಿಲ್ಲಾ ಅರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಸುರೇಂದ್ರ ಬಾಬು ಅವರು ಸಂತಸ ಹಂಚಿಕೊಡಿದ್ದಾರೆ.

ಪ್ರಾಥಮಿಕ ಆರೋಗ್ಯ ಕೇಂದ್ರ ಉಡಮಗಲ್ ಖಾನಾಪೂರಗೆ ರಾಷ್ಟಿಯ ಮಟ್ಟದ ತಂಡದ ಡಾ.ಗಿರೀಶ್ ಹಾಗೂ ಡಾ.ಮೈನುದೀನ್ ಹಾಗೂ ಪ್ರಾಥಮಿಕ ಆರೋಗ್ಯ ಕೇಂದ್ರ ಯಾಪಲದಿನ್ನಿಗೆ ರಾಷ್ಟಮಟ್ಟದ ಮೌಲ್ಯಮಾಪಕರಾದ ವಿನಿತಾ ಆರ್. ಹಾಗೂ ಅಶೋಕ್ ಅವರು ಕೈಗೊಂಡ ಸಮಗ್ರ ಮೌಲ್ಯಮಾಪನದಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರ ಉಡಮಗಲ್ ಖಾನಾಪೂರ ಶೇಕಡ 91.31 ಹಾಗೂ ಪ್ರಾಥಮಿಕ ಆರೋಗ್ಯ ಕೇಂದ್ರ ಯಾಪಲದಿನ್ನಿ ಶೇಕಡ 88.55 ಅಂಕಗಳೊದಿಗೆ ಜಿಲ್ಲೆಯ ಆರೋಗ್ಯ ಕ್ಷೇತ್ರದಲ್ಲಿ ಮಹತ್ವದ ಸಾಧನೆಯಾಗಿದೆ.

ಮೌಲ್ಯಮಾಪನ ಪ್ರಕ್ರಿಯೆಯಲ್ಲಿ ಮೂಲ ಸೌಕರ್ಯ, ರೋಗಿ ಸ್ನೇಹಿ ಸೇವೆಗಳು, ಆಸ್ಪತ್ರೆಯ ಸ್ವಚ್ಚತೆ, ಔಷಧಗಳ ಲಭ್ಯತೆ, ತುರ್ತು ಚಿಕಿತ್ಸಾ ವ್ಯವಸ್ಥೆ, ದಾಖಲೆ ನಿರ್ವಹಣೆ ಸೇರಿದಂತೆ ಹಲವು ಅಂಶಗಳನ್ನು ಸೂಕ್ಷ್ಮವಾಗಿ ಪರಿಶೀಲಿಸಲಾಗಿತ್ತು. ಈ ಎಲ್ಲ ವಿಭಾಗಗಳಲ್ಲಿ ಉತ್ತಮ ಕಾರ್ಯನಿರ್ವಹಣೆ ತೋರಿದ ಪರಿಣಾಮ ಉನ್ನತ ಅಂಕಗಳನ್ನು ಪಡೆದುಕೊಳ್ಳಲಾಗಿದೆ ಎಂದರು.

ಜನಪ್ರತಿನಿಧಿಗಳು, ಶಾಸಕರು ಮತ್ತು ಸಂಸದರು, ಜಿಲ್ಲಾಡಳಿತ ಹಾಗೂ ತಾಲ್ಲೂಕು ಆಡಳಿತದಿಂದ ದೊರೆತ ಮಾರ್ಗದರ್ಶನ ಮತ್ತು ಬೆಂಬಲವೂ ಈ ಸಾಧನೆಯಲ್ಲಿ ಮಹತ್ವದ ಪಾತ್ರ ವಹಿಸಿದೆ. ಇದಕ್ಕಾಗಿ ಜಿಲ್ಲಾ ಎನ್ಫೋರ್ಸ್ಮೆಂಟ್

3ನೇ ಪುಟಕ್ಕೆ

ಮಹಿಳೆಯರ ಶಿಕ್ಷಣ ಕುರಿತು ಸಚಿವರ ಹೇಳಿಕೆ ಖಂಡನೆ

ಕ್ಷಮೆ ಕೇಳಿ ರಾಜೀನಾಮೆ ನೀಡಲಿ: ವಿಜಯರಾಣಿ ಸಿರವಾರ ಒತ್ತಾಯ

ರಾಯಚೂರು, ಮೇ 13:

ಹೆಣ್ಣು ಮಕ್ಕಳ ಶಿಕ್ಷಣ ಕುರಿತು ವಿವಾದಾತ್ಮಕ ಹೇಳಿಕೆ ನೀಡಿರುವ ಬಿಹಾರದ ಶಿಕ್ಷಣ ಸಚಿವ ಮಿಥಿಲೇಕ್ ತಿವಾರಿ ಅವರು ಸಮಸ್ತ ಮಹಿಳಾ ಸಮಾಜದ ಕ್ಷಮೆ ಕೇಳಿ ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಬೇಕು ಎಂದು ಮಹಾಶಕ್ತಿ ಮಹಿಳಾ ಸಬಲೀಕರಣ ರಾಜ್ಯ ಸಮಿತಿಯ ಸಂಸ್ಥಾಪಕ ರಾಜ್ಯಾಧ್ಯಕ್ಷೆ ವಿಜಯರಾಣಿ ಸಿರವಾರ ಆಗ್ರಹಿಸಿದ್ದಾರೆ.

ಇತ್ತೀಚೆಗೆ ಬಿಹಾರದ ಶಿಕ್ಷಣ ಸಚಿವ ಮಿಥಿಲೇಕ್ ತಿವಾರಿ ಅವರು ಹೆಣ್ಣು ಮಕ್ಕಳ ಶಿಕ್ಷಣ ಕುರಿತು ನೀಡಿರುವ ವಿವಾದಾತ್ಮಕ ಹೇಳಿಕೆ ದೇಶದಾದ್ಯಂತ ಮಹಿಳಾ ಸಂಘಟನೆಗಳ ಆಕ್ರೋಶಕ್ಕೆ ಕಾರಣವಾಗಿದೆ. ಶಿಕ್ಷಣವು ಪ್ರತಿಯೊಬ್ಬರ ಮೂಲಭೂತ ಹಕ್ಕಾಗಿದ್ದು, ಅದರಲ್ಲಿ ಮಹಿಳೆಯರಿಗೂ



ಸಮಾನ ಅವಕಾಶ ಕಲ್ಪಿಸುವುದು ಸಂವಿಧಾನದ ಆಶಯವಾಗಿದೆ. ಇಂತಹ ಸಂದರ್ಭದಲ್ಲಿ ಶಿಕ್ಷಣ ಇಲಾಖೆಯ ಜವಾಬ್ದಾರಿಯುತ ಸ್ಥಾನದಲ್ಲಿರುವ ವ್ಯಕ್ತಿಯೊಬ್ಬರು ಮಹಿಳೆಯರ ಬಗ್ಗೆ ಅವಹೇಳನಕಾರಿ ಧೋರಣೆಯಲ್ಲಿ ಮಾತನಾಡಿರುವುದು ಖಂಡನೀಯ.

ಭಾರತದ ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರು ಮಹಿಳೆಯರ ಸಮಾನ ಹಕ್ಕು, ಶಿಕ್ಷಣ ಮತ್ತು ಸಬಲೀಕರಣಕ್ಕಾಗಿ ಮಹತ್ವದ ಹೋರಾಟ ನಡೆಸಿದರು. ಹಿಂದೂ ಕೋಡ್ ಬಿಲ್ ಸೇರಿದಂತೆ ಹಲವು ಸಾಮಾಜಿಕ ಸುಧಾರಣೆಗಳ ಮೂಲಕ ಮಹಿಳೆಯರಿಗೆ ಗೌರವಯುತ ಬದುಕಿನ ದಾರಿಯನ್ನು ತೆರೆದರು. ''ಶಿಕ್ಷಣವೇ ಮುಕ್ತಿ'' ಎಂಬ ಸಂದೇಶವನ್ನು ನೀಡಿದ ಅಂಬೇಡ್ಕರ್ ಅವರ ಚಿಂತನೆ ಇಂದಿಗೂ ಸಮಾಜಕ್ಕೆ ದಿಕ್ಕು ತೋರುತ್ತಿದೆ.

ಮಹಿಳೆಯರಿಗೆ ಶಿಕ್ಷಣ ದೊರೆತಾಗ ಕುಟುಂಬ, ಸಮಾಜ ಮತ್ತು ರಾಷ್ಟ್ರವೇ ಅಭಿವೃದ್ಧಿಯ ಹಾದಿಯಲ್ಲಿ ಸಾಗುತ್ತದೆ. ಶಿಕ್ಷಣ ಪಡೆದ ಮಹಿಳೆ ಕುಟುಂಬದ ಆರ್ಥಿಕ, ಸಾಮಾಜಿಕ ಹಾಗೂ ಸಾಂಸ್ಕೃತಿಕ ಬೆಳವಣಿಗೆಯಲ್ಲಿ ಪ್ರಮುಖ ಪಾತ್ರವಹಿಸುತ್ತಾಳೆ. ಇಂತಹ ಸತ್ಯವನ್ನು ಅರಿಯಬೇಕಾದ ಸಚಿವರು ವಿವಾದಾತ್ಮಕ ಹೇಳಿಕೆ ನೀಡಿರುವುದು ದುರದೃಷ್ಟಕರ.

ಮಹಿಳೆಯರ ಶಿಕ್ಷಣವನ್ನು ಪ್ರಶ್ನಿಸುವ ಮನೋಭಾವವು ಸಮಾಜವನ್ನು ಹಿಂದುಳಿದತ್ತ ಕೊಂಡೊಯ್ಯುತ್ತದೆ. ಇಂದು ಮಹಿಳೆಯರು ವಿಜ್ಞಾನ, ಶಿಕ್ಷಣ, ರಾಜಕೀಯ, ಆಡಳಿತ, ಕ್ರೀಡೆ ಸೇರಿದಂತೆ ಎಲ್ಲಾ ಕ್ಷೇತ್ರಗಳಲ್ಲೂ ಸಾಧನೆ ಮಾಡುತ್ತಿದ್ದಾರೆ. ಅವರ ಸಾಮರ್ಥ್ಯವನ್ನು ಕುಗ್ಗಿಸುವ ಯಾವುದೇ ಹೇಳಿಕೆ ಸಮಾಜದ ಪ್ರಗತಿಗೆ ಅಡ್ಡಿಯಾಗುತ್ತದೆ.

ಮಹಾಶಕ್ತಿ ಮಹಿಳಾ ಸಬಲೀಕರಣ ರಾಜ್ಯ ಸಮಿತಿಯ ರಾಜ್ಯಾಧ್ಯಕ್ಷೆ ವಿಜಯರಾಣಿ ಸಿರವಾರ ಅವರು ವ್ಯಕ್ತಪಡಿಸಿರುವ ಆಕ್ರೋಶ ನ್ಯಾಯಸಮ್ಮತವಾಗಿದೆ. ಮಹಿಳೆಯರ

3ನೇ ಪುಟಕ್ಕೆ

ಡಿಟಿಜೆ ಶಾಲೆಯಲ್ಲಿ ಬೆಂಕಿ ಅವಘಡ :ಶಿಕ್ಷಕಿಯರ ಕೊಠಡಿಯಲ್ಲಿ ಬೆಂಕಿ - ಪ್ರಶ್ನೆ ಪತ್ರಿಕೆ ಸೇರಿ ಪ್ರಮುಖ ದಾಖಲೆಗಳು ಭಸ್ಮ





ರಾಯಚೂರು,ಮೇ.13–

ನಗರದ ಕರ್ನಾಟಕ ಸಂಘದ ಪಕ್ಕದಲ್ಲಿರುವ ಡಿಟಿಜೆ ಶಾಲೆಯಲ್ಲಿ ನಿನ್ನೆ ರಾತ್ರಿ ಸಂಭವಿಸಿದ ಬೆಂಕಿ ಅವಘಡದಿಂದ ಶಿಕ್ಷಕಿಯರ ಕೊಠಡಿಯಲ್ಲಿದ್ದ ಪ್ರಮುಖ ದಾಖಲೆಗಳು ಸುಟ್ಟು ಭಸ್ಮವಾಗಿರುವ ಘಟನೆ ಆತಂಕಕ್ಕೆ ಕಾರಣವಾಗಿದೆ.

ರಾತ್ರಿ ಸುಮಾರು 9:15 ಗಂಟೆಯ ವೇಳೆ ಶಿಕ್ಷಕಿಯರ ಕೊಠಡಿಯಲ್ಲಿ ಏಕಾಏಕಿ ಬೆಂಕಿ ಕಾಣಿಸಿಕೊಂಡಿದ್ದು, ಅಲ್ಲಿದ್ದ ಹಿಂದಿ ಶಿಕ್ಷಕಿಯರ ಅಲ್ಮಾರಿ ಸಂಪೂರ್ಣವಾಗಿ ಬೆಂಕಿಗೆ ಆಹುತಿಯಾಗಿದೆ. ವಿದ್ಯಾರ್ಥಿನಿಯರ ಪ್ರಶ್ನೆ ಪತ್ರಿಕೆಗಳು, ಉತ್ತರ ಪತ್ರಿಕೆಗಳು ಹಾಗೂ ಇತರೆ ದಾಖಲೆಗಳು ಬೆಂಕಿಯಲ್ಲಿ ಕರಕಲಾಗಿವೆ ಎಂದು ತಿಳಿದುಬಂದಿದೆ.

ಸ್ಥಳೀಯರು ಮತ್ತು ಶಾಲಾ ಸಿಬ್ಬಂದಿ ತಕ್ಷಣ ಅಗ್ನಿಶಾಮಕ ದಳಕ್ಕೆ ಮಾಹಿತಿ ನೀಡಿದ್ದು, ಅಗ್ನಿಶಾಮಕ ಸಿಬ್ಬಂದಿ ಸ್ಥಳಕ್ಕೆ ಧಾವಿಸಿ ಬೆಂಕಿಯನ್ನು ನಿಯಂತ್ರಣಕ್ಕೆ ತಂದಿದ್ದಾರೆ. ಸಮಯೋಚಿತ ಕಾರ್ಯಾಚರಣೆಯಿಂದ ಹೆಚ್ಚಿನ ಅನಾಹುತ ತಪ್ಪಿದೆ. ಘಟನೆಯಿಂದ ಶಾಲೆಯ ಆಡಳಿತ ಮಂಡಳಿ, ಶಿಕ್ಷಕರು,

3ನೇ ಪುಟಕ್ಕೆ

ಕೆಎಸ್‌ಆರ್‌ಟಿಸಿ ನೌಕರರ ಮುಷ್ಕರ ಸಿದ್ಧತಾ ಸಮಾವೇಶಕ್ಕೆ ಚಾಲನೆ

ಕಲಬುರಗಿ,ಮೇ.13–

ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮಗಳ ಕಾರ್ಮಿಕ ಸಂಘಟನೆಗಳ ಜಂಟಿ ಕ್ರಿಯಾ ಸಮಿತಿ ವತಿಯಿಂದ ನಗರದ ಕೋಠಾರಿ ಭವನದಲ್ಲಿ ಮಂಗಳವಾರ ನಡೆದ ಮುಷ್ಕರ ಸಿದ್ಧತಾ ಸಮಾವೇಶದಲ್ಲಿ ನೌಕರರ ವಿವಿಧ ಬೇಡಿಕೆಗಳನ್ನು ತಕ್ಷಣ ಈಡೇರಿಸುವಂತೆ ಸರ್ಕಾರವನ್ನು ಮುಖಂಡರು ಒತ್ತಾಯಿಸಿದರು.



ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದ ಅಖಿಲ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನೌಕರರ ಮಹಾಮಂಡಳಿಯ ಮಹಾ ಪ್ರಧಾನ ಕಾರ್ಯದರ್ಶಿ ಬಿ.ಜಯದೇವರಾಜೇ ಅರಸ್, ''ರಾಜ್ಯ ರಸ್ತೆ ಸಾರಿಗೆ ನೌಕರರು ಹಲವು ವರ್ಷಗಳಿಂದ ವೇತನ ಪರಿಷ್ಕರಣೆ, ಹುದ್ದೆ ಭರ್ತಿ, ನಿವೃತ್ತಿ ಸೌಲಭ್ಯ ಸೇರಿದಂತೆ ವಿವಿಧ ನ್ಯಾಯಸಮ್ಮತ ಬೇಡಿಕೆಗಳಿಗಾಗಿ ಹೋರಾಟ ನಡೆಸುತ್ತಿದ್ದಾರೆ. ಆದರೆ ಸರ್ಕಾರ ನಿರ್ಲಕ್ಷ್ಯ ವಹಿಸುತ್ತಿರುವುದು ಖಂಡನೀಯ'' ಎಂದು ಹೇಳಿದರು.

ನೌಕರರ ಸಮಸ್ಯೆಗಳಿಗೆ ಶೀಘ್ರ ಪರಿಹಾರ ಕಂಡುಹಿಡಿಯದಿದ್ದರೆ ರಾಜ್ಯಾದ್ಯಂತ ಹೋರಾಟವನ್ನು ತೀವ್ರಗೊಳಿಸಲಾಗುವುದು ಎಂದು ಎಚ್ಚರಿಸಿದರು.

ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದ ಕೆಎಸ್‌ಆರ್‌ಟಿಸಿ ಸ್ಟಾಫ್ ಮತ್ತು ವರ್ಕರ್ಸ್ ಫೆಡರೇಷನ್ (ಎಐಟಿಯುಸಿ) ರಾಜ್ಯ ಪ್ರಧಾನ ಕಾರ್ಯದರ್ಶಿ ವಿಜಯಭಾಸ್ಕರ್ ಡಿ.ಎ ಮಾತನಾಡಿ, ಕೋವಿಡ್ ಅವಧಿಯಲ್ಲೂ ಸಾರಿಗೆ ನೌಕರರು ಜೀವದ ಹಂಗು ತೊರೆದು ಸಾರ್ವಜನಿಕ ಸೇವೆ ಸಲ್ಲಿಸಿದ್ದಾರೆ. ಇಂತಹ ನೌಕರರ ಹಿತಾಸಕ್ತಿಯನ್ನು ಕಾಪಾಡುವುದು ಸರ್ಕಾರದ ಜವಾಬ್ದಾರಿಯಾಗಿದೆ ಎಂದರು.

ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನೌಕರರ ಫೆಡರೇಷನ್ (ಸಿಐಟಿಯು) ಪ್ರಧಾನ ಕಾರ್ಯದರ್ಶಿ ಎಚ್.ಎಸ್. ಮಂಜುನಾಥ ಮಾತನಾಡಿ, ಸಾರಿಗೆ ನೌಕರರ ಏಕತೆ ಇಂದಿನ ಅಗತ್ಯವಾಗಿದ್ದು, ಸರ್ಕಾರ ಬೇಡಿಕೆಗಳನ್ನು ಗಂಭೀರವಾಗಿ ಪರಿಗಣಿಸದಿದ್ದರೆ ರಾಜ್ಯಮಟ್ಟದಲ್ಲಿ ಉಗ್ರ ಹೋರಾಟ ಅನಿವಾರ್ಯವಾಗಲಿದೆ ಎಂದು ಹೇಳಿದರು.

ಅಖಿಲ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನೌಕರರ ಮಹಾಮಂಡಳಿಯ ಪ್ರಧಾನ ಕಾರ್ಯದರ್ಶಿ ಎನ್. ನಾರಾಯಣ ಸ್ವಾಮಿ ಮಾತನಾಡಿ, ನೌಕರರ ವೇತನ, ಭದ್ರತೆ ಹಾಗೂ ಸೇವಾ ಸೌಲಭ್ಯಗಳ ಕುರಿತು ಸರ್ಕಾರ ಸ್ಪಷ್ಟ ನಿರ್ಧಾರ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನೌಕರರ ಸಂಘದ ಅಧ್ಯಕ್ಷ ಜಗದೀಶ್ ಎಚ್. ಮಾತನಾಡಿ, ನೌಕರರ ಹೋರಾಟವು ವೈಯಕ್ತಿಕ ಹಿತಾಸಕ್ತಿಗಾಗಿ ಅಲ್ಲ. ಸಾರಿಗೆ ವ್ಯವಸ್ಥೆ ಮತ್ತು ನೌಕರರ ಭವಿಷ್ಯಕ್ಕಾಗಿ ನಡೆಯುತ್ತಿರುವ ಹೋರಾಟವಾಗಿದೆ ಎಂದರು.

ಅಧ್ಯಕ್ಷೀಯ ಭಾಷಣ ಮಾಡಿದ ಚಂದ್ರಕಾಂತ ಗದ್ದಿಗಿ, ಸಾರಿಗೆ ನೌಕರರ ಹಕ್ಕುಗಳ ರಕ್ಷಣೆಗೆ ಎಲ್ಲ ಸಂಘಟನೆಗಳು ಒಂದಾಗಿ ಹೋರಾಟ ನಡೆಸುತ್ತಿರುವುದು ಶ್ಲಾಘನೀಯವಾಗಿದ್ದು, ಸರ್ಕಾರ ಸಮಸ್ಯೆಗಳನ್ನು ಮಾತುಕತೆಯ ಮೂಲಕ ಬಗೆಹರಿಸಬೇಕು ಎಂದು ಹೇಳಿದರು.

ವೇದಿಕೆಯಲ್ಲಿ ಕಾಂ. ಎಚ್.ಡಿ.ರೇವಪ್ಪ, ಸಂಗಮನಾಥ ರಬಶೆಟ್ಟಿ, ಕಾಂ.ಸಿದ್ದಪ್ಪ ಪಾಲ್ಕಿ, ರಾಮು, ಭೀಮರಾವ್ ಯರಗೋಳ ಹಾಗೂ ಬಸವರಾಜ ಕಣ್ಣಿ ಅಧ್ಯಕ್ಷ ಮಂಡಳಿಯಲ್ಲಿ ಉಪಸ್ಥಿತರಿದ್ದರು.

ಕಾರ್ಯಕ್ರಮದಲ್ಲಿ ರಾಮಚಂದ್ರ ಹೈಯ್ಯಾಳಕರ್, ಗಣಪತಿ ಗೋಳಾ, ಖಾಜಪ್ಪ ಕೋರಳ್ಳಿ ಹಾಗೂ ಸೂರ್ಯಕಾಂತ ಟೈಗರ್ ಸೇರಿದಂತೆ ವಿವಿಧ ಸಂಘಟನೆಗಳ ಮುಖಂಡರು ಭಾಗವಹಿಸಿದ್ದರು.

ಸಂಘಟನಾ ಕಾರ್ಯದರ್ಶಿ ಕಾಂ. ನಾಗೀಂದ್ರಪ್ಪ ಚವ್ಹಾಣ ಸ್ವಾಗತಿಸಿದರು. ವಿಠಲ್ ಭೀಮುನ್ ಕಾರ್ಯಕ್ರಮ ನಿರೂಪಿಸಿದರು. ಎಸ್.ಬಿ. ಡಲ್ಲು ವಂದನಾರ್ಪಣೆ ಸಲ್ಲಿಸಿದರು.

ಬೀದರ್‌ನಲ್ಲಿ ಹೊಸ ಯುಐಡಿಎಐ ಆಧಾರ್ ಸೇವಾ ಕೇಂದ್ರದ ಉದ್ಘಾಟನೆ

ಬೀದರ್,ಮೇ.13–

ಜಿಲ್ಲೆಯ ಸಾರ್ವಜನಿಕರು ಆಧಾರ್ ಆ್ಯಪ್ ಮೂಲಕ ಮನೆಯಲ್ಲಿ ಕುಳಿತಲ್ಲಿಯೇ ತಮ್ಮ ಆಧಾರ್ ಕಾರ್ಡ್ ಅಪ್‌ಡೇಟ್ ಮಾಡಿಸಿಕೊಳ್ಳಬಹುದು ಎಂದು ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಹೇಳಿದರು.

ನಗರದ ಶಿವನಗರ ಬಡಾವಣೆಯಲ್ಲಿ ಭಾರತೀಯ ವಿಶಿಷ್ಟ ಗುರುತಿನ ಪ್ರಾಧಿಕಾರ (ಯುಐಡಿಎಐ) ವತಿಯಿಂದ ಮಂಗಳವಾರ ಆಯೋಜಿಸಿದ್ದ ಹೊಸ ಆಧಾರ್ ಸೇವಾ ಕೇಂದ್ರ (ಎಎಸ್‌ಕೆ) ಉದ್ಘಾಟಿಸಿ ಅವರು ಮಾತನಾಡಿದರು.

ಈ ಕೇಂದ್ರವು ಜಿಲ್ಲೆಯ ನಿವಾಸಿ ಕೇಂದ್ರಿತ ಆಧಾರ್ ಸೇವೆಗಳನ್ನು ಬಲಪಡಿಸುವತ್ತ ಮತ್ತೊಂದು ಮಹತ್ವದ ಹೆಜ್ಜೆಯಾಗಿದೆ. ಆಧಾರ್ ಕಾರ್ಡ್‌ಗೆ ಸಂಬಂಧಿಸಿದ ಯಾವುದೇ ಸಮಸ್ಯೆಗಳನ್ನು ಇಲ್ಲಿ ಪರಿಹರಿಸಲಾಗು ವುದು ಎಂದು ಹೇಳಿದರು.

ಆಧಾರ್ ದಾಖಲಾತಿ, ಜನಸಂಖ್ಯಾ ಹಾಗೂ ಬಯೋಮೆಟ್ರಿಕ್ ನವೀಕರಣ, ದೋಷ ತಿದ್ದುಪಡಿ ಮತ್ತು ಕುಂದುಕೊರತೆ ಪರಿಹಾರ ಸೇವೆಗಳು ಒಂದೇ ಸೂರಿನಡಿ ಲಭ್ಯವಿರಲಿವೆ ಎಂದು ತಿಳಿಸಿದರು.



ಸಾರ್ವಜನಿಕ ರಜೆಗಳನ್ನು ಹೊರತುಪಡಿಸಿ ಪ್ರತಿದಿನವೂ ಈ ಕೇಂದ್ರ ಕಾರ್ಯನಿರ್ವಹಿಸಲಿದ್ದು, ಸಾರ್ವಜನಿಕರಿಗೆ ಹೆಚ್ಚಿನ ಅನುಕೂಲವಾಗಲಿದೆ. ಕರ್ನಾಟಕದಲ್ಲಿ ಬೀದರ್ ಕೇಂದ್ರ ಸೇರಿ ಒಟ್ಟು ಏಳು ಆಧಾರ್ ಸೇವಾ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ ಎಂದು ಹೇಳಿದರು.

ಯುಐಡಿಎಐ ಉಪನಿರ್ದೇಶಕ ಗುಲ್ಶನ್ ಕುಮಾರ್ ಸಿಂಗ್ ಮಾತನಾಡಿ, ಬೀದರ್ ಜಿಲ್ಲೆಯ ನಿವಾಸಿಗಳಿಗೆ ಆಧಾರ್ ಸಂಬಂಧಿತ ಎಲ್ಲ ಸಮಸ್ಯೆಗಳಿಗೆ ಈ ಕೇಂದ್ರ ಪರಿಹಾರ ನೀಡಲಿದೆ ಎಂದರು.

ಸಾರ್ವಜನಿಕರು ಆನ್‌ಲೈನ್ ಮೂಲಕ ಅಪಾಯಿಂಟ್‌ಮೆಂಟ್ ಪಡೆಯಬಹುದಾಗಿದ್ದು, ನೇರವಾಗಿಯೂ ಕೇಂದ್ರಕ್ಕೆ ಭೇಟಿ ನೀಡಿ ಸೇವೆ ಪಡೆಯಬಹುದು. ಆಧಾರ್ ಸಂಬಂಧಿತ ಸಮಸ್ಯೆಗಳನ್ನು ಒಂದು ವಾರದೊಳಗೆ ಪರಿಹರಿಸುವ ವ್ಯವಸ್ಥೆ ಮಾಡಲಾಗಿದೆ ಎಂದು ತಿಳಿಸಿದರು.

ಜೂನ್ 2026ರ ಅಂತ್ಯದೊಳಗೆ ಇನ್ನೂ ಎಂಟು ಹೊಸ ಕೇಂದ್ರಗಳನ್ನು ಆರಂಭಿಸಲು ಯೋಜನೆ ರೂಪಿಸಲಾಗಿದೆ. ಈ ಕೇಂದ್ರಗಳನ್ನು ಯುಐಡಿಎಐ ನೇರವಾಗಿ ನಿರ್ವಹಿಸಲಿದ್ದು, ವೀಲ್‌ಚೇರ್ ಪ್ರವೇಶ, ವಿಶೇಷ ವಿಶ್ರಾಂತಿ ಕೊಠಡಿ ಹಾಗೂ ಕುಂದುಕೊರತೆ ಪರಿಹಾರ ವ್ಯವಸ್ಥೆ ಸೇರಿದಂತೆ ನಿವಾಸಿ ಸ್ನೇಹಿ ಸೌಲಭ್ಯಗಳನ್ನು ಕಲ್ಪಿಸಲಾಗಿದೆ ಎಂದು ಹೇಳಿದರು.

ಪ್ರತಿಯೊಂದು ಕೇಂದ್ರವನ್ನು ಎಎಸ್‌ಕೆ ವ್ಯವಸ್ಥಾಪಕರು ನಿರ್ವಹಿಸಲಿದ್ದು, ಸಾರ್ವಜನಿಕರಿಂದ ದೂರುಗಳನ್ನು ಸ್ವೀಕರಿಸಿ ಸಂಬಂಧಪಟ್ಟ ಅಧಿಕಾರಿಗಳಿಗೆ ರವಾನಿಸಿ ಸಕಾಲಿಕ ಪರಿಹಾರ ಒದಗಿಸಲಿದ್ದಾರೆ.

ಸಾರ್ವಜನಿಕರು ಯುಐಡಿಎಐ ಆಧಾರ್ ನೇಮಕಾತಿ ಪೋರ್ಟಲ್ ಮೂಲಕ ಆನ್‌ಲೈನ್‌ನಲ್ಲಿ ಅಪಾಯಿಂಟ್‌ಮೆಂಟ್ ಬುಕ್ ಮಾಡಿಕೊಳ್ಳಬಹುದು ಎಂದು ಕಚೇರಿ ಮೂಲಗಳು ತಿಳಿಸಿವೆ.

ಈ ಕಾರ್ಯಕ್ರಮದಲ್ಲಿ ಯುಐಡಿಎಐ ನ ಕರ್ನಾಟಕದ ಸಹಾಯಕ ವ್ಯವಸ್ಥಾಪಕ ಮುಹಮ್ಮದ್ ಮುಸಾಬ್, ಎಎಸ್‌ಕೆ ಸಿಬ್ಬಂದಿ ಮತ್ತು ಸೇವಾ ಪೂರೈಕೆದಾರ ಬಿಎಲ್‌ಎಸ್ ಇಂಟರ್‌ನ್ಯಾಷನಲ್ ಪ್ರತಿನಿಧಿ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

ಕಾರ್ಮಿಕ ಸಂಹಿತೆ ವಿರೋಧಿಸಿ ಸಿಐಟಿಯು ಪ್ರತಿಭಟನೆ

ಕಲಬುರಗಿ,ಮೇ.13–

ಕೇಂದ್ರ ಸರ್ಕಾರ ಜಾರಿಗೆ ತಂದಿರುವ ಪ್ರಜಾವಿರೋಧಿ ಕಾರ್ಮಿಕ ಸಂಹಿತೆಗಳನ್ನು ತಕ್ಷಣ ಹಿಂಪಡೆಯಬೇಕು ಎಂದು ಆಗ್ರಹಿಸಿ ಸಿಐಟಿಯು ಜಿಲ್ಲಾ ಸಮಿತಿಯ ಪದಾಧಿಕಾರಿಗಳು ನಗರದ ಸರ್ದಾರ ವಲ್ಲಭಭಾಯಿ ಪಟೇಲ್ ವೃತ್ತದಲ್ಲಿ ಕಾರ್ಮಿಕ ಸಂಹಿತೆಗಳ ಪ್ರತಿಕೃತಿ ದಹಿಸಿ ಪ್ರತಿಭಟನೆ ನಡೆಸಿದರು.

ಪ್ರತಿಭಟನಾಕಾರರು ಕೇಂದ್ರ ಸರ್ಕಾರದ ಕಾರ್ಮಿಕ ನೀತಿಗಳ ವಿರುದ್ಧ ತೀವ್ರ ಆಕ್ರೋಶ ವ್ಯಕ್ತಪಡಿಸಿ, ಹೊಸ ಕಾರ್ಮಿಕ ಸಂಹಿತೆಗಳು ಕಾರ್ಮಿಕರ ಹಕ್ಕುಗಳನ್ನು ಹತ್ತಿಕ್ಕುವಂತಿವೆ ಎಂದು



ಆರೋಪಿಸಿದರು.

ಸರ್ಕಾರವು ಕಾರ್ಮಿಕರ ಭದ್ರತೆ, ಉದ್ಯೋಗ ಹಕ್ಕು ಹಾಗೂ ಸಾಮಾಜಿಕ ಭದ್ರತೆಯನ್ನು ದುರ್ಬಲಗೊಳಿಸುವ ಕ್ರಮಗಳನ್ನು ಕೈಗೊಳ್ಳುತ್ತಿದೆ ಎಂದು ದೂರಿದರು.

ಕಾರ್ಮಿಕರ ಹಿತಾಸಕ್ತಿಗೆ ವಿರುದ್ಧವಾಗಿರುವ ಈ ಸಂಹಿತೆಗಳನ್ನು ತಕ್ಷಣ ರದ್ದುಪಡಿಸಿ,

ಕಾರ್ಮಿಕ ಸ್ನೇಹಿ ನೀತಿಗಳನ್ನು ಜಾರಿಗೆ ತರಬೇಕು ಎಂದು ಆಗ್ರಹಿಸಿದರು. ಅಲ್ಲದೆ, ಕಾರ್ಮಿಕ ಸಂಘಟನೆಗಳೊಂದಿಗೆ ಚರ್ಚಿಸದೆ ಏಕಪಕ್ಷೀಯವಾಗಿ ಕಾನೂನು ಜಾರಿಗೊಳಿಸಿರುವುದು ಖಂಡನೀಯ ಎಂದು ಹೇಳಿದರು.

ಪ್ರತಿಭಟನೆಯಲ್ಲಿ ಎಂ.ಬಿ. ಸಜ್ಜನ್, ಶಾಂತಾ ಘಂಟಿ, ಗೌರಮ್ಮ ಪಾಟೀಲ, ಶ್ರೀಮಂತ ಬಿರಾದಾರ ಸೇರಿದಂತೆ ಹಲವು ಮುಖಂಡರು ಹಾಗೂ ಕಾರ್ಮಿಕರು ಭಾಗವಹಿಸಿದ್ದರು.

ಕನಕಗಿರಿ ಉತ್ಸವ-2026 ಅಂಗವಾಗಿ ಕುಸ್ತಿ, ಕಬಡ್ಡಿ, ವಾಲಿಬಾಲ್ ಕ್ರೀಡಾಕೂಟ

ಕೊಪ್ಪಳ ಮೇ 13–

ಕನಕಗಿರಿ ಉತ್ಸವ-2026ರ ಅಂಗವಾಗಿ ಕನಕಗಿರಿಯಲ್ಲಿ ಮೇ 14 ಮತ್ತು 15 ರಂದು ಪುರುಷರ ಹಾಗೂ ಮಹಿಳೆಯರ ವಿಭಾಗದ ಕುಸ್ತಿ, ಕಬಡ್ಡಿ ಹಾಗೂ ವಾಲಿಬಾಲ್ ಕ್ರೀಡಾ ಕೂಟಗಳನ್ನು ಆಯೋಜಿಸಲಾಗಿದೆ.

ಕನಕಗಿರಿಯ ಕೆ.ಪಿ.ಎಸ್. ಶಾಲೆ ಮೈದಾನದಲ್ಲಿ ಮೇ 14 ರಂದು ಸಂಜೆ 3 ಗಂಟೆಗೆ ಕುಸ್ತಿ ಸ್ಪರ್ಧೆಗಳು, ಸಂಜೆ 6 ಗಂಟೆಗೆ ಕಬಡ್ಡಿ ಸ್ಪರ್ಧೆ ಹಾಗೂ ಮೇ 15 ರಂದು ಸಂಜೆ 6 ಗಂಟೆಗೆ ವಾಲಿಬಾಲ್ ಪಂದ್ಯಾವಳಿ ನಡೆಯಲಿದೆ. ಕುಸ್ತಿ ಕ್ರೀಡೆಯಲ್ಲಿ ಇರಾನ್ ದೇಶದ ಫ್ರೀ ಸ್ಟೈಲ್ ಪೈಲ್ವಾನ್ ಅಕ್ಮತ್ ಪ್ರಡೆಲ್ಲಾ ಹಾಗೂ ಸೀನಿಯರ್ ನ್ಯಾಷನಲ್ ಕುಸ್ತಿ ಚಾಂಪಿಯನ್‌ಷಿಪ್ ವಿಜೇತ ಬಸವರಾಜ್ ಪಾಟೀಲ್ ವಿಶೇಷ ಆಕರ್ಷಣೆಯಾಗಿದ್ದಾರೆ. ಕಬಡ್ಡಿ ಕ್ರೀಡೆಯಲ್ಲಿ ಪ್ರೋ-ಕಬಡ್ಡಿ ಲೀಗ್‌ನ ಬೆಂಗಳೂರು ಬುಲ್ಸ್ ಮತ್ತು ಯು.ಪಿ. ಯೋಧ ತಂಡಗಳಲ್ಲಿ ಮಿಂಚಿದ ವಿವಿಧ ಆಟಗಾರರು ಪಾಲ್ಗೊಳ್ಳಲಿದ್ದಾರೆ. ವಾಲಿಬಾಲ್ ಕ್ರೀಡೆಯಲ್ಲಿ ರಾಷ್ಟ್ರ ಮಟ್ಟದಲ್ಲಿ ಉತ್ತಮ ಪ್ರದರ್ಶನ ತೋರಿದ ವಾಲಿಬಾಲ್ ಕ್ರೀಡಾ ಪಟುಗಳು ಭಾಗವಹಿಸುತ್ತಿದ್ದಾರೆ.

ಕುಸ್ತಿ ಕ್ರೀಡೆಗೆ ವಿಶ್ವನಾಥ ಮೊ.ಸಂ: 8660455969, ಹನುಮಂತ ಮರಿಯಮ್ಮನಹಳ್ಳಿ ಅವರನ್ನು, ಕಬಡ್ಡಿ ಕ್ರೀಡೆಗೆ ಶರಣು ಗಾಡಗೊಳ್ಳಿ ಮೊ.ನಂ.: 8861116673, ಶರಣು ಬಂಡಿಹಾಳ ಮೊ.ಸಂ.: 9591292420, ರೋಹಿಣಿ ಪರ್ವತೀಕರ್ ಮೊ.ಸಂ: 8217324522, ವಾಲಿಬಾಲ್ ಕ್ರೀಡೆಗೆ ವಾಲಿಬಾಲ್ ಅಸೋಷಿಯೇಶನ್ ಕಾರ್ಯದರ್ಶಿ ರಾಜು ಜವಳಿ ಮೊ.ಸಂ: 6360357108 ಹಾಗೂ ಸುರೇಶ ಮೊ.ಸಂ: 9901527333 ಇವರನ್ನು ಮೇಲ್ವಿಚಾರಕರನ್ನಾಗಿ ನಿಯೋಜಿಸಲಾಗಿದೆ ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕೊಪ್ಪಳ ಜಿಲ್ಲೆಯ ತೋಟಗಾರಿಕೆ ಇಲಾಖೆಯ ಮಾವಿನ ಮೇಳಕ್ಕೆ 10 ವರ್ಷ; ಹಲವು ವಿಶೇಷ





ಕೊಪ್ಪಳ ಮೇ 13–

ತೋಟಗಾರಿಕೆ ಇಲಾಖೆ ವತಿಯಿಂದ ಮೇ 12 ರಿಂದ ಮೇ 22ರ ವರೆಗೆ 10 ದಿನಗಳ ಕಾಲ ಕೊಪ್ಪಳ ನಗರದಲ್ಲಿನ ತೋಟಗಾರಿಕೆ ಜಂಟಿ ನಿರ್ದೇಶಕರ ಕಛೇರಿ ಆವರಣದಲ್ಲಿ ಆಯೋಜಿಸಲಾದ 10ನೇ ವರ್ಷದ ಮಾವು ಮೇಳಕ್ಕೆ ಮೇ 12ರಂದು ಚಾಲನೆ ಸಿಕ್ಕಿತು. ಈ ಮೇಳವು ಹಲವಾರು ವಿಶೇಷತೆಗಳನ್ನು ಹೊಂದಿದೆ.

ದಶಕದ ಮಾವು ಮೇಳದ ಫಲವಾಗಿ ಕೊಪ್ಪಳ ಜಿಲ್ಲೆಯಲ್ಲಿ ಈಗಾಗಲೇ 6500 ಕ್ಕೂ ಹೆಚ್ಚು ಹೆಕ್ಟೇರ್ ಪ್ರದೇಶದಲ್ಲಿ ವಿವಿಧ ತಳಿಯ ಮಾವಿನ ಹಣ್ಣಿನ ಬೆಳೆಗಳನ್ನು ಬೆಳೆಯುತ್ತಿದ್ದು ಇವುಗಳಲ್ಲಿ ಮುಖ್ಯವಾಗಿ ಕೇಸರ್ ತಳಿಯು ಅತ್ಯಂತ ಬೇಡಿಕೆಯ ತಳಿಯಾಗಿದೆ ಹಾಗೂ ದಶಹರಿ, ತೋತಾಪೂರಿ, ಮಲ್ಲಿಕಾ, ಬೆನೆಶಾನ್, ಸಿಂಧೂರಿ, ಇಮಾಮ ಪಸಂದ, ಉಪ್ಪಿನಕಾಯಿ ತಳಿಗಳನ್ನು ಬೆಳೆಯತ್ತಿದ್ದು, ರೈತರ ಅನುಕೂಲಕ್ಕಾಗಿ ಹಾಗೂ ಗ್ರಾಹಕರಿಗೆ ಯೋಗ್ಯ ಬೆಲೆಗೆ ಗುಣಮಟ್ಟದ ಹಣ್ಣುಗಳನ್ನು ಮಾರಾಟ ಮಾಡಲು ರೈತರಿಂದ ನೇರವಾಗಿ ಗ್ರಾಹಕರಿಗೆ ತಲುಪಿಸಲು ಈ ಮೇಳವನ್ನು ಆಯೋಜಿಸಲಾಗಿದೆ. ಈ ಮೇಳದಲ್ಲಿ ಕೊಪ್ಪಳದಲ್ಲಿ ರೈತರು ಬೆಳೆದ ಜಗತ್ತಿನ ದುಬಾರಿ ಮಾವು ಮಿಯಾಜಾಕಿ ಮಾವನ್ನು ಮಾರಾಟಕ್ಕೆ ಇಡಲಾಗಿದೆ.

ಈ ಮೇಳದಲ್ಲಿ ಹಿಂದಿನ ಮೇಳಕ್ಕಿಂತಲೂ 100ಕ್ಕೂ ಹೆಚ್ಚಿನ ರೈತರು ಭಾಗವಹಿಸಲು ಪೈಪೋಟಿ ಮೇಲೆ ತಾವು ಬೆಳೆದ ಹಣ್ಣುಗಳನ್ನು ಮಾರಾಟ ಮಾಡಲು ಸ್ಟಾಲ್‌ಗಳನ್ನು ನೊಂದಾಯಿಸಿರುತ್ತಾರೆ. ವರ್ಷದಿಂದ ವರ್ಷಕ್ಕೆ ಸಾರ್ವಜನಿಕರಿಗೆ ನೇರವಾಗಿ ಮಾರಾಟ ಮಾಡಲು ರೈತರು ಹೆಚ್ಚಾಗಿ ಮೇಳದಲ್ಲಿ ಭಾಗವಹಿಸುತ್ತಿದ್ದಾರೆ.

★ವಿವಿಧ ಮಾವಿನ ತಳಿಯ ಹಣ್ಣು, ಉತ್ಪನ್ನಗಳು:★

ಈ ಮೇಳದಲ್ಲಿ ಮೇಳದಲ್ಲಿ ಕೇಸ್ರ್, ಬೆನೆಶಾನ್, ದಶಹರಿ, ರಸಪುರಿ, ಸ್ವರ್ಣರೇಖಾ, ಇಮಾಮ ಪಸಂಧ, ಆಪೋಸು, ಮಲ್ಲಿಕಾ, ತೋತಾಪೂರಿ, ಪುನಾಸ್ ಸೇರಿದಂತೆ 200ಕ್ಕೂ ಅಧಿಕ ವಿವಿಧ ಮಾವಿನ ತಳಿಗಳನ್ನು ಹಾಗೂ ಉಪ ಉತ್ಪನ್ನಗಳು ಹಾಗೂ ಮೌಲ್ಯವರ್ಧಿತ ಉತ್ಪನ್ನಗಳು ಪ್ರದರ್ಶನದಲ್ಲಿಡಲಾಗಿದೆ. ಜೊತೆಗೆ ತೋಟಗಾರಿಕೆ ಕ್ಷೇತ್ರದಲ್ಲಿ ಬೆಳೆದ ಮಾವಿನ ವಿವಿಧ ತಳಿಗಳನ್ನು ಸಹ ಪ್ರದರ್ಶನ ಮತ್ತು ಮಾರಾಟಕ್ಕಿಡಲಾಗಿದೆ.

★ಮಾವಿನ ಸೀಕರಣೆ ಲಭ್ಯ:★

ಈ ಮೇಳದಲ್ಲಿ ಮಾವಿನ ಹಣ್ಣಿನ ರುಚಿಕರವಾದ ಸೀಕರಣೆಯನ್ನು ಸಹ ಮಾರಾಟ ಮಾಡಲಾಗುತ್ತಿದೆ ಹಾಗೂ ಉಪ್ಪಿನಕಾಯಿ ಮಾವನ್ನು ಸಹ ಮಾರಾಟ ಮಾಡಲಾಗುತ್ತಿದ್ದು, ರೈತರೇ ತಯಾರಿಸಿದ ಉಪ್ಪಿನಕಾಯಿಗಳನ್ನು ಆಕರ್ಷಕವಾದ ಬಾಟಲ್‌ಗಳಲ್ಲಿ ಪ್ಯಾಕಿಂಗ್ ಮಾಡಿ ಮಾರಾಟ ಮಾಡಲಾಗುತ್ತಿದೆ.

★ಗಮನ ಸೆಳೆದ ದುಬಾರಿ ಮಾವು 'ಮೀಯಾಜಾಕಿ'

ಈ ಮೇಳದದಲ್ಲಿ ಕೊಪ್ಪಳದ ರೈತರು ಬೆಳೆದ ಪ್ರಪಂಚದ ಅತ್ಯಂತ ದುಬಾರಿ ಮಾವಿನ ಹಣ್ಣಾದ ''ಮೀಯಾಜಾಕಿ'' ಎಂಬ ಜಪಾನ ತಳಿಯ ಹಣ್ಣನ್ನು ಪ್ರದರ್ಶನಕ್ಕೆ ಇಡಲಾಗಿದೆ ಹಾಗೂ ಮಾರಾಟ ಮಾಡಲಾಗುತ್ತಿದೆ. ಈ ಮಾವಿನ ತಳಿಯ ಬೆಲೆಯು 1 ಕೆ.ಜಿ.ಗೆ ರೂ. 2.50 ಲಕ್ಷ ಬೆಲೆ ಬಾಳುತ್ತದೆ. ಆದರೆ ಈ ತಳಿಯನ್ನು ಕೊಪ್ಪಳದಲ್ಲಿಯೇ ಬೆಳೆಯುತ್ತಿರುವುದರಿಂದ ಇದರ ಬೆಲೆಯನ್ನು ಪ್ರತಿ ಕೆ.ಜಿ.ಗೆ ರೂ. 2500 ರಿಂದ 3000 ರ ವರೆಗೂ ದರವನ್ನು ನಿಗದಿಪಡಿಸಲಾಗಿದೆ. ಈಗಾಗಲೇ ಸಾಕಷ್ಟು ಗ್ರಾಹಕರು ಮುಂಗಡವಾಗಿ ಖರೀದಿಸಲು ಹಣ ಪಾವತಿಸಿರುತ್ತಾರೆ.

★ಮಾವು ಮೇಳಕ್ಕೆ ದಶಕ; ಛಾಯಾಚಿತ್ರಗಳ ಪ್ರದರ್ಶನ:★

10 ವರ್ಷಗಳ ಕಾಲ ಮಾವು ಮೇಳದ ನಡೆದು ಬಂದ ದಾರಿ ಕುರಿತು ಪ್ರತಿ ವರ್ಷ ಮಾವು ಮೇಳದ 2016 ರಿಂದ 2026ರ ವರೆಗಿನ ಛಾಯಾಚಿತ್ರಗಳನ್ನು ಈ ಮೇಳದಲ್ಲಿ ಪ್ರದರ್ಶನಕ್ಕಿಡಲಾಗಿದೆ.

★ಸಾರ್ವಜನಿಕರಿಗೆ ಮನವಿ:★

ಈ ಮೇಳದಲ್ಲಿ 15 ಕ್ಕೂ ಹೆಚ್ಚಿನ ಮಾವಿನ ತಳಿಗಳನ್ನು ರೈತರು ನೇರವಾಗಿ ಮಾರಾಟ ಮಾಡುವ ಅನುಕೂಲ ಕಲ್ಪಿಸಲಾಗಿದೆ ಹಾಗೂ ಮೇಳದಲ್ಲಿ ಸಾವಯವದಲ್ಲಿ ಬೆಳೆದ ಹಾಗೂ ದೃಢೀಕರಣದ ಪ್ರಮಾಣ ಪತ್ರ ಹೊಂದಿದ ರೈತರು ಸಹಮಾವಿನ ಹಣ್ಣುಗಳನ್ನು ಮಾರಾಟ ಮಾಡಲು ಭಾಗವಹಿಸಿರುತ್ತಾರೆ. ಈ ಮೇಳದಲ್ಲಿ ವಿವಿಧ ತಳಿಗೆ ಯೋಗ್ಯ ಬೆಲೆಯನ್ನು ನಿರ್ಧರಿಸಲಾಗಿದ್ದು, ಇದರಿಂದ ಸಾರ್ವಜನಿಕರು ಮಾವು ಮೇಳದಲ್ಲಿ ಭಾಗವಹಿಸಿ ರೈತರ ಆದಾಯ ಹೆಚ್ಚಿಸಬೇಕೆಂದು ಕೊಪ್ಪಳ ತೋಟಗಾರಿಕೆ ಇಲಾಖೆಯು ಕೋರಿದೆ.

★ರೈತರಿಗೆ ಉಚಿತ ಸ್ಟಾಲ್‌ಗಳ ವ್ಯವಸ್ಥೆ:★

ಈ ಮೇಳದಲ್ಲಿ ಭಾಗವಹಿಸಲು 100ಕ್ಕೂ ಹೆಚ್ಚಿನ ರೈತರು ನೇರವಾಗಿ ನೊಂದಾಯಿಸಿರುತ್ತಾರೆ. ರೈತರಿಗಾಗಿ ಉಚಿತವಾಗಿ 30ಕ್ಕೂ ಹೆಚ್ಚಿನ ಸ್ಟಾಲ್‌ಗಳನ್ನು ನಿರ್ಮಿಸಿ ಕೊಡಲಾಗಿದೆ ಮತ್ತು ಪ್ರದರ್ಶನದಲ್ಲಿ 100ಕ್ಕೂ ಹೆಚ್ಚಿನ ದೇಶಿ ಮತ್ತು ವಿದೇಶಿ ಮಾವಿನ ತಳಿಗಳನ್ನು ಸುಸಜ್ಜಿತವಾಗಿ ಪ್ರದರ್ಶನದಲ್ಲಿಡಲಾಗಿದೆ. 10ಕ್ಕೂ ಹೆಚ್ಚಿನ ತೋಟಗಾರಿಕೆ ರೈತ ಉತ್ಪಾದಕ ಕಂಪನಿಗಳಲ್ಲದೇ ಜಿಲ್ಲಾ ಹಾಪಕಾಮ್ಸ್ ಸಂಸ್ಥೆಗಳಿಗೆ ಮಾವಿನ ಹಣ್ಣು ಮಾರಲು ಸ್ಟಾಲ್‌ಗಳ ವ್ಯವಸ್ಥೆ ಮಾಡಲಾಗಿದೆ. ರೈತ ಉತ್ಪಾದಕ ಕಂಪನಿಗಳು ಹಾಗೂ ಜಿಲ್ಲಾ ಹಾಪಕಾಮ್ಸ್ ಕೊಪ್ಪಳ ನೂರಾರು ಸದಸ್ಯ ರೈತರಿಂದ ಮಾವಿನ ಹಣ್ಣುಗಳನ್ನು ಖರೀದಿಸಿ ಈ ಮೇಳದಲ್ಲಿ ಮಾರಾಟ ಮಾಡುವುದರಿಂದ ಈ ಮೇಳದಲ್ಲಿ ನೇರವಾಗಿ ಭಾಗವಹಿಸದ ರೈತರಿಗೂ ಅನುಕೂಲವಾಗಿ ಯೋಗ್ಯ ಬೆಲೆ ಸಿಗುವಂತಾಗಿದೆ.

★ನೈಸರ್ಗಿಕವಾಗಿ ಹಣ್ಣು ಮಾಗಿಸುವ ಪಂಚ್ ಹೋಲ್ ಪೌಚ್‌ಗಳ ಪರಿಚಯ:★

ಈ ಮೇಳದಲ್ಲಿ ಮಾವಿನ ಹಣ್ಣುಗಳನ್ನು ನೈಸರ್ಗಿಕವಾಗಿ ಹಾಗೂ ವೈಜ್ಞಾನಿಕವಾಗಿ ಮಾಗಿಸುವ ಕುರಿತು ಭಾರತೀಯ ತೋಟಗಾರಿಕೆ ಸಂಶೋಧನಾ ಸಂಸ್ಥೆ (), ಹೆಸರಘಟ್ಟ, ಬೆಂಗಳೂರು ರವರು ಅಭಿವೃದ್ಧಿಪಡಿಸಿರುವ ಹಣ್ಣು ಮಾಗಿಸುವ ಘಟಕಗಳನ್ನು ರೈತರಿಗೆ ಇಲಾಖೆಯು ಸಹಾಯಧನದ ಮೂಲಕ ಮಾವು ಬೆಳೆಯುವ ರೈತರಿಗೆ ನೀಡಲಾಗಿದೆ. ನೈಸರ್ಗಿಕವಾಗಿ ಹಣ್ಣುಗಳನ್ನು ಮಾಗಿಸಲು ''ಎನ್-ರೈಪ್ (-)''ಎಂಬ ನೈಸರ್ಗಿಕವಾಗಿ ಹಣ್ಣು ಮಾಗಿಸುವ ಪಂಚ್ ಹೋಲ್ ಪೌಚ್ ಗಳನ್ನು ರೈತರಿಗೆ ಪರಿಚಯಿಸಲಾಗುತ್ತಿದೆ. ಈ ಪೌಚ್‌ನ್ನು ಹೋಲ್ ಮಾಡಿ 10 ಕೆ.ಜಿ. ಮಾವಿನ ಕಾಯಿಯ ಕೆಳಗಡೆ ಇಟ್ಟಾಗ 48 ಗಟೆಗಳಲ್ಲಿ ಗುಣಮಟ್ಟದ ಆರೋಗ್ಯಕರ ಮಾವಿನ ಕಾಯಿಗಳು ಒಂದೇ ರೀತಿಯ ಬಣ್ಣ ಹೊಂದಿ ಹಣ್ಣಾಗುತ್ತವೆ. ಇದು ನೈಸರ್ಗಿಕವಾದ ಇಥಲಿನ್ ಹೊಂದಿರುತ್ತದೆ. ಈ ಪೌಚ್‌ಗೆ ರೈತರಿಂದ ಸಾಕಷ್ಟು ಬೇಡಿಕೆ ವ್ಯಕ್ತವಾಗುತ್ತಿದೆ.

★ಆಸಕ್ತ ರೈತರಿಗೆ ಮಾವು ಬೆಳೆಯುವ ಬಗ್ಗೆ ಮಾಹಿತಿ:★

ಈ ಮೇಳದಲ್ಲಿ ಮಾವು ಬೆಳೆಯಲು ಆಸಕ್ತಿ ಹೊಂದಿದ ರೈತರಿಗೆ ಮಾವನ್ನು ಬೆಳೆಯುವ ಬಗ್ಗೆ ಹೊಸ ತಂತ್ರಜ್ಞಾನಗಳು ಹಾಗೂ ಮಾರುಕಟ್ಟೆ, ಗುಣಮಟ್ಟದ ಮಾವು ಮತ್ತು ಇಳುವರಿ ಹೇಗೆ ತೆಗೆಯಬೇಕೆಂಬುದರ ಬಗ್ಗೆಯೂ ತಿಳಿಸಿಕೊಡಲಾಗುತ್ತಿದೆ. ಸಾವಯವ ಪದ್ಧತಿಯಲ್ಲಿ ಮಾವು ಬೆಳೆಯುವ ಬಗ್ಗೆ ಹಾಗೂ ವಿವಿಧ ವಿದೇಶಿ ಮಾರುಕಟ್ಟೆಗಳಿಗೆ ರಫ್ತು ಮಾಡುವ ಕುರಿತು ಮಾಹಿತಿಯನ್ನು ಸಹ ನೀಡಲಾಗುತ್ತಿದೆ.

★'ಕೊಪ್ಪಳ ಕೇಸ್‌ರ್' ಮಾವಿನ ಜನಪ್ರಿಯತೆ ಹೆಚ್ಚಿಸಲು ಕ್ರಮ:★

''ಕೊಪ್ಪಳ ಕೇಸರ್ ಮಾವು'' ಬ್ರ್ಯಾಂಡ್‌ನ ಬಾಕ್ಸ್‌ಲ್ಲಿನ ಕೊಪ್ಪಳ ಕೇಸರ್ ಮಾವಿನ ಹಣ್ಣುಗಳಿಗೆ ಹೆಚ್ಚಿನ ಬೇಡಿಕೆ ಇದ್ದು, ಸಾರ್ವಜನಿಕರಿಗೆ ಬಾಕ್ಸ್‌ಲ್ಲಿನ ಹಣ್ಣುಗಳನ್ನು ಸಿಗುವಂತೆ ಅನುಕೂಲ ಮಾಡಲಾಗಿದೆ. ಇದರಿಂದ ಕೊಪ್ಪಳ ಕೇಸರ್ ಮಾವು ಹೆಚ್ಚು ಜನಪ್ರಿಯವಾಗಿದೆ. ಅಲ್ಲದೇ ಸಾರ್ವಜನಿಕರು ಬಾಕ್ಸ್‌ಗಳನ್ನು ಮೆಚ್ಚಿಕೊಂಡಿರುತ್ತಾರೆ. ಈ ಬಾಕ್ಸ್‌ಗಳನ್ನು ರೈತರಿಗೆ ಆರ್.ಕೆ.ವಿ.ವಾಯ್. ಯೋಜನೆಯಡಿ ಸಹಾಯಧನದ ರೂಪದಲ್ಲಿ ನೀಡಲಾಗುತ್ತಿದೆ.

ಇದಲ್ಲದೇ ಮಾವಿನ ಹಣ್ಣುಗಳಲ್ಲಿ ಲಭ್ಯವಿರುವ ಪೋಷಕಾಂಶಗಳು, ಖನಿಜಗಳು ಮತ್ತು ಅವುಗಳ ಆರೋಗ್ಯದ ಬಗ್ಗೆ ಮಹತ್ವ ತಿಳಿಸುವ ಬ್ಯಾನರ್‌ಗಳನ್ನು ಪ್ರದರ್ಶಿಸಲಾಗುತ್ತಿದ್ದು, ಗ್ರಾಹಕರಿಗೆ ಇದೊಂದು ವಿಶಿಷ್ಟ ಅನುಭವ ನೀಡಬಲ್ಲದಾಗಿದೆ.

ಆಕರ್ಷಕ ಸೆಲ್ಫಿ ಪಾಯಿಂಟ್:

ಈ ಮೇಳದಲ್ಲಿ ಮಕ್ಕಳು ಮತ್ತು ಸಾರ್ವಜನಿಕರಿಗೆ ಆಕರ್ಷಕ ಸೆಲ್ಫಿ ಪಾಯಿಂಟ್ ನಿರ್ಮಿಸಲಾಗಿದೆ. ಈ ಸೆಲ್ಫಿ ಪಾಯಿಂಟ್ ಮಾವಿನ ಮಾದರಿ ಹೊಂದಿದ್ದು, ಅತ್ಯಾಕರ್ಷಣೆವಾಗಿ ಜನರನ್ನು ಆಕರ್ಷಿಸುತ್ತಿದೆ.

''ಕೊಪ್ಪಳ ಜಿಲ್ಲೆಯ ತೋಟಗಾರಿಕೆ ಕ್ಷೇತ್ರವು ಪ್ರತಿ ವರ್ಷ ಹೆಚ್ಚುತ್ತಲಿದ್ದು, ಈಗಾಗಲೇ 6500ಕ್ಕೂ ಹೆಚ್ಚು ಹೆಕ್ಟೇರ್ ಪ್ರದೇಶದಲ್ಲಿ ಮಾವು ಬೆಳೆಯಲಾಗುತ್ತಿದೆ. ರೈತರ ಅನುಕೂಲಕ್ಕಾಗಿ ಮತ್ತು ಗ್ರಾಹಕರಿಗೆ ಯೋಗ್ಯ ಬೆಲೆಗೆ ಗುಣಮಟ್ಟದ ಹಣ್ಣುಗಳನ್ನು ಮಾರಾಟ ಮಾಡಲು ರೈತರಿಂದ ನೇರವಾಗಿ ಗ್ರಾಹಕರಿಗೆ ತಲುಪಿಸಲು ಪ್ರತಿ ವರ್ಷ ಮಾವು ಮೇಳವನ್ನು ಆಯೋಜಿಸಲಾಗುತ್ತಿದೆ.

ಈ ಬಾರಿಯ ಕೊಪ್ಪಳ ಮಾವು ಮೇಳವು ಮೇ 12 ರಿಂದ ಮೇ 22ರ ವರೆಗೆ 10 ದಿನಗಳ ಕಾಲ ತೋಟಗಾರಿಕೆ ಇಲಾಖಾ ಆವರಣದಲ್ಲಿ ನಡೆಯುತ್ತಿದ್ದು, ಬೇಡಿಕೆ ಅನುಸಾರ 10 ದಿನಗಳಿಗೂ ಹೆಚ್ಚಿನ ದಿನಗಳ ಕಾಲ ನೆಡೆಸಲು ಮುಂದಿನ ದಿನಗಳಲ್ಲಿ ತೀರ್ಮಾನಿಸಲಾಗುವುದು. ಮಾವು ಮೇಳದಲ್ಲಿ ಜಿಲ್ಲೆಯ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ, ಯಶಸ್ವಿಗೊಳಿಸಬೇಕು.'' – ಕೃಷ್ಣ ಸಿ. ಉಕ್ಕುಂದ, ತೋಟಗಾರಿಕೆ ಜಂಟಿ ನಿರ್ದೇಶಕರು, ಕೊಪ್ಪಳ.

ಕನಕಗಿರಿ ಉತ್ಸವದಲ್ಲಿ ಸಾರ್ವಜನಿಕರಿಗಾಗಿ ವೈವಿಧ್ಯಮಯ ಕಾರ್ಯಕ್ರಮಗಳು: ಡಾ.ಸುರೇಶ ಬಿ ಇಟ್ನಾಳ



ಕೊಪ್ಪಳ ಮೇ 13–

ಜಿಲ್ಲಾಡಳಿತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಮೇ 16 ಮತ್ತು ಮೇ 17ರಂದು ನಿಗದಿಯಾದ, ಕನಕಗಿರಿಯ ಗತವೈಭವದ ಬಿಂಬಿಸುವ ಕನಕಗಿರಿ ಉತ್ಸವ-2026ಕ್ಕೆ ಅಂತಿಮ ಹಂತದ ಸಿದ್ಧತೆಗಳು ಯುದ್ದೋಪಾದಿಯಲ್ಲಿ ಸಾಗಿದೆ ಎಂದು ಕನಕಗಿರಿ ಉತ್ಸವ 2026ರ ಆಚರಣಾ ಸಮಿತಿಯ ಅಧ್ಯಕ್ಷರು ಆಗಿರುವ ಜಿಲ್ಲಾಧಿಕಾರಿಗಳಾದ ಡಾ.ಸುರೇಶ ಬಿ ಇಟ್ನಾಳ ಅವರು ತಿಳಿಸಿದರು. ಜಿಲ್ಲಾಡಳಿತ ಭವನದಲ್ಲಿ ಮೇ 12ರಂದು ಪತ್ರಿಕಾಗೋಷ್ಠಿ ನಡೆಸಿ ಮಾತನಾಡಿದ ಅವರು, ಉತ್ಸವದ ನಿಮಿತ್ತ ಮೇ 14 ಮತ್ತು ಮೇ 15ರಂದು ವಾಲಿಬಾಲ್, ಕಬಡ್ಡಿ ಮತ್ತು ಕುಸ್ತಿ ಪಂದ್ಯಗಳು ನಡೆಯಲಿವೆ. ಮೇ 16ರಂದು ಎದುರು ಹನುಮಪ್ಪ ದೇವಸ್ಥಾನದಿಂದ ಕನಕಾಚಲಪತಿ ದೇವಾಲಯದವರೆಗೆ ಸುಮಾರು 40 ಕಲಾ ತಂಡಗಳಿದ ಮೆರವಣಿಗೆ ನಡೆಯಲಿದೆ. ಅಂದು ಸಂಜೆ 6.30ಕ್ಕೆ ಮುಖ್ಯಮಂತ್ರಿಗಳು ಉತ್ಸವವನ್ನು ಉದ್ಘಾಟಿಸುವರು. ಮಾನ್ಯ ಮುಖ್ಯಮಂತ್ರಿಗಳು, ಉಪ ಮುಖ್ಯಮಂತ್ರಿಗಳು, ಸಚಿವರು, ಸಂಸದರು, ಶಾಸಕರು ಸೇರಿದಂತೆ ಎಲ್ಲ ಗಣ್ಯ ಮಹನಿಯರಿಗೆ ಕಾರ್ಯಕ್ರಮಕ್ಕೆ ಆಹ್ವಾನ ನೀಡಲಾಗುತ್ತಿದೆ.

ಮೇ 16ರಂದು ಮೊದಲನೇ ದಿನ ಖ್ಯಾತ ಚಲನಚಿತ್ರ ನಟ ಶ್ರೀ ಮುರಳಿ, ಗಾಯಕರಾದ ಸಂಚಿತ್ ಹೆಗಡೆ, ಸವಾರಿ ಬ್ಯಾಂಡ್ ಮತ್ತು ಡಿಕೆಡಿ ಡ್ಯಾನ್ಸ್ ತಂಡದಿದ ವೈವಿಧ್ಯಮಯ ಕಾರ್ಯಕ್ರಮಗಳು ನಡೆಯಲಿವೆ.

ಮೇ 17ರಂದು ಸಂಜೆ 6.30ಕ್ಕೆ ಸಮಾರೋಪ ಸಮಾರಂಭ ನಡೆಯಲಿದೆ. ಎರಡನೇ ದಿನ ಚಲನಚಿತ್ರ ನಟ ಡಾಲಿ ಧನಂಜಯ, ಚಲನಚಿತ್ರ ನಟಿ ಸಪ್ತಮಿ ಗೌಡ, ಗಾಯಕರಾದ ಅರ್ಜುನ ಜನ್ಯ, ಸಾಧ್ವಿನಿ ಕೊಪ್ಪ, ಐಶ್ವರ್ಯ ರಂಗರಾಜನ್ಯ ಅವರಿಂದ ವಿವಿಧ ಕಾರ್ಯಕ್ರಮಗಳು ನಡೆಯಲಿವೆ. ಕೂಹು ನಾಟಕ ಪ್ರದರ್ಶನ ಕೂಡ ಇರುತ್ತದೆ. ಮೇ 16 ಮತ್ತು ಮೇ 17ರಂದು ಎರಡೂ ದಿನವೂ ಕಾರ್ಯಕ್ರಮದ ಸ್ಥಳದಲ್ಲಿ ಮೈಸೂರ ದಸರಾ ಉತ್ಸವದ ಮಾದರಿಯಲ್ಲಿ ಆಕರ್ಷಕ ಡ್ರೋನ್ ಶೋ ನಡೆಯಲಿದೆ ಇರುತ್ತದೆ.

ಮುಖ್ಯ ವೇದಿಕೆ ರಾಜ ಉಡಚಪ್ಪ ನಾಯಕ ಮತ್ತು ಉಪ ವೇದಿಕೆ ಜಯತೀರ್ಥ ರಾಜಪುರೋಹಿತ ವೇದಿಕೆಯಲ್ಲಿ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯುತ್ತವೆ. ಮೇ 16ರಂದು ಕನಕಗಿರಿ ಪರಂಪರೆ ಮತ್ತು ಪ್ರಗತಿ ಮೇಲೆ ವಿಚಾರಗೋಷ್ಠಿ ನಡೆಯಲಿದೆ. ಮೇ 17ರಂದು ಮಹಿಳೆ ವರ್ತಮಾನದ ತಲ್ಲಣಗಳು ವಿಷಯದ ಮೇಲೆ ಮಹಿಳಾಗೋಷ್ಠಿ ನಡೆಯಲಿದೆ.

ಸಾರ್ವಜನಿಕರಲ್ಲಿ ಮನವಿ: ಕನಕಗಿರಿ ಉತ್ಸವವು ಈ ಬಾರಿ ಬೇರೆ ಬೇರೆ ವಿಶೇಷತೆಗಳನ್ನು ಹೊಂದಿದೆ. ಉತ್ಸವಕ್ಕೆ ಆಗಮಿಸಲಿರುವ ಜನತೆಗೆ ಊಟದ ವ್ಯವಸ್ಥೆ ಕಲ್ಪಿಸಲಾಗಿದೆ. ಬಸ್ಸಿನ ವ್ಯವಸ್ಥೆಯನ್ನು ಸಹ ಮಾಡಲಾಗಿದೆ. ಪುಸ್ತಕ ಪ್ರಾಧಿಕಾರದಿಂದ ಪುಸ್ತಕ ಮಳಿಗೆ, ವಿವಿಧ ಇಲಾಖೆಗಳಿಂದ ಸರ್ಕಾರದ ವಿವಿಧ ಯೋಜನೆಗಳ ಮಾಹಿತಿಯ ಮಳಿಗೆಗಳು, ಸ್ವಸಹಾಯ ಸಂಘಗಳಿದ ಕರಕುಶಲ ವಸ್ತುಗಳ ಪ್ರದರ್ಶನ ಮತ್ತು ಮಾರಾಟ ಮಳಿಗೆಗಳು, ತೋಟಗಾರಿಕಾ ಇಲಾಖೆಯಿಂದ ಫಲಪುಷ್ಪ ಪದರ್ಶನ ಸೇರಿದಂತೆ ನಾನಾ ವಿಶೇಷತೆಯ ಉತ್ಸವಕ್ಕೆ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಬೇಕು ಎಂದು ಜಿಲ್ಲಾಧಿಕಾರಿಗಳಾದ ಡಾ.ಸುರೇಶ ಇಟ್ನಾಳ ಅವರು ಕೊಪ್ಪಳ ಜಿಲ್ಲೆಯ ಸಾರ್ವಜನಿಕರಲ್ಲಿ ಮನವಿ ಮಾಡಿದರು.

ಪತ್ರಿಕಾಗೋಷ್ಠಿಯಲ್ಲಿ ಅಪರ ಜಿಲ್ಲಾಧಿಕಾರಿಗಳಾದ ಸಿದ್ರಾಮೇಶ್ವರ, ಸಹಾಯಕ ಆಯುಕ್ತರಾದ ಕ್ಯಾಪ್ಟನ್ ಮಹೇಶ ಮಾಲಗಿತ್ತಿ ಉಪಸ್ಥಿತರಿದ್ದರು.

ಒಂದನೇಯ ಪುಟದಿಂದ

ಪೌರ ಕಾರ್ಮಿಕರಿಗೆ ಆರೋಗ್ಯ ತಪಾಸಣೆ ಶಿಬಿರ

ಪೌರ ಕಾರ್ಮಿಕರು ಆರೋಗ್ಯ ವಿಮೆಯ ಸೌಲಭ್ಯ ಪಡೆಯಿರಿ: ಅಶೋಕ ಸಾಲಪ್ಪ

ಪ್ರಯತ್ನ ಮಾಡಲಾಗುತ್ತಿದೆ. ರಾಯಚೂರು ಜಿಲ್ಲೆಯು ಬಹಳಷ್ಟು ಬದಲಾವಣೆ ಆಗಿದೆ. ಮುಂದೆಯೂ ಇನ್ನಷ್ಟು ಹೆಚ್ಚಿನ ಮಟ್ಟದಲ್ಲಿ ಬದಲಾವಣೆ ಮಾಡೋಣ, ಪೌರ ಕಾರ್ಮಿಕರು ಕೆಲಸದ ಎಲ್ಲಾ ಸುರಕ್ಷತಾ ಸಾಮಾಗ್ರಿಗಳನ್ನು ಬಳಸಿಕೊಂಡು ಕೆಲಸ ಮಾಡಬೇಕು ಎಂದರು.

ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತ ಜುಬಿನ್ ಮೊಹೊಪಾತ್ರ ಅವರು ಮಾತನಾಡಿ, ಹಿಂದಿನ ವರ್ಷದಲ್ಲಿ ಬ್ಯಾಂಕ್ ಆಫ್ ಬರೋಡಾದೊಂದಿಗೆ ಒಪ್ಪಂದ ಮಾಡಿಕೊಂಡು ಪೌರ ಕಾರ್ಮಿಕರಿಗೆ ವಿಮೆ ಮಾಡಿಸಲಾಗಿದೆ. ಪೌರ ಕಾರ್ಮಿಕರ ಶ್ರಮದಿಂದ ರಾಯಚೂರು ನಗರ ಸ್ವಚ್ಛವಾಗಿ ಕಾಣಲು ಸಾಧ್ಯವಾಗಿದೆ. ರಾಯಚೂರು ಉತ್ಸವ ಕಾರ್ಯಕ್ರಮದಲ್ಲಿ ಪೌರ ಕಾರ್ಮಿಕರ ಕಾರ್ಯ ಮೆಚ್ಚುವಂತದ್ದು ಆಗಿತ್ತು. ತಮ್ಮ ಆರೋಗ್ಯದ ಕಡೆಗೂ ಹೆಚ್ಚಿನ ಗಮನ ಕೊಡುವದರ ಜೊತೆಗೆ ರಾಯಚೂರು ನಗರವನ್ನು ಸ್ವಚ್ಛ ಹಾಗೂ ಹಸಿರು ನಗರವನ್ನಾಗಿ ಮಾಡಲು ಎಲ್ಲರೂ ಶ್ರಮಿಸೋಣ ಎಂದರು.

ಸಫಾಯಿ ಕರ್ಮಚಾರಿ ಅಭಿವೃದ್ಧಿ ನಿಗಮ ವ್ಯವಸ್ಥಾಪಕ ನಿರ್ದೇಶಕ ರವಿ ಟಿ.ಕುಮಾರ್ ಅವರು ಮಾತನಾಡಿ, ನಿಗಮದಿಂದ ಉತ್ತಮ ಗುಣಮಟ್ಟದ ಸೌಲಭ್ಯವನ್ನು ಪೌರ ಕಾರ್ಮಿಕರಿಗಾಗಿ ಜಾರಿಗೆ ತರಲಾಗಿದೆ. ಈ ಯೋಜನೆ ಜಾರಿಗೆ ಬರಲು ಸಮಾಜ ಕಲ್ಯಾಣ ಇಲಾಖೆ ಸಚಿವರು ಸೇರಿದಂತೆ ಇತರೆ ಗಣ್ಯರ ಸಹಕಾರ ಬಹಳಷ್ಟು ಇದೆ. ಪೌರ ಕಾರ್ಮಿಕರ ಆರೋಗ್ಯ ಕಾಪಾಡಲು ಸರ್ಕಾರದಿಂದ ಇದನ್ನು ಜಾರಿ ಮಾಡಲಾಗಿದೆ. ಇನ್ಫೋಸಿಸ್ ವಿಪ್ರೋ ಸಂಸ್ಥೆಯ ಉದ್ಯೋಗಿಗಳಿಗೆ ನೀಡುವ ಸೌಲಭ್ಯವನ್ನು ನಮ್ಮ ಪೌರ ಕಾರ್ಮಿಕರಿಗೆ ನೀಡಲಾಗುತ್ತಿದೆ. 5 ಲಕ್ಷರೂ. ವರಗೆ ಉಚಿತವಾಗಿ ನಗರದ ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆಗಳಲ್ಲಿ ಒಟ್ಟು ಮೂರು ಸಾವಿರ ರೋಗಕ್ಕೆ ಚಿಕಿತ್ಸೆ ಪಡೆಯಬಹುದಾಗಿದೆ. ಪೌರ ಕಾರ್ಮಿಕರು ಈ ಆರೋಗ್ಯ ಕಾರ್ಡ್ಗಳನ್ನು ಸರಿಯಾಗಿ ಬಳಕೆ ಮಾಡಿಕೊಳ್ಳಬೇಕು. ತಮ್ಮ ಮಕ್ಕಳಿಗೆ ಉತ್ತಮ ಶಿಕ್ಷಣ ಕೊಡಿಸುವ ಕೆಲಸ ಪೌರ ಕಾರ್ಮಿಕರು ಮಾಡಬೇಕು ಎಂದರು.

ಆರೋಗ್ಯ ವಿಮೆ ಕಾರ್ಡ್, ಸಮವಸ್ತ್ರ ವಿತರಣೆ: ರಾಯಚೂರು ಮಹಾನಗರ ಪಾಲಿಕೆಯ ನೇರ ಪಾವತಿ ಪೌರ ಕಾರ್ಮಿಕರಾದ ಆರ್.ಹನುಮಂತ, ರಾಮಪ್ಪ, ಸಣ್ಣ ನರಸಿಂಹಲು, ನಾಗಮ್ಮ, ಜಂಬಲಮ್ಮ, ಲವ, ನಾಗಪ್ಪ, ಮುಖೇಶ್, ಜಿಂದಮ್ಮ, ಹೊನ್ನಮ್ಮ ಹಾಗೂ ಸಮವಸ್ತ್ರವನ್ನು ನರಸಪ್ಪ, ರಮೇಶ, ನಾಗಪ್ಪ, ಮೋನಪ್ಪ, ತಿಮ್ಮಪ್ಪ, ನರಸಪ್ಪ, ಮಾರೆಪ್ಪ, ದೊಡ್ಡ ನರಸಪ್ಪ, ನರಸಿಂಹಲು, ಎನ್.ಪ್ರಸಾದ್ ಕುಮಾರ್, ಸಣ್ಣ ನರಸಪ್ಪ ಯಲ್ಲಪ್ಪ, ರಾಜಶೇಖರ, ಆಂಜನೇಯ, ರೆಡ್ಡೆಪ್ಪ, ಸುಶೀಲಮ್ಮ ಅವರಿಗೆ ವಿತರಣೆ ಮಾಡಲಾಯಿತು.

ಇದೇ ಸಂದರ್ಭದಲ್ಲಿ ಡಾ.ಬಾಬಾಸಾಹೇಬ್ ಅಂಬೇಡ್ಕರ್ ಹಾಗೂ ಡಾ. ಬಾಬು ಜಗಜೀವನ್ ರಾಮ್ ಅವರ ಭಾವಚಿತ್ರಗಳಿಗೆ ಪುಷ್ಪಾರ್ಚನೆ ಮಾಡಲಾಯಿತು. ಇದಕ್ಕೂ ಮೊದಲು ನಡೆದ ಶಿಬಿರದಲ್ಲಿ ಕಾರ್ಮಿಕರ ಆರೋಗ್ಯ ತಪಾಸಣೆ ಮಾಡಲಾಯಿತು.

ಈ ಸಂದರ್ಭದಲ್ಲಿ ಪಾಲಿಕೆ ಕಂದಾಯ ಆಯುಕ್ತ ಶರಣಪ್ಪ, ಪಾಲಿಕೆ ಸದಸ್ಯ ಕಾರ್ಯದರ್ಶಿ ಕೃಷ್ಣ, ಕಂದಾಯ ಅಧಿಕಾರಿ ರವಿ ಅಂಗಡಿ, ಡಿ.ಕುಮಾರ್, ಪಾಲಿಕೆಯ ಕಂದಾಯ ಆಯುಕ್ತ ಶರಣಪ್ಪ, ಪಾಲಿಕೆಯ ಜೋನಲ್ 01ರ ಉಪ ಆಯುಕ್ತ ಮಲ್ಲಿಕಾರ್ಜುನ, ಪಾಲಿಕೆಯ ಪರಿಸರ ಅಭಿಯಂತರ ಜಯಪಾಲ್ ರೆಡ್ಡಿ, ವಿಮೆ ಸಂಸ್ಥೆಯ ವಿನೋದ ಹಾಗೂ ಪೌರ ಕಾರ್ಮಿಕರು ಸೇರಿದಂತೆ ಇತರೆ ಹಲವಾರು ಜನರು ಉಪಸ್ಥಿತರಿದ್ದರು.

ಮೇ 17ರಂದು ಜಿಲ್ಲಾ ಮಟ್ಟದ ವಾಲ್ಮೀಕಿ ಜಾಗೃತಿ ಸಮಾವೇಶ

ನಾಯಕ್, ಶಾಸಕಿ ಪ್ರಿಯಾಂಕಾ ಸತೀಶ್ ಜಾರಕಿಹೊಳಿ ಸೇರಿದಂತೆ ಹಲವು ರಾಜಕೀಯ ಗಣ್ಯರು ಭಾಗವಹಿಸಲಿದ್ದಾರೆ. ಮಾಜಿ ಸಚಿವರಾದ ಬಿ. ಶ್ರೀರಾಮುಲು ಹಾಗೂ ಕೆ. ಶಿವನಗೌಡ ನಾಯಕ್ ಮಹರ್ಷಿ ವಾಲ್ಮೀಕಿ ಭಾವಚಿತ್ರಕ್ಕೆ ಪುಷ್ಪಾರ್ಚನೆ ನೆರವೇರಿಸಲಿದ್ದಾರೆ ಎಂದು ಹೇಳಿದರು.

ಸಂಘದ ಜಿಲ್ಲಾಧ್ಯಕ್ಷ ಮಹೇಂದ್ರ ನಾಯಕ ಮಾತನಾಡಿ, ಇದು ಜಿಲ್ಲೆಯ ಮಟ್ಟದಲ್ಲಿ ನಡೆಯುತ್ತಿರುವ ಅತ್ಯಂತ ದೊಡ್ಡ ಸಮಾವೇಶವಾಗಿದ್ದು, ಸಮಾಜದ ಬಾಂಧವರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕೆಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಜಿಲ್ಲಾಧ್ಯಕ್ಷರಾದ ಮಹೇಂದ್ರ ನಾಯಕ,ವೀರೇಶ್ ನಾಯಕ ಆರೋಲಿ, ಪ್ರಕಾಶ ನಾಯಕ, ಮಲ್ಲಿಕಾರ್ಜುನ, ಹನುಮೇಶ ನಾಯಕ ದಿನ್ನಿ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

ವಿಶ್ವ ದಾದಿಯರ ದಿನಾಚರಣೆ :ದಾದಿಯರ ಸೇವೆ ಅನನ್ಯಾಗಿದೆ - ಡಾ.ಸುನೀಲ್ ಸರೋದೆ

ತಂತ್ರಜ್ಞಾನ ಮತ್ತು ಸಂಶೋಧನೆಗಳನ್ನು ಅಳವಡಿಸಿಕೊಳ್ಳಬೇಕಿದೆ. ರೋಗಿಯ ಜೊತೆ ನಗುಮುಖದಿಂದ ಮಾತನಾಡುವುದು ಅರ್ಧದಷ್ಟು ಕಾಯಿಲೆಯನ್ನು ವಾಸಿ ಮಾಡುತ್ತದೆ. ಈ ದಿಸೆಯಲ್ಲಿ ವಿನಯತೆ ಮತ್ತು ಕರುಣೆಯನ್ನು ಮೈಗೂಡಿ ಸಿಕೊಳ್ಳಿ. ನಮ್ಮ ವೃತ್ತಿಗೆ ನಿಷ್ಠರಾಗಿರುತ್ತೇವೆ ಮತ್ತು ಸಮಾಜದ ಆರೋಗ್ಯ ಕಾಪಾಡಲು ಪ್ರಾಮಾಣಿಕವಾಗಿ ಶ್ರಮಿಸುತ್ತೇವೆ ಎಂದು ಸಂಕಲ್ಪ ಮಾಡಬೇಕಿದೆ ಎಂದರು. ಈ ಸಂದರ್ಭದಲ್ಲಿ ಆರೋಗ್ಯ ಇಲಾಖೆಯ ನೀಲಮ್ಮ, ಶ್ರೀದೇವಿ, ಪ್ರೇಮಲತಾ, ಯಲ್ಲಾಲಿಂಗ ಇನ್ನಿತರ ಸಿಬ್ಬಂದಿ ವರ್ಗದವರು ಇದರು.

ಡಿಟಿಜೆ ಶಾಲೆಯಲ್ಲಿ ಬೆಂಕಿ ಅವಘಡ :ಶಿಕ್ಷಕಿಯರ ಕೊಠಡಿಯಲ್ಲಿ ಬೆಂಕಿ - ಪ್ರಶ್ನೆ ಪತ್ರಿಕೆ ಸೇರಿ ಪ್ರಮುಖ ದಾಖಲೆಗಳು ಭಸ್ಮ

ವಿದ್ಯಾರ್ಥಿನಿಯರು ಹಾಗೂ ಪೋಷಕರಲ್ಲಿ ಆತಂಕದ ವಾತಾವರಣ ನಿರ್ಮಾಣವಾಗಿದೆ. ಬೆಂಕಿ ಅವಘಡಕ್ಕೆ ನಿಖರ ಕಾರಣ ಇನ್ನೂ ತಿಳಿದುಬಂದಿಲ್ಲ. ವಿದ್ಯುತ್ ಶಾರ್ಟ್ ಸರ್ಕ್ಯೂಟ್ನಿಂದ ಅವಘಡ ಸಂಭವಿಸಿತೇ ಅಥವಾ ಬೇರೆ ಕಾರಣವಿದೆಯೇ ಎಂಬುದರ ಕುರಿತು ಅಧಿಕಾರಿಗಳು ತನಿಖೆ ನಡೆಸುತ್ತಿದ್ದಾರೆ. ಶೈಕ್ಷಣಿಕ ಸಂಸ್ಥೆಗಳಲ್ಲಿ ಅಗ್ನಿ ಸುರಕ್ಷತಾ ಕ್ರಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಿ, ತುರ್ತು ಮುನ್ನೆಚ್ಚರಿಕಾ ವ್ಯವಸ್ಥೆಗಳನ್ನು ಬಲಪಡಿಸಬೇಕೆಂದು ಸಾರ್ವಜನಿಕರು ಆಗ್ರಹಿಸಿದ್ದಾರೆ. ಶಿಕ್ಷಣ ಇಲಾಖೆ ಹಾಗೂ ಜಿಲ್ಲಾಡಳಿತವು ಘಟನೆಯ ಕುರಿತು ಸಮಗ್ರ ಪರಿಶೀಲನೆ ನಡೆಸಿ, ನಷ್ಟದ ಅಂದಾಜು ಮಾಡಿ ಅಗತ್ಯ ಕ್ರಮ ಕೈಗೊಳ್ಳಬೇಕೆಂದು ಒತ್ತಾಯಿಸಲಾಗಿದೆ.

ಉಡಮಗಲ್ ಖಾನಾಪುರ, ಯಾಪಲದಿನ್ನಿ ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ರಾಷ್ಟಿಯ ಮಟ್ಟದ ಎನ್‌ಕ್ಯೂಎಎಸ್ ಮೌಲ್ಯ ಮಾಪನದಲ್ಲಿ ಸಾಧನೆ

ಅಧಿಕಾರಿಗಳು ಡಾ.ಶಿವಕುಮಾರ, ತಾಲ್ಲೂಕು ಆರೋಗ್ಯಾಧಿಕಾರಿಗಳು ಡಾ.ಅಮೃತ್, ಪ್ರಾಥಮಿಕ ಆರೋಗ್ಯ ಕೇಂದ್ರಗಳ ಆಡಳಿತ ವೈದ್ಯಾಧಿಕಾರಿಗಳಾದ ಡಾ.ಫರಹ್ ನಸ್ರೀನ್, ಡಾ.ಅರುಣ, ಡಾ.ಶಿವಶರಣಪ್ಪ, ಆಯುಷ್ ವೈದ್ಯಾಧಿಕಾರಿಗಳು ಜಿಲ್ಲಾ ಗುಣಮಟ್ಟ ಭರವಸೆ ಸಲಹೆಗಾರರಾದ ಹರೀಶ್ ಪತಂಗೆ, ಸಿಬ್ಬಂದಿಯವರಾದ ಬದರಿನಾಥ, ಪ್ರ.ದ.ಸ, ಖಲೀಲ್ ಅಹ್ಮದ್, ಶುಶ್ರೂಷಣಾಧಿಕಾರಿಗಳಾದ ಸ್ವೀಟ್ ಮೇರಿ, ಪ್ರೇಮ ಕುಮಾರಿ, ಮೌನೇಶ್ ಸೇರಿದಂತೆ ಎಲ್ಲ ಸಿಬ್ಬಂದಿಗಳ ಕಠಿಣ ಪರಿಶ್ರಮದಿಂದ ಈ ಪ್ರಮಾಣ ಪತ್ರವನ್ನು ಪಡೆದುಕೊಳ್ಳಲು ಸಾಧ್ಯವಾಯಿತು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿ ಡಾ.ಸುರೇಂದ್ರ ಬಾಬು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮಹಿಳೆಯರ ಶಿಕ್ಷಣ ಕುರಿತು ಸಚಿವರ ಹೇಳಿಕೆ ಖಂಡನೆ ಕ್ಷಮೆ ಕೇಳಿ ರಾಜೀನಾಮೆ ನೀಡಲಿ: ವಿಜಯರಾಣಿ ಸಿರವಾರ ಒತ್ತಾಯ

ಪರವಾಗಿ ಸಚಿವರು ಸಾರ್ವಜನಿಕ ಕ್ಷಮೆಯಾಚನೆ ಮಾಡಬೇಕು ಹಾಗೂ ತಮ್ಮ ಹೇಳಿಕೆಗೆ ನೈತಿಕ ಹೊಣೆ ಹೊತ್ತು ರಾಜೀನಾಮೆ ನೀಡಬೇಕು ಎಂಬ ಒತ್ತಾಯಕ್ಕೂ ವ್ಯಾಪಕ ಬೆಂಬಲ ವ್ಯಕ್ತವಾಗುತ್ತಿದೆ.

ಸಂವಿಧಾನ ನೀಡಿರುವ ಹಕ್ಕುಗಳನ್ನು ಗೌರವಿಸುವುದು ಪ್ರತಿಯೊಬ್ಬರ ಕರ್ತವ್ಯ. ವಿಶೇಷವಾಗಿ ಜನಪ್ರತಿನಿಧಿಗಳು ಮತ್ತು ಸಚಿವರು ತಮ್ಮ ಮಾತುಗಳಲ್ಲಿ ಜವಾಬ್ದಾರಿತನ ಪ್ರದರ್ಶಿಸಬೇಕು. ಮಹಿಳೆಯರ ಶಿಕ್ಷಣ ಮತ್ತು ಗೌರವವನ್ನು ಕಾಪಾಡುವುದು ಸಮಾನತೆಯ ಸಮಾಜ ನಿರ್ಮಾಣದ ಮೂಲ ಅಸ್ತಿವಾರವಾಗಿದೆ..

ಕಾರ್ಮಿಕ ಸಂಹಿತೆ ವಿರೋಧಿಸಿ ಹೊರಗುತ್ತಿಗೆ ನೌಕರರ ಪ್ರತಿಭಟನೆ



ಹೊಸಪೇಟೆ/ವಿಜಯನಗರ :

ಬಿಜೆಪಿ ನೇತೃತ್ವದ ಕೇಂದ್ರ ಸರ್ಕಾರ ಜಾರಿಗೊಳಿಸಿರುವ ಕಾರ್ಮಿಕ ವಿರೋಧಿ ಹಾಗೂ ಸಂವಿಧಾನ ವಿರೋಧಿ ನಾಲ್ಕು ಕಾರ್ಮಿಕ ಸಂಹಿತೆಗಳ ವಿರುದ್ಧ ಕರ್ನಾಟಕ ರಾಜ್ಯ ಸರ್ಕಾರಿ ಹಾಸ್ಟೆಲ್ ಮತ್ತು ವಸತಿ ಶಾಲಾ ಹೊರಗುತ್ತಿಗೆ ನೌಕರರ ವಿಜಯನಗರ ಜಿಲ್ಲಾ ಸಮಿತಿಯ ಪದಾಧಿಕಾರಿಗಳು ಹೊಸಪೇಟೆ ನಗರದ ಏಕಲವ್ಯ ವೃತ್ತದ ಸಮೀಪ ಪ್ರತಿಭಟನೆ ನಡೆಸಿ ಆಕ್ರೋಶ ವ್ಯಕ್ತಪಡಿಸಿದರು.

ಪ್ರತಿಭಟನಾಕಾರರು ಕೇಂದ್ರ ಸರ್ಕಾರ ಹೊರಡಿಸಿರುವ ಅಧಿಸೂಚನೆಗಳ ಪ್ರತಿಗಳನ್ನು ದಹಿಸಿ ತಮ್ಮ ವಿರೋಧ ವ್ಯಕ್ತಪಡಿಸಿದರು.

ಹಲವು ವರ್ಷಗಳಿಂದ ಕನಿಷ್ಠ ವೇತನ, ಉದ್ಯೋಗ ಭದ್ರತೆ ಹಾಗೂ ಉತ್ತಮ ಜೀವನ ವ್ಯವಸ್ಥೆ ಜಾರಿಗಾಗಿ ಹೊರಗುತ್ತಿಗೆ ನೌಕರರು ಮತ್ತು ಖಾಯಂ ಅಲ್ಲದ ನೌಕರರು ಹೋರಾಟ ನಡೆಸುತ್ತಿದ್ದು, ಹೊಸ ಕಾರ್ಮಿಕ ಸಂಹಿತೆಗಳು ಕಾರ್ಮಿಕರ ಹಕ್ಕುಗಳನ್ನು ಕಸಿದುಕೊಳ್ಳುವ ಉದ್ದೇಶ ಹೊಂದಿವೆ ಎಂದು ಪ್ರತಿಭಟನಾಕಾರರು ಆರೋಪಿಸಿದರು.

ಕಾರ್ಮಿಕರ ಹಿತಾಸಕ್ತಿಗೆ ವಿರುದ್ಧವಾಗಿರುವ ಈ ಸಂಹಿತೆಗಳನ್ನು ತಕ್ಷಣ ಹಿಂಪಡೆಯಬೇಕು. ಇಲ್ಲವಾದಲ್ಲಿ ರಾಜ್ಯಾದ್ಯಂತ ಹೋರಾಟವನ್ನು ಮತ್ತಷ್ಟು ತೀವ್ರಗೊಳಿಸಲಾಗುವುದು ಎಂದು ಎಚ್ಚರಿಕೆ ನೀಡಿದರು.

ಪ್ರತಿಭಟನೆಯಲ್ಲಿ ಜಿಲ್ಲಾ ಸಮಿತಿಯ ಅಧ್ಯಕ್ಷ ಮರಡಿ ಜಂಬಯ್ಯನಾಯಕ, ಜಿಲ್ಲಾ ಮುಖಂಡರಾದ ಸೂರ್ಯ ನಾರಾಯಣ, ಕರಿಬಸವಯ್ಯ, ದಿವಾಕರ್, ದುರುಗೇಶ್, ಲಕ್ಷ್ಮಿದೇವಿ, ಶಾರದಾ, ಶಿವಪ್ಪ, ಕೆ. ಬಸವರಾಜ್, ಮಂಜುಳಾ, ಕಾಳಮ್ಮ, ಪ್ರೇಮಾವತಿ, ಬಿ. ಗೀತಾ, ಆಯಿಷಾ, ಪಂಪಾಪತಿ, ವಿ. ತಿಪ್ಪಣ್ಣ, ಎಸ್. ನಿಂಗಪ್ಪ, ಸತ್ಯಭಾಮ, ವನಜಾಕ್ಷಿ, ರುಕ್ಮಿಣಿ, ಸುಲೋಚನಾ, ಬಶೀರಾ, ರಾಧಾನಾಯಕ್, ರಝಿಯಾ, ರಿಝ್ವಾನ್, ಮಲ್ಲೇಶ್, ಹನುಮವ್ವ ಸೇರಿದಂತೆ ಹಲವರು ಭಾಗವಹಿಸಿದ್ದರು.

ಭೂಸ್ವಾಧೀನಗೊಂಡ ಜಮೀನು ರೈತರಿಗೆ ವಾಪಸ್ ನೀಡಲು ಆಗ್ರಹ

ಕಲಬುರಗಿ,ಮೇ.13-

ಗುಲಬರ್ಗ ಸಿಮೆಂಟ್ ಕಾರ್ಖಾನೆ ಸ್ಥಾಪನೆ ಉದ್ದೇಶಕ್ಕಾಗಿ ಭೂಸ್ವಾಧೀನಗೊಂಡಿದ್ದ ಕಿರಣಗಿ, ಫಿರೋಜಾಬಾದ್ ಹಾಗೂ ಸೋಮನಾಥಹಳ್ಳಿ ಗ್ರಾಮದ 1821 ಎಕರೆ ಜಮೀನನ್ನು ರೈತರಿಗೆ ವಾಪಸ್ ನೀಡುವಂತೆ ಆಗ್ರಹಿಸಿ ಭೂಮಿ ನೀಡಿದ ರೈತರು ಜಿಲ್ಲಾಧಿಕಾರಿ ಕಚೇರಿ ಎದುರು ಪ್ರತಿಭಟನೆ ನಡೆಸಿದರು.

ಕಾರ್ಖಾನೆ ನಿರ್ಮಾಣ ಮಾಡುವುದಾಗಿ ಹೇಳಿ ಹಲವು ವರ್ಷಗಳ ಹಿಂದೆ ಭೂಸ್ವಾಧೀನ ಮಾಡಿಕೊಂಡಿದ್ದರೂ ಇದುವರೆಗೆ ಯಾವುದೇ ಕೈಗಾರಿಕೆ ಸ್ಥಾಪನೆ ಮಾಡಿಲ್ಲ. ಇದರಿಂದ ರೈತರು ಜೀವನೋಪಾಯ ಕಳೆದುಕೊಂಡಿದ್ದು, ಸರ್ಕಾರ ಹಾಗೂ ಕಂಪನಿ ರೈತರಿಗೆ ಅನ್ಯಾಯ ಮಾಡಿವೆ ಎಂದು



ಪ್ರತಿಭಟನಾಕಾರರು ಆರೋಪಿಸಿದರು.

ಭೂಸ್ವಾಧೀನದ ಉದ್ದೇಶ ಈಡೇರಿಸದೇ ಕಾನೂನು ಉಲ್ಲಂಘನೆ ಮಾಡಿರುವ ಹಿನ್ನೆಲೆಯಲ್ಲಿ ಜಮೀನನ್ನು ಮೂಲ ರೈತರಿಗೆ ಮರಳಿ ನೀಡಬೇಕು ಎಂದು ಪ್ರತಿಭಟನಾಕಾರರು ಒತ್ತಾಯಿಸಿದರು. ಸರ್ಕಾರ ಕೂಡಲೇ ಮಧ್ಯಪ್ರವೇಶಿಸಿ ಸಮಸ್ಯೆಗೆ ನ್ಯಾಯಯುತ ಪರಿಹಾರ ನೀಡಬೇಕು ಎಂದು ಆಗ್ರಹಿಸಿದರು.

ಪ್ರತಿಭಟನೆಯಲ್ಲಿ ರೈತ ಮುಖಂಡ ಶರಣಬಸಪ್ಪ ಮಮಶೆಟ್ಟಿ, ಶಂಕ್ರೆಪ್ಪಾ ಗೊಬ್ಬುರು, ಇರಣ್ಣಾ ಉಳಾಗಡ್ಡಿ, ಭಿಮಾಶಂಕರ ಸರಡಗಿ, ಪ್ರಭು ಭೈರಾಡಗಿ, ಸಿದ್ದಮ್ಮ ನರಿಬೊಳಿ, ಗುರಮ್ಮಾ ರಾವುರು, ನಾಗಮ್ಮಾ ಮಡಿಕ್ಯಾಳ ಸೇರಿದಂತೆ ಕಿರಣಗಿ, ಫಿರೋಜಾಬಾದ್ ಹಾಗೂ ಸೋಮನಾಥ ಹಳ್ಳಿ ಗ್ರಾಮದ ಭೂ ಸಂತ್ರಸ್ತ ರೈತರು ಭಾಗವಹಿಸಿದ್ದರು.

ಬಳ್ಳಾರಿ: ಮೇ ಮತ್ತು ಜೂನ್ ತಿಂಗಳ ಪಡಿತರ ಹಂಚಿಕೆ

ಬಳ್ಳಾರಿ,ಮೇ 13-

ಜಿಲ್ಲೆಯ ಪಡಿತರ ಕಾರ್ಡುದಾರರಿಗೆ ಮೇ ಮತ್ತು ಜೂನ್-2026ರ ಮಾಹೆಯ ಪಡಿತರ ಹಂಚಿಕೆ ಮಾಡಲಾಗುತ್ತಿದೆ ಎಂದು ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯ ಉಪನಿರ್ದೇಶಕರು ತಿಳಿಸಿದ್ದಾರೆ.

ಪಿಹೆಚ್‌ಹೆಚ್ ಕಾರ್ಡುದಾರರಿಗೆ ಎನ್‌ಎಫ್‌ಎಸ್‌ಎ ಯೋಜನೆಯಡಿ 5 ಕೆ.ಜಿ ಮತ್ತು ಅನ್ನಭಾಗ್ಯ ಯೋಜನೆಯಡಿ 5 ಕೆ.ಜಿ ಸೇರಿ ಪ್ರತಿ ಸದಸ್ಯರಿಗೆ ಒಟ್ಟು 10 ಕೆ.ಜಿ ಆಹಾರಧಾನ್ಯ ನೀಡಲಾಗುತ್ತದೆ.

ಅಂತ್ಯೋದಯ ಕಾರ್ಡುದಾರರಿಗೆ ಎನ್‌ಎಫ್‌ಎಸ್‌ಎ ಯೋಜನೆಯಡಿ 35 ಕೆ.ಜಿ ಆಹಾರಧಾನ್ಯ ನೀಡಲಾಗುತ್ತದೆ.

ಅನ್ನಭಾಗ್ಯ ಹೆಚ್ಚುವರಿ ಪಡಿತರ: ಅಂತ್ಯೋದಯ ಕಾರ್ಡ್ನಲ್ಲಿ 4ಕ್ಕಿಂತ ಹೆಚ್ಚು ಸದಸ್ಯರಿದ್ದಲ್ಲಿ, ಅಂತಹ ಸದಸ್ಯರಿಗೆ ತಲಾ 5 ಕೆ.ಜಿ ಆಹಾರಧಾನ್ಯ ವಿತರಿಸಲಾಗುತ್ತದೆ.

ಮೇ ಮಾಹೆಯಲ್ಲಿ ಮೇ ಮತ್ತು ಜೂನ್ ತಿಂಗಳಿಗೆ ಸಂಬಧಿಸಿದ ಕೇವಲ ಎನ್‌ಎಫ್‌ಎಸ್‌ಎ ಆಹಾರಧಾನ್ಯಗಳನ್ನು ಮಾತ್ರ ವಿತರಿಸಲಾಗುತ್ತದೆ. ಜೂನ್ ಮಾಹೆಯಲ್ಲಿ ಮೇ ಮತ್ತು ಜೂನ್ ತಿಂಗಳ ಪಾಲಿನ ಅನ್ನಭಾಗ್ಯ ಯೋಜನೆಯ ಪಡಿತರವನ್ನು ಮಾತ್ರ ವಿತರಿಸಲಾಗುತ್ತದೆ.

ರಾಷ್ಟ್ರೀಯ ಪಲ್ಸ್ ಪೋಲಿಯೋ ಕಾರ್ಯಕ್ರಮದ ಜಿಲ್ಲಾ ಮಟ್ಟದ ಜಾಗೃತ ಸಮಿತಿ ಸಭೆ

ಯಾವುದೇ ಮಗು ಲಸಿಕೆಯಿಂದ ವಂಚಿತವಾಗಬಾರದು

ಕೊಪ್ಪಳ ಮೇ 13-

ಜಿಲ್ಲೆಯಲ್ಲಿ ಜೂನ್ 28 ರಿಂದ ಜುಲೈ 1 ರವರೆಗೆ ನಡೆಯಲಿರುವ ರಾಷ್ಟ್ರೀಯ ಪಲ್ಸ್ ಪೋಲಿಯೋ ಲಸಿಕಾ ಕಾರ್ಯಕ್ರಮದಲ್ಲಿ ಯಾವುದೇ ಮಗು ಲಸಿಕೆಯಿಂದ ತಪ್ಪಿಸಿಕೊಳ್ಳಬಾ ರದು. ಇದನ್ನು ಪ್ರತಿಯೊಬ್ಬ ಅಧಿಕಾರಿಯೂ ತನ್ನ ಹೊಣೆಗಾರಿಕೆಯಾಗಿಸಿಕೊಂಡು ಕೆಲಸ ಮಾಡಬೇಕು ಎಂದು ಜಿಲ್ಲಾಧಿಕಾರಿ ಡಾ.ಸುರೇಶ ಬಿ.ಇಟ್ನಾಳ ಹೇಳಿದರು.

ಮಂಗಳವಾರದಂದು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಿಂದ ಆಯೋಜಿಸಿದ್ದ ರಾಷ್ಟ್ರೀಯ ಪಲ್ಸ್ ಪೋಲಿಯೋ ಕಾರ್ಯಕ್ರಮದ ಜಿಲ್ಲಾ ಮಟ್ಟದ ಜಾಗೃತ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ ಜೂನ್ 28 ರಿಂದ ಜುಲೈ 1 ರವರೆಗೆ ನಾಲ್ಕು ದಿನಗಳ ಕಾಲ ನಡೆಯಲಿರುವ ಪಲ್ಸ್ ಪೋಲಿಯೋ ಅಭಿಯಾನವನ್ನು ಯಶಸ್ವಿಗೊಳಿಸಬೇಕು. ''ಪೋಲಿಯೋ ನಿರ್ಮೂಲನೆ ಸರ್ಕಾರದ ಪ್ರಮುಖ ಗುರಿಯಾಗಿದ್ದು, ಮನೆ ಮನೆಗೆ ತೆರಳಿ 5 ವರ್ಷದೊಳಗಿನ ಎಲ್ಲಾ ಮಕ್ಕಳಿಗೂ ಲಸಿಕೆ ನೀಡಬೇಕು. ಯಾವುದೇ ಕಾರಣಕ್ಕೂ ಒಂದು ಮಗುವೂ ಲಸಿಕೆಯಿಂದ ವಂಚಿತವಾಗ



'ಬಾರದು ಎಂದು ಅವರು ಸೂಚನೆ ನೀಡಿದರು.

ಅಂಗನವಾಡಿ, ಆಶಾ ಕಾರ್ಯಕರ್ತರು ಹಾಗೂ ಆರೋಗ್ಯ ಸಿಬ್ಬಂದಿ ಸಮನ್ವಯದಿಂದ ಕಾರ್ಯನಿರ್ವಹಿಸಬೇಕು. ಗ್ರಾಮೀಣ ಪ್ರದೇಶಗಳು, ಸ್ಲಂಗಳು, ವಲಸೆ ಕಾರ್ಮಿಕರ ವಸತಿ ಪ್ರದೇಶಗಳು ಸೇರಿದಂತೆ ಎಲ್ಲೆಡೆ ಮಕ್ಕಳನ್ನು ಗುರುತಿಸಿ ಲಸಿಕೆ ನೀಡಬೇಕು. ಅಂಗನವಾಡಿಗಳಿಗೆ ಬರುವ ತಾಯಂದಿರಿಗೆ ತಮ್ಮ ಮಕ್ಕಳಿಗೆ ಲಸಿಕೆ ಹಾಕಿಸುವಂತೆ ತಿಳುವಳಿಕೆ ನೀಡಬೇಕು. ಶಾಲಾ ಮಕ್ಕಳಿಂದ ಪೋಲಿಯೋ ಲಸಿಕೆ ಕುರಿತು ಜಾಗೃತಿ ಜಾಥಾ ಹಮ್ಮಿಕೊಳ್ಳಬೇಕು. ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವುದು ಅತ್ಯಂತ ಮುಖ್ಯವಾಗಿದ್ದು, ಶಾಲೆಗಳು, ಧಾರ್ಮಿಕ ಸ್ಥಳಗಳು ಮತ್ತು ಸಾರ್ವಜನಿಕ ಪ್ರದೇಶಗಳಲ್ಲಿ ಪೋಷಕರಿಗೆ ಲಸಿಕೆಯ ಮಹತ್ವವನ್ನು ತಿಳಿಸಬೇಕು. ಹಾಗೂ ಬಸ್ ನಿಲ್ದಾಣಗಳಲ್ಲಿ 3 ದಿನಗಳ ಕಾಲ ಲಸಿಕೆ ಹಾಕಿಸುವಂತೆ ಪ್ರಕಟಣೆ ಹೊರಡಿಸಬೇಕು. ಜನರಲ್ಲಿ ಯಾವುದೇ ಅಪನಂಬಿಕೆ ಇದ್ದರೆ ಅದನ್ನು ಸೂಕ್ತ ತಿಳುವಳಿಕೆ ನೀಡುವ ಮೂಲಕ ಹೋಗಲಾಡಿಸಬೇಕು. ಈ ಕಾರ್ಯಕ್ರಮ ಆರೋಗ್ಯ ಇಲಾಖೆಯೊಂದರ ಕೆಲಸವಲ್ಲ. ಎಲ್ಲಾ ಇಲಾಖೆಗಳು, ಸಂಘ ಸಂಸ್ಥೆಗಳು ಮತ್ತು ಸಾರ್ವಜನಿಕರು ಕೈಜೋಡಿಸಿದಾಗ ಮಾತ್ರ ಯಶಸ್ಸು ಸಾಧ್ಯ ಎಂದು ಹೇಳಿದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿಗಳಾದ ಡಾ.ಲಿಂಗರಾಜು ಟಿ. ಅವರು ಮಾತನಾಡಿ, ಜೂನ್ 28 ರಂಧು ಬೆಳಿಗ್ಗೆ 8 ಗಂಟೆಯಿಂದ ಸಂಜೆ 5 ಗಂಟೆಯವರೆಗೆ ನಿಗದಿತ ಬೂತ್‌ಗಳಲ್ಲಿ ಪೋಲಿಯೋ ಲಸಿಕೆ ಹಾಕಲಾಗುತ್ತದೆ. ಜೂನ್ 29 ರಿಂದ ಜುಲೈ 1 ರವರೆಗೆ ಮನೆ ಮನೆಗೆ ಭೇಟಿ ನೀಡಿ, ಲಸಿಕೆ ನೀಡಲಾಗುತ್ತದೆ. ಇದರೊಂದಿಗೆ ಜೂನ್ 28 ರಿಂದ ಜುಲೈ 1 ರವರೆಗೆ ವಲಸೆ ಕಾರ್ಮಿಕರ ವಸತಿ ಪ್ರದೇಶಗಳು, ಕಾರ್ಖಾನೆ ಕಾರ್ಮಿಕರ ಬಿಡಾರಗಳಿಗೆ ಭೇಟಿ ನೀಡಿ ಲಸಿಕೆ ನೀಡಲಾಗುವುದು ಎಂದು ಮಾಹಿತಿ ನೀಡಿದ ಅವರು, ಕಾರ್ಯಕ್ರಮದ ಯಶಸ್ವಿಗೆ ಆರೋಗ್ಯ ಇಲಾಖೆಯೊಂದಿಗೆ ವಿವಿಧ ಇಲಾಖೆಗಳು ಕೈಜೋಡಿಸಬೇಕು ಎಂದು ಮನವಿ ಮಾಡಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ವರ್ಣಿತ್ ನೇಗಿ, ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ.ನಂದಕುಮಾರ, ಜಿಲ್ಲಾ ಕಾರ್ಯಕ್ರಮ ಅನುಷ್ಠಾನಾಧಿಕಾರಿ ಡಾ.ರವೀಂದ್ರನಾಥ ಎಂ.ಎಚ್., ಜಿಲ್ಲಾ ಅಸಾಂಕ್ರಾಮಿಕ ರೋಗಗಳ ನಿಯಂತ್ರಣಾಧಿಕಾರಿ ಡಾ.ಪ್ರಕಾಶ ಎಚ್., ಮುನಿರಬಾದ್‌ನ ಸಮುದಾಯ ಆರೋಗ್ಯ ಕೇಂದ್ರದ ಪ್ರಸೂತಿ ತಜ್ಞರಾದ ಕೆ.ಹೆಚ್. ತೊಗರಿ, ಜಿಲ್ಲಾ ಆಸ್ಪತ್ರೆಯ ಮಕ್ಕಳ ತಜ್ಞ ವಿಭಾಗದ ಮುಖ್ಯಸ್ಥರು ಡಾ.ಗಿರೀಶ ಸೇರಿದಂತೆ ವಿವಿಧ ಕಾರ್ಯಕ್ರಮ ಅನುಷ್ಠಾನಾಧಿ ಕಾರಿಗಳು, ತಾಲ್ಲೂಕು ಆರೋಗ್ಯಾಧಿಕಾರಿಗಳು, ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

ಮೇ 12 ರಿಂದ ಮೇ 22 ರವರೆಗೆ ಪ್ರದರ್ಶನ: ತೋಟಗಾರಿಕಾ ಕಚೇರಿ ಆವರಣದಲ್ಲಿ ಮೇಳ

ಮಾವು ಪ್ರದರ್ಶನ, ಮಾರಾಟ ಮೇಳಕ್ಕೆ ಚಾಲನೆ



ಕೊಪ್ಪಳ ಮೇ 13-

ರೈತರಿಂದಲೇ ನೇರವಾಗಿ ಗ್ರಾಹಕರಿಗೆ ಉತ್ತಮ ಗುಣಮಟ್ಟದ ಮಾವಿನ ಹಣ್ಣುಗಳ ಮಾರಾಟಕ್ಕೆ ಅವಕಾಶ ಕಲ್ಪಿಸುವ ನಿಟ್ಟನಲ್ಲಿ ತೋಟಗಾರಿಕೆ ಇಲಾಖೆಯಿಂದ ಮೇ 12 ರಿಂದ ಮೇ 22 ರವರೆಗೆ ನಗರದ ತೋಟಗಾರಿಕೆ ಜಂಟಿ ನಿರ್ದೇಶಕರ ಕಚೇರಿ ಆವರಣದಲ್ಲಿ ಹಮ್ಮಿಕೊಳ್ಳಲಾದ ''ಕೊಪ್ಪಳ ಮಾವು ಮೇಳ-2026''ರ ಮಾವು ಪ್ರದರ್ಶನ ಮತ್ತು ಮಾರಾಟ ಮೇಳಕ್ಕೆ ಮೇ 12ರಂದು ಚಾಲನೆ ದೊರೆಯಿತು.

ಕೊಪ್ಪಳ ಸಂಸದರಾದ ಕೆ.ರಾಜಶೇಖರ ಬಸವರಾಜ ಹಿಟ್ನಾಳ, ವಿಧಾನ ಪರಿಷತ್ ಸದಸ್ಯರಾದ ಹೇಮಲತಾ ನಾಯಕ, ಜಿಲ್ಲಾಧಿಕಾರಿಗಳಾದ ಡಾ. ಸುರೇಶ ಬಿ. ಇಟ್ನಾಳ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ವರ್ಣಿತ್ ನೇಗಿ ಸೇರಿದಂತೆ ಹಲವು ಗಣ್ಯರು ಬೆಳಗ್ಗೆ ತೋಟಗಾರಿಕಾ ಇಲಾಖೆಯ ಆವರಣಕ್ಕೆ ಆಗಮಿಸಿ ಮಾವು ಮೇಳದಲ್ಲಿನ ವಿವಿಧ ಬಗೆಯ ಹಣ್ಣುಗಳನ್ನು ಹಾಗೂ ಅವುಗಳ ಉತ್ಪನ್ನಗಳ ವೀಕ್ಷಣೆ ಮಾಡಿ ಮಾವು ಮೇಳದ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದರು. ಇದೆ ವೇಳೆ ರುಚಿಕರವಾದ ಸೀಕರಣೆ ಮತ್ತು ಮಾವಿನ ರುಚಿ ಸವಿದರು.

ಕೊಪ್ಪಳ ತೋಟಗಾರಿಕೆ ಜಂಟಿ ನಿರ್ದೇಶಕರಾದ ಕೃಷ್ಣ ಸಿ. ಉಕ್ಕುಂದ ಅವರು ಮಾವು ಮೇಳದ ಬಗ್ಗೆ ಗಣ್ಯರಿಗೆ ಮಾಹಿತಿ ನೀಡಿದರು.

ಈ ಸಂದರ್ಭದಲ್ಲಿ ಕೊಪ್ಪಳ ಜಿಲ್ಲಾ ಹಾಪಕಾಮ್ಸ್ ಅಧ್ಯಕ್ಷರಾದ ಯಂಕಣ್ಣ ಯರಾಶಿ, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷರಾದ ಮಂಜುನಾಥ ಜಿ. ಗೊಂಡಬಾಳ, ತೋಟಗಾರಿಕೆ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕರಾದ ಯಲಬುರ್ಗಾದ ಲಿಂಗನಗೌಡ, ಗಂಗಾವತಿಯ ಯೋಗೇಶ್ವರ, ಕುಷ್ಟಗಿಯ ಶಿವಯೋಗಪ್ಪ, ಕೊಪ್ಪಳದ ರವಿಂದ್ರ ಹಂಚಿನಾಳ, ತೋಟಗಾರಿಕೆ ಇಲಾಖೆಯ ಕೇಂದ್ರ ಸ್ಥಾನಿಕ ಸಹಾಯಕರಾದ ಸತೋಷ ಧರಣ ಸೇರಿದಂತೆ ಇತರೆ ಜನಪ್ರತಿನಿಧಿಗಳು, ವಿವಿಧ ಇಲಾಖೆಗಳ ಹಾಗೂ ತೋಟಗಾರಿಕೆ ಇಲಾಖೆ ಸಿಬ್ಬಂದಿ ಉಪಸ್ಥಿತರಿದ್ದರು.

ಗಮನ ಸೆಳೆದ ಹಣ್ಣುಗಳು: ಕೊಪ್ಪಳ ಮಾವು ಮೇಳದಲ್ಲಿ ಕೇಸರ್, ದಶಹರಿ, ಆಪೂಸ್, ಬೇನಿಶಾನ್, ಮಲ್ಲಿಕಾ, ಸಿಂಧೂರಿ, ಇಮಾಮು ಪಸಂದ, ತೋತಾಪುರಿ, ಕಲ್ಮಿ ಮತ್ತು ಇತ್ಯಾದಿ ಮಾವಿನ ಹಣ್ಣುಗಳು ಹಾಗೂ ಉಪ್ಪಿನಕಾಯಿ ಮಾವಿನ ಕಾಯಿಗಳು, ಮಾವಿನ ಉತ್ಪನ್ನಗಳು ಪ್ರದರ್ಶನ ಮತ್ತು ಮಾರಾಟಕ್ಕಿಡಲಾಗಿದ್ದು, ಸಾರ್ವಜನಿಕರ ಗಮನ ಸೆಳೆಯುತ್ತಿವೆ.



ಅನಾಥ ಮಕ್ಕಳನ್ನು ದತ್ತು ಸಂಸ್ಥೆಗೆ ಹಸ್ತಾಂತರಿಸಿ: ಡಿಸಿ ಕವಿತಾ ಎಸ್.ಮನ್ನಿಕೇರಿ

ವಿಜಯನಗರ (ಹೊಸಪೇಟೆ,ಮೇ.13-:

ಮಕ್ಕಳು ದೇಶದ ಅಮೂಲ್ಯ ಆಸ್ತಿ. ಪೋಷಕರಿಗೆ ಬೇಡವಾದ ಅಥವಾ ಅನಾಥ ಮಕ್ಕಳನ್ನು ಎಲ್ಲೆಂದರಲ್ಲಿ ಬಿಟ್ಟು ಹೋಗದೇ, ಸರ್ಕಾರದ ವಿಶೇಷ ದತ್ತು ಸಂಸ್ಥೆಗೆ ಹಸ್ತಾಂತರಿಸಿ ಅವರ ಸುರಕ್ಷಿತ ಭವಿಷ್ಯಕ್ಕೆ ಸಹಕರಿಸಬೇಕು ಎಂದು ಜಿಲ್ಲಾಧಿಕಾರಿ ಕವಿತಾ ಎಸ್. ಮನ್ನಿಕೇರಿ ಮನವಿ ಮಾಡಿದರು.

ನಗರದ ಸರ್ಕಾರಿ ವಿಶೇಷ ದತ್ತು ಸಂಸ್ಥೆಗೆ ಮಂಗಳವಾರ ಭೇಟಿ ನೀಡಿ ಪರಿಶೀಲನೆ ನಡೆಸಿದ ಅವರು, ಇಬ್ಬರು ಮಕ್ಕಳಿಗೆ ದತ್ತುಪೂರ್ವ ಪೋಷಕತ್ವದ ಆದೇಶ ನೀಡಿ ಮಾತನಾಡಿದರು.

ಜಿಲ್ಲೆಯಲ್ಲಿ 2024ರ ಅಕ್ಟೋಬರ್‌ನಿಂದ ಆರಂಭಗೊಂಡಿರುವ ಈ ಸಂಸ್ಥೆ ಈವರೆಗೆ 7 ಮಕ್ಕಳಿಗೆ ಕಾನೂನಾತ್ಮಕವಾಗಿ ದತ್ತು ನೀಡುವ ಮೂಲಕ ಅವರ ಬದುಕಿಗೆ ಹೊಸ ಬೆಳಕು ನೀಡಿದೆ ಎಂದು ತಿಳಿಸಿದರು.

ಕಾರಾ ಮಾರ್ಗಸೂಚಿಯನ್ವಯ ಮಂಡ್ಯ ಹಾಗೂ ಹೊನ್ನಾವರದ ದಂಪತಿಗಳಿಗೆ ಜಿಲ್ಲಾಧಿಕಾರಿಗಳ ಮೂಲಕ ಇಬ್ಬರು ಮಕ್ಕಳನ್ನು ದತ್ತು ಹಸ್ತಾಂತರಿಸಲಾಯಿತು. ಈ ವೇಳೆ ಸಂಸ್ಥೆಯಲ್ಲಿರುವ ಮಕ್ಕಳ ಪಾಲನೆ ಮತ್ತು ಪೋಷಣೆಯನ್ನು ಅಚ್ಚುಕಟ್ಟಾಗಿ ನಿರ್ವಹಿಸುವಂತೆ ಸಿಬ್ಬಂದಿಗೆ ಸೂಚನೆ ನೀಡಿದರು.

ಪರಿತ್ಯಕ್ತ ಅಥವಾ ಅನಾಥ ಮಕ್ಕಳು ಕಂಡುಬಂದಲ್ಲಿ ತಕ್ಷಣ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಅಧೀನದಲ್ಲಿರುವ ಜಿಲ್ಲಾ ಮಕ್ಕಳ ರಕ್ಷಣಾ ಘಟಕಕ್ಕೆ ಮಾಹಿತಿ ನೀಡಬೇಕು. ಕಾನೂನುಬದ್ಧವಾಗಿ ಮಕ್ಕಳನ್ನು ದತ್ತು ಪಡೆಯುವ ಮೂಲಕ ಅವರಿಗೆ ಉತ್ತಮ ಬದುಕು ಕಲ್ಪಿಸಬೇಕು ಎಂದು ಜಿಲ್ಲಾಧಿಕಾರಿ ಹೇಳಿದರು.

ಈ ಸಂದರ್ಭದಲ್ಲಿ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಸುಧೀಪ್ ಕುಮಾರ್ ಉಂಕಿ, ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಸಿಬ್ಬಂದಿ, ದತ್ತು ಕೇಂದ್ರದ ಸಿಬ್ಬಂದಿ ಹಾಗೂ ಪೋಷಕರು ಉಪಸ್ಥಿತರಿದ್ದರು.

ಕರಾವಳಿಯಲ್ಲಿ ಮೇ 14ರಿಂದ ನಾಲ್ಕು ದಿನ ಗುಡುಗು ಸಹಿತ ಮಳೆ: ಕೆಎಸ್ಎನ್‌ಡಿಎಂಸಿ ಸೂಚನೆ

ಕರ್ನಾಟಕದ ಕರಾವಳಿ ಭಾಗದ ಒಂದು ಅಥವಾ ಎರಡು ಸ್ಥಳಗಳಲ್ಲಿ ಮೇ 14ರಿಂದ 17ರವರೆಗೆ ಗುಡುಗು ಸಹಿತ ಮಳೆಯಾಗಲಿದ್ದು, 50-60 ಕಿಮೀ ವೇಗದ ಗಾಳಿ ಬೀಸುವ ಸಾಧ್ಯತೆ ಇದೆ ಎಂದು ಕರ್ನಾಟಕ ರಾಜ್ಯ ವಿಪತ್ತು ನಿರ್ವಹಣಾ ಪ್ರಾಧಿಕಾರ(ಕೆಎಸ್ಎನ್‌ಡಿಎಂಸಿ) ತಿಳಿಸಿದೆ.

ಕರಾವಳಿ ಜಿಲ್ಲೆಗಳಾದ ದಕ್ಷಿಣ ಕನ್ನಡ, ಉಡುಪಿ ಮತ್ತು ಉತ್ತರ ಕನ್ನಡದಲ್ಲಿ ಮೇ 13 ರಿಂದ 17ರವರೆಗೆ ಗುಡುಗು ಸಹಿತ ಮಳೆಯಾಗುವ ಸಂಭವವಿದೆ. ಮೇ 13ರಂದು ಕರಾವಳಿಯಲ್ಲಿ 30-40 ಕಿಮೀ ವೇಗದಲ್ಲಿ ಗಾಳಿ ಬೀಸಲಿದ್ದು, ನಂತರದ ದಿನಗಳಲ್ಲಿ ಮಿಂಚು ಮತ್ತು ಗುಡುಗು ಹೆಚ್ಚಾಗಿರುವುದಾಗಿ ಕೆಎಸ್ಎನ್‌ಡಿಎಂಸಿ ಸೂಚನೆ ನೀಡಿದೆ.

ಮೇ 14 ಮತ್ತು 15ರಂದು ಕರ್ನಾಟಕದ ಉತ್ತರ ಒಳನಾಡಿನಲ್ಲಿ ಗುಡುಗು ಸಹಿತ ಮಳೆಯಾಗುವ ಸಾಧ್ಯತೆ ಇದ್ದು, ಗಂಟೆಗೆ 50-60 ಕಿ.ಮೀ ವೇಗದಲ್ಲಿ ಗಾಳಿ ಬೀಸುವ ಸಾಧ್ಯತೆ ಇದೆ.

ಉತ್ತರ ಒಳನಾಡಿನ ಜಿಲ್ಲೆಗಳಾದ ಬೆಳಗಾವಿ, ಧಾರವಾಡ, ಗದಗ ಮತ್ತು ಹಾವೇರಿಯಲ್ಲಿ ಮೇ 14 ಮತ್ತು 15ರಂದು ಆಲಿಕಲ್ಲು ಮಳೆಯಾಗುವ ಸಾಧ್ಯತೆಯಿದೆ. ಈ ಸಮಯದಲ್ಲಿ ಗಂಟೆಗೆ 50 ರಿಂದ 60 ಕಿಮೀ ವೇಗದಲ್ಲಿ ಬಲವಾದ ಗಾಳಿ ಬೀಸಲಿದ್ದು, ಜನತೆ ಜಾಗರೂಕರಾಗಿರಲು ಹವಾಮಾನ ಇಲಾಖೆ ಸೂಚಿಸಿದೆ. ಕೊಪ್ಪಳ ಮತ್ತು ರಾಯಚೂರು ಜಿಲ್ಲೆಗಳಲ್ಲಿಯೂ ಸಾಧಾರಣ ಮಳೆಯಾಗುವ ನಿರೀಕ್ಷೆಯಿದೆ.

ನಿಮ್ಮೂರು ಸುದ್ದಿ

ಸಂಪಾದಕೀಯ

ಈ ದಿನ ಸಂಪಾದಕೀಯ ಉಷ್ಣ ಹವೆ, ಗೊಬ್ಬರ ಕೊರತೆ: ಬಿಗಡಾಯಿಸಲಿರುವ ಕೃಷಿ ಬಿಕ್ಕಟ್ಟು



ಭಾರತೀಯ ಕೃಷಿ ಮತ್ತೊಮ್ಮೆ ಪ್ರಕೃತಿ ಮತ್ತು ಜಾಗತಿಕ ರಾಜಕೀಯದ ನಡುವೆ ಸಿಲುಕಿಕೊಂಡಿದೆ. ದುರಂತವೆಂದರೆ, ಉಷ್ಣ ಹವೆ ಮತ್ತು ಗೊಬ್ಬರ ಕೊರತೆ- ಈ ಎರಡೂ ಸಂಕಷ್ಟಗಳ ವಿರುದ್ಧ ಸರ್ಕಾರಗಳ ಸಿದ್ಧತೆ ಇನ್ನೂ ತಾತ್ಕಾಲಿಕ ಕ್ರಮಗಳ ಮಟ್ಟದಲ್ಲೇ ಉಳಿದಿದೆ. ಪ್ರಧಾನಿಗಳ ಬೋಧನೆ ಮಾತ್ರ ಚಾಲ್ತಿಯಲ್ಲಿದೆ...

ಭಾರತೀಯ ಕೃಷಿ ಮತ್ತೊಮ್ಮೆ ಪ್ರಕೃತಿ ಮತ್ತು ಜಾಗತಿಕ ರಾಜಕೀಯದ ನಡುವೆ ಸಿಲುಕಿಕೊಂಡಿದೆ. ಒಂದು ಕಡೆ ಉರಿಯುತ್ತಿರುವ ಉಷ್ಣ ಹವೆ, ಮತ್ತೊಂದು ಕಡೆ ರಸಗೊಬ್ಬರ ಕೊರತೆ. ಈ ಎರಡೂ ಸೇರಿ ಕೃಷಿ ಕ್ಷೇತ್ರವನ್ನು ಕುಗ್ಗಿಸುತ್ತಿವೆ. ರೈತನ ಬೆವರಿಗೆ ಬೆಲೆ ಇಲ್ಲದಂತೆ ಮಾಡುತ್ತಿವೆ. ಸದ್ಯದ ಸಂಕಷ್ಟ ಕೇವಲ ಒಂದು ಋತುಮಾನದ ಸಮಸ್ಯೆ ಅಲ್ಲ; ಇದು ದೇಶದ ಕೃಷಿ ಕ್ಷೇತ್ರವನ್ನು ನಿರಂತರವಾಗಿ ಕಾಡದೇ ಬಿಡುವುದಿಲ್ಲ.

ಈ ಬಾರಿ ಬೇಸಿಗೆ ಸಾಮಾನ್ಯವಲ್ಲ. ಫುಡ್ ಅಂಡ್ ಅಗ್ರಿಕಲ್ಚರಲ್ ಆರ್ಗನೈಸೇಷನ್ ಮತ್ತು ವರ್ಲ್ಡ್ ಮೆಟ್ರೊಲಾಜಿಕಲ್ ಆರ್ಗನೈಸೇಷನ್ ಬಿಡುಗಡೆ ಮಾಡಿದ ವರದಿ ಪ್ರಕಾರ, ಉಷ್ಣ ಅಲೆಗಳ ಪರಿಣಾಮದಿಂದ ವಿಶ್ವದಾದ್ಯಂತ ಹತ್ತು ಲಕ್ಷಕ್ಕಿಂತ ಹೆಚ್ಚು ಜನರ ಜೀವನೋಪಾಯ ಮತ್ತು ಆರೋಗ್ಯಕ್ಕೆ ಅಪಾಯ ಎದುರಾಗಿದೆ. ಭಾರತದಲ್ಲಿ ಇದರ ಪರಿಣಾಮ ಇನ್ನಷ್ಟು ಗಂಭೀರವಾಗುವ ಸಾಧ್ಯತೆ ಇದೆ. ಮೇ ಮುಗಿಯುವ ಮುನ್ನವೇ ಉತ್ತರ ಭಾರತದಿಂದ ದಕ್ಷಿಣದವರೆಗೆ ಉಷ್ಣಾಂಶ ದಾಖಲೆ ದಾಟುತ್ತಿದೆ. ಹೊಲ ಉಳುವುದರಿಂದ ಹಿಡಿದು ಬೀಜ ಬಿತ್ತುವ, ಬೆಳೆಯುವ, ಕಟಾವು ಮಾಡುವ ಹಂತದವರೆಗೆ ಇದರ ಪರಿಣಾಮ ಕಾಣುತ್ತಿದೆ.

ಉತ್ತರ ಭಾರತದಲ್ಲಿ ಸದ್ಯ ಗೋಧಿ ಕೊಯ್ಲಿನ ವೇಳೆಯಲ್ಲಿ ಉಷ್ಣ ಅಲೆ ಅಟ್ಟಹಾಸ ಮೆರೆದಿದೆ. ಅದರ ಪರಿಣಾಮವಾಗಿ ಉತ್ಪಾದನೆ ಕುಸಿಯುವ ಭೀತಿ ಎದುರಾಗಿದೆ. ಭತ್ತ ಬೆಳೆ ಕಾಲ ಆರಂಭವಾಗುವ ಮುನ್ನವೇ ಮಣ್ಣಿನ ತೇವಾಂಶ ಕಡಿಮೆಯಾಗುತ್ತಿದೆ. ಬೀಜ ಮೊಳಕೆಯೊಡೆಯುವಿಕೆ ನಿಧಾನಗೊಳ್ಳುತ್ತಿದೆ. ಉಷ್ಣ ಹವೆಗೆ ಮಾವು ಮರದಲ್ಲಿಯೇ ಒಣಗಿ ಇಳುವರಿ ಕುಂಠಿತಗೊಂಡಿದೆ. ಇದು ಕೃಷಿ ಉತ್ಪಾದನೆ ಮೇಲೆ ಭಾರೀ ಪರಿಣಾಮ ಬೀರಬಹುದು ಎಂಬುದನ್ನು ಊಹಿಸಿಯೇ ರೈತರು ಹೈರಾಣಾಗಿದ್ದಾರೆ.

ಭಾರತದ ಕೃಷಿ ಈಗಲೂ ಮಳೆಯನ್ನೇ ನಂಬಿಕೊಂಡಿದೆ. ದೇಶದ ಬಹುಭಾಗದಲ್ಲಿ ಸಮರ್ಪಕ ನೀರಾವರಿ ವ್ಯವಸ್ಥೆಯೇ ಇಲ್ಲ. ಇಂತಹ ಸಂದರ್ಭದಲ್ಲಿ ಉಷ್ಣ ಹವೆ ನೀರನ್ನು ವೇಗವಾಗಿ ಆವಿಯಾಗಿಸುತ್ತಿದೆ. ರೈತರು ಅಂತರ್ಜಲದತ್ತ ಮುಖ ಮಾಡಬೇಕಾಗಿದೆ. ಆದರೆ ಭೂಗರ್ಭ ಜಲವೂ ಅನೇಕ ಕಡೆ ಕುಸಿಯುತ್ತಿದೆ. ಜೂನ್‌ನಿಂದ ಸೆಪ್ಟೆಂಬರ್‌ವರೆಗಿನ ಮಳೆಗಾಲದಲ್ಲಿಯೂ ಮಳೆಯ ಕೊರತೆ ಎದುರಾಗುವ ಸಾಧ್ಯತೆ ಇದೆ. ಇದು ದೇಶದ ಸಂಪೂರ್ಣ ಕೃಷಿ ಆರ್ಥಿಕತೆಗೇ ಹೊಡೆತ ನೀಡಬಹುದು. ಕೃಷಿಯ ಭವಿಷ್ಯವೇ ಬರಿದಾಗಬಹುದು ಎಂದು ತಜ್ಞರು ವಿಶ್ಲೇಷಿಸುತ್ತಿದ್ದಾರೆ.

ಕೃಷಿ ಕ್ಷೇತ್ರಕ್ಕೆ ಇದು ಒಂದು ರೀತಿಯ ಬಿಕ್ಕಟ್ಟಾದರೆ, ಮತ್ತೊಂದು ರಸಗೊಬ್ಬರದ ಬಿಕ್ಕಟ್ಟು. ಪಶ್ಚಿಮ ಏಷ್ಯಾದ ಯುದ್ಧ, ಹಡಗು ಸಾಗಣೆ ಮಾರ್ಗಗಳ ಅಸ್ಥಿರತೆ, ನೈಸರ್ಗಿಕ ಅನಿಲದ ಬೆಲೆ ಏರಿಕೆ- ಇವೆಲ್ಲವೂ ರಸಗೊಬ್ಬರ ಉತ್ಪಾದನೆ ಮತ್ತು ಪೂರೈಕೆಯನ್ನು ಅಸ್ತವ್ಯಸ್ತಗೊಳಿಸಿವೆ. ಹಾರ್ಮುಜ್ ಜಲಸಂಧಿ ಮುಚ್ಚಿರುವುದಿಂದ ಜಗತ್ತಿನ ಪ್ರಮುಖ ರಸಗೊಬ್ಬರ ವ್ಯಾಪಾರ ಮಾರ್ಗವೇ ಸ್ಥಗಿತಗೊಂಡಿದೆ. ಜಗತ್ತಿನ ಪ್ರಮುಖ ಉತ್ಪಾದಕ ರಾಷ್ಟ್ರಗಳು, ದೇಶೀಯ ಬೇಡಿಕೆಗೆ ಆದ್ಯತೆ ನೀಡುತ್ತಿರುವುದರಿಂದ ಭಾರತಕ್ಕೆ ಆಮದು ಕಡಿಮೆಯಾಗುತ್ತಿದೆ. ರೈತನಿಗೆ ಸಮಯಕ್ಕೆ ಸರಿಯಾಗಿ ಗೊಬ್ಬರ ಸಿಗದಿದ್ದರೆ, ಬೆಳೆ ನಲುಗುತ್ತದೆ, ಉತ್ಪಾದನೆ ಕುಸಿಯುತ್ತದೆ. ಸಂಪೂರ್ಣ ಕೃಷಿ ಚಕ್ರವೇ ಅಸ್ತವ್ಯಸ್ತಗೊಳ್ಳುತ್ತದೆ.

ಕೇಂದ್ರ ರಾಸಾಯನಿಕ ಮತ್ತು ರಸಗೊಬ್ಬರ ಸಚಿವಾಲಯ ನೀಡಿರುವ ಇತ್ತೀಚಿನ ಮಾಹಿತಿಯಂತೆ, 2026ರ ಮುಂಗಾರು ಹಂಗಾಮಿಗೆ ಸುಮಾರು 390.54 ಲಕ್ಷ ಮೆಟ್ರಿಕ್ ಟನ್ ಗೊಬ್ಬರ ಅವಶ್ಯಕತೆ ಇದೆ. ಅದರಲ್ಲಿ ಮೇ 11ರ ವೇಳೆಗೆ ಸುಮಾರು 199.65 ಲಕ್ಷ ಮೆಟ್ರಿಕ್ ಟನ್ ದಾಸ್ತಾನು ಮಾತ್ರ ಲಭ್ಯವಿದೆ. ನಿನ್ನೆಯಷ್ಟೇ ಪ್ರಧಾನಿ ಮೋದಿಯವರು ದೇಶದ ರೈತರಲ್ಲಿ ರಾಸಾಯನಿಕ ಗೊಬ್ಬರ ಬಳಕೆಯನ್ನು ಕಡಿಮೆ ಮಾಡಿ, ದೇಶ ದುಃಸ್ಥಿತಿಯಲ್ಲಿದೆ ಎಂದು ಮನವಿ ಮಾಡಿಕೊಂಡಿದ್ದಾರೆ. ಅಂದರೆ, ಕೃಷಿ ಕ್ಷೇತ್ರದ ಮೇಲೆ ಯುದ್ಧ ಗಂಭೀರ ಪರಿಣಾಮ ಬೀರಿದೆ, ಅದನ್ನು ಪ್ರಧಾನಿ ಅರಿಯುವಲ್ಲಿ ವಿಫಲವಾಗಿದ್ದಾರೆ, ಈಗ ರೈತರಿಗೆ ಬೋಧನೆ ಮಾಡುತ್ತಿದ್ದಾರೆ.

ದುರಂತವೆಂದರೆ, ಉಷ್ಣ ಹವೆ ಮತ್ತು ಗೊಬ್ಬರ ಕೊರತೆ- ಈ ಎರಡೂ ಸಂಕಷ್ಟಗಳ ವಿರುದ್ಧ ಸರ್ಕಾರಗಳ ಸಿದ್ಧತೆ ಇನ್ನೂ ತಾತ್ಕಾಲಿಕ ಕ್ರಮಗಳ ಮಟ್ಟದಲ್ಲೇ ಉಳಿದಿದೆ. ಉಷ್ಣತೆಯನ್ನು ತಡೆದುಕೊಳ್ಳಬಲ್ಲ ಬೀಜಗಳ ಸಂಶೋಧನೆ, ನೀರಿನ ಸಮರ್ಥ ನಿರ್ವಹಣೆ, ಹವಾಮಾನ ಆಧರಿತ ಕೃಷಿ ಸಲಹೆಗಳು, ಸ್ಥಳೀಯ ಮಟ್ಟದಲ್ಲಿ ಗೊಬ್ಬರ ಉತ್ಪಾದನೆ- ಇವೆಲ್ಲವೂ ವರ್ಷಗಳಿಂದ ಚರ್ಚೆಯಾಗುತ್ತಿದೆಯೇ ಹೊರತು ಗಟ್ಟಿಯಾದ ನೀತಿಗಳಾಗಿ ರೂಪುಗೊಂಡಿಲ್ಲ. ರಾಜ್ಯ-ಕೇಂದ್ರ ಸರ್ಕಾರಗಳು ಸಮನ್ವಯದೊಂದಿಗೆ ಕೆಲಸ ಮಾಡಿದ್ದು ಕಾಣುತ್ತಿಲ್ಲ.

ಇನ್ನು ರೈತರ ಬೆನ್ನೆಲುಬಾಗಿ ಕೆಲಸ ಮಾಡಬೇಕಿದ್ದ ಕೃಷಿ ಅಧಿಕಾರಿಗಳು, ವಿಜ್ಞಾನಿಗಳು ಬಹುರಾಷ್ಟ್ರೀಯ ಬೀಜ, ಗೊಬ್ಬರ, ಕೀಟನಾಶಕ ಕಂಪನಿಗಳ ಏಜೆಂಟ್‌ಗಳಂತೆ ಕೆಲಸ ಮಾಡಿದ್ದೇ ಹೆಚ್ಚು. ತಳ ಹಂತದ ಕೃಷಿ ಅಧಿಕಾರಿಗಳಂತೂ ಕ್ಷೇತ್ರ ಕಾರ್ಯ ನಡೆಸಿದ ಇತಿಹಾಸವೇ ಇಲ್ಲ. ಹೀಗಾಗಿಯೇ ಸೂಕ್ತ ಮಾರ್ಗದರ್ಶನವಿಲ್ಲದೆ, ಮಾರುಕಟ್ಟೆಯಿಲ್ಲದೆ ಗ್ರಾಮೀಣ ರೈತರು ಬಸವಳಿದಿದ್ದಾರೆ. ಬೆಟ್ಟದಷ್ಟು ಸಾಲವನ್ನು ಹೊತ್ತುಕೊಂಡೇ ತಿರುಗುತ್ತಿದ್ದಾರೆ. ಆತ್ಮಹತ್ಯೆಗೆ ಶರಣಾಗುತ್ತಿದ್ದಾರೆ. ಭಾರತದಲ್ಲಿ ಕಳೆದ ಐದು ವರ್ಷಗಳಲ್ಲಿ- 2020ರಿಂದ 2024ರವರೆಗೆ- ಕೃಷಿ ಕ್ಷೇತ್ರಕ್ಕೆ ಸಂಬಂಧಿಸಿದಂತೆ ಸುಮಾರು 54 ಸಾವಿರಕ್ಕೂ ಹೆಚ್ಚು ರೈತರು ಮತ್ತು ಕೃಷಿಕಾರ್ಮಿಕರು ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಎಂದು ಅಂಕಿ-ಅಂಶಗಳು ಸೂಚಿಸುತ್ತವೆ.

ಇಂದು ಭಾರತ ಎದುರಿಸುತ್ತಿರುವ ಭೀಕರ ಸಮಸ್ಯೆಗಳಲ್ಲಿ ಕೃಷಿ ಕ್ಷೇತ್ರದ ಬಿಕ್ಕಟ್ಟು ಪ್ರಮುಖ ಎನ್ನಬಹುದು. ಸರ್ಕಾರಗಳ ನೀತಿಗಳಿಂದಾಗಿ ಕೃಷಿ ಕ್ಷೇತ್ರ ಕಾರ್ಪೊರೇಟ್ ಕುಳಗಳ ಮಡಿಲು ಸೇರುತ್ತಿದೆ. ಗ್ರಾಮೀಣ ಜನತೆ ಉದ್ಯೋಗವನ್ನರಸಿ ವಲಸೆ ಹೋಗುವ ದುಃಸ್ಥಿತಿ ಎದುರಾಗಿ ಬಹುತೇಕ ಹಳ್ಳಿಗಳು ಬಿಕೋ ಎನ್ನುತ್ತಿವೆ. ದೇಶದೆಲ್ಲೆಡೆ ರೈತರು ಸಂಘಟಿತರಾಗಿ ಸರ್ಕಾರದ ನೀತಿಗಳ ವಿರುದ್ಧ ತಮ್ಮ ಘನತೆಯ ಬದುಕಿಗಾಗಿ ಹೋರಾಟ, ಪ್ರತಿಭಟನೆ, ಜಾಥಾ, ಸತ್ಯಾಗ್ರಹ ನಡೆಸುತ್ತಲೇ ಇದ್ದಾರೆ.

ಇಂತಹ ದಿಕ್ಕೆಟ್ಟ ಸ್ಥಿತಿಯಲ್ಲಿ, ಉಷ್ಣ ಹವೆ ಮತ್ತು ಗೊಬ್ಬರದ ಕೊರತೆ ಭಾರತದ ಕೃಷಿಯನ್ನು ಇನ್ನಷ್ಟು ಬಿಕ್ಕಟ್ಟಿಗೆ ದೂಡಲಿದೆ. ಪ್ರಕೃತಿಯ ಉಗ್ರ ಸ್ವರೂಪ ಮತ್ತು ಜಾಗತಿಕ ಮಾರುಕಟ್ಟೆಯ ಅಸ್ಥಿರತೆಯ ನಡುವೆ ರೈತ ನಲುಗುತ್ತಿದ್ದಾನೆ. ಆದರೆ ಅವನ ಸಹನೆಗೂ ಮಿತಿಯಿದೆ. ಕೃಷಿ ಕುಸಿದರೆ ಅದು ಕೇವಲ ರೈತನ ಕುಸಿತವಲ್ಲ. ಅದು ಆಹಾರ ಭದ್ರತೆ, ಗ್ರಾಮೀಣ ಬದುಕು ಮತ್ತು ದೇಶದ ಆರ್ಥಿಕ ಸ್ಥಿರತೆಯ ಮೇಲಿನ ದೊಡ್ಡ ಹೊಡೆತ ಬೀಳಲಿದೆ. ಈಗಲೂ ನಮ್ಮನ್ನಾಳುವವರು ಚುನಾವಣೆ, ಅಧಿಕಾರ, ಹಣವೆಂಬ ಮೋಹಿನಿಯ ಹಿಂದೆ ಬಿದ್ದರೆ- ಅವರೂ ಉಳಿಯುವುದಿಲ್ಲ, ಈ ಜಗತ್ತೂ ಉಳಿಯುವುದಿಲ್ಲ.

ಒಳಮೀಸಲು ರೋಸ್ಟರ್ ಬಿಂದು ಬಿಡುಗಡೆ; ಅಲೆಮಾರಿಗಳಿಗೆ ನಾಲ್ಕು ಹುದ್ದೆ ಮೀಸಲು

ಪರಿಶಿಷ್ಟ ಜಾತಿಗಳ ಮೀಸಲಾತಿ ವರ್ಗೀಕರಣ (ಒಳಮೀಸಲಾತಿ) ಪ್ರಮಾಣ ಸಂಬಂಧ ಇತ್ತೀಚೆಗೆ ಸಚಿವ ಸಂಪುಟ ಕೈಗೊಂಡ ನಿರ್ಧಾರದ ಅನ್ವಯ, 400 ಬಿಂದುಗಳ ರೋಸ್ಟರ್ ಪಟ್ಟಿಯನ್ನು ರಾಜ್ಯ ಸರ್ಕಾರ ಬಿಡುಗಡೆ ಮಾಡಿದೆ. ಜೊತೆಗೆ ಒಳಮೀಸಲಾತಿ ಬಿಂದುಗಳನ್ನು ಗುರುತಿಸಿದೆ.

ಎಸ್ಸಿ ಮೀಸಲಾತಿಯನ್ನು ಮೂರು ಭಾಗಗಳಾಗಿ ವಿಭಾಗಿಸಿರುವ ಸರ್ಕಾರ ಪ್ರವರ್ಗ ಎಗೆ ಶೇ. 5.25, ಬಿಗೆ ಶೇ. 5.25 ಮತ್ತು ಸಿಗೆ ಶೇ. 4.5ರಷ್ಟು ಪಾಲನ್ನು ಮೀಸಲಿರಿಸಿದೆ. ಪ್ರವರ್ಗ ಸಿನಲ್ಲಿ ಸ್ಪೃಶ್ಯ ಸಮುದಾಯಗಳೊಂದಿಗೆ ಅಲೆಮಾರಿಗಳನ್ನೂ ಸೇರಿಸಿರುವುದರಿಂದ ಅಲೆಮಾರಿಗಳ ಪ್ರತಿರೋಧವನ್ನು ಶಮನ ಮಾಡಲು ಶೇ. 4.5ರೊಳಗೆ ಶೇ.20ರಷ್ಟು ಪ್ರಾತಿನಿಧ್ಯವನ್ನು ಕೊಡುವುದಾಗಿ ಸರ್ಕಾರ ಹೇಳಿತ್ತು. ಅದರನ್ವಯ ಅಲೆಮಾರಿಗಳಿಗೆ ನಾಲ್ಕು ಬಿಂದುಗಳನ್ನು ಸರ್ಕಾರ ಗುರುತಿಸಿ, 56,432 ಹುದ್ದೆಗಳ ಬೃಹತ್ ನೇಮಕಾತಿ ಪ್ರಕ್ರಿಯೆಗೆ ಮುಂದಾಗಿದೆ.

ಪರಿಶಿಷ್ಟರಲ್ಲಿನ ಮೂರು ವರ್ಗಗಳಿಗೂ ಏಕಕಾಲದಲ್ಲಿ ಹುದ್ದೆಗಳು ಸಿಗದೆ ಹೋದಲ್ಲಿ, ಅಂತಹ ನೇಮಕಾತಿ ಪ್ರಕ್ರಿಯೆಯ ವೇಳೆ ಪರಿಶಿಷ್ಟ ಜಾತಿ ಮೀಸಲಾತಿಯನ್ನು ಎಸ್ಸಿ ಜನರಲ್ ಎಂದು ಪರಿಗಣಿಸಲು ಸರ್ಕಾರ ನಿರ್ಧರಿಸಿದೆ. ಸರ್ಕಾರ ಬಿಡುಗಡೆ ಮಾಡಿರುವ ಆದೇಶದ ಅನುಬಂಧ-1ರಲ್ಲಿ 400 ಬಿಂದುಗಳ ಸಾಮಾನ್ಯ ರೋಸ್ಟರ್ ಪಟ್ಟಿಯನ್ನು ತೋರಿಸಲಾಗಿದ್ದು, ಅನುಬಂಧ-2ರಲ್ಲಿ ಬೃಹತ್ ನೇಮಕಾತಿಗೆ ಅನ್ವಯವಾಗುವಂತೆ ಎಸ್ಸಿ ಒಳಮೀಸಲು ಸ್ಥಾನಗಳನ್ನು ಗುರುತಿಸಲಾಗಿದೆ.

ಮೋದಿ - ಇಂದಿರಾ ; ಯಾವುದು ಸತ್ಯ ಯಾವುದು ಸುಳ್ಳು?



ಇಂದಿನ ಡಿಜಿಟಲ್ ಯುಗದಲ್ಲಿ ಚುನಾವಣೆಯನ್ನು ಗೆಲ್ಲಲು ಕೇವಲ ಜನರ ಬೆಂಬಲವಷ್ಟೇ ಸಾಲದು, ಬದಲಿಗೆ ತಂತ್ರಜ್ಞಾನದ ಕುಟಿಲ ಬಳಕೆಯೂ ಬೇಕು ಎಂಬುದನ್ನು ಬಿಜೆಪಿ ಐಟಿ ಸೆಲ್ ಸಾಬೀತುಪಡಿಸುತ್ತಿದೆ. ಇತ್ತೀಚೆಗೆ ಪ್ರಧಾನಿ ಇಂದಿರಾ ಗಾಂಧಿಯವರ ಹೆಸರಿನಲ್ಲಿ ಹರಡಲಾದ ನಕಲಿ ಪತ್ರಿಕಾ ವರದಿಯು ಈ ವ್ಯವಸ್ಥಿತ ಸುಳ್ಳಿನ ಜಾಲದ ಒಂದು ಸಣ್ಣ ಭಾಗವಷ್ಟೇ. ಮೋದಿ ಸರ್ಕಾರದ ವೈಫಲ್ಯಗಳನ್ನು ಮರೆಮಾಚಲು ಮತ್ತು ವಿರೋಧ ಪಕ್ಷಗಳನ್ನು ಹಣಿಯಲು ಮಾಹಿತಿ ತಂತ್ರಜ್ಞಾನವನ್ನು ಬಿಜೆಪಿ ಹೇಗೆ ದುರ್ಬಳಕೆ ಮಾಡಿಕೊಳ್ಳುತ್ತಿದೆ ಎಂಬುವ ಸಾವಿರ ಸಾಕ್ಷ್ಯಗಳಿಗೆ ಈಗ ಇನ್ನೊಂದು ಸೇರಿಕೊಂಡಿದೆ ಅಷ್ಟೇ.

ಡಿಜಿಟಲ್ ಯುಗದಲ್ಲಿ ರಾಜಕೀಯ ಲಾಭಕ್ಕಾಗಿ ಹಳೆಯ ಪತ್ರಿಕೆಗಳ ಮುಖಪುಟಗಳನ್ನು ತಿದ್ದಿ () ಜನರನ್ನು ಹಾದಿ ತಪ್ಪಿಸುವುದು ಒಂದು ಅಪಾಯಕಾರಿ ಪ್ರವೃತ್ತಿಯಾಗಿ ಬೆಳೆಯುತ್ತಿದೆ. ಇತ್ತೀಚೆಗೆ ದಿ ಹಿಂದೂ ಪತ್ರಿಕೆಯ 1967ರ ಜೂನ್ 6ರ ಮುಖಪುಟವನ್ನು ಎಡಿಟ್ ಮಾಡಿ, ಅಂದಿನ ಪ್ರಧಾನಿ ಇಂದಿರಾ ಗಾಂಧಿಯವರು ''ಚಿನ್ನ ಖರೀದಿಸಬೇಡಿ'' ಎಂದು ಕರೆ ನೀಡಿದ್ದರು ಎಂಬ ಸುಳ್ಳು ಸುದ್ದಿಯನ್ನು ಬಿಜೆಪಿ ನಾಯಕರು ದೇಶಾದ್ಯಂತ ಹಂಚಿಕೊಂಡಿದ್ದಾರೆ. ಪ್ರಧಾನಿ ಮೋದಿಯವರ ಹೇಳಿಕೆಯನ್ನು ಸಮರ್ಥಿಸಿಕೊಳ್ಳುವ ಭರದಲ್ಲಿ ನಡೆದ ಈ ಫೇಕ್ ನ್ಯೂಸ್ ಅಭಿಯಾನ ಈಗ ಬಿಜೆಪಿ ಪಾಲಿಗೆ ಮುಜುಗರ ತಂದಿಟ್ಟಿದೆ.

ವೈರಲ್ ಚಿತ್ರದಲ್ಲೇನಿದೆ? ಸಾಮಾಜಿಕ ಮಾಧ್ಯಮಗಳಲ್ಲಿ ಹರಿದಾಡುತ್ತಿರುವ ಚಿತ್ರದ ಪ್ರಕಾರ, 1967ರಲ್ಲಿ ಅಂದಿನ ಪ್ರಧಾನಿ ಇಂದಿರಾ ಗಾಂಧಿಯವರು ದೇಶದ ವಿದೇಶಿ ವಿನಿಮಯವನ್ನು ಉಳಿಸುವ ಸಲುವಾಗಿ ''ರಾಷ್ಟ್ರೀಯ ಶಿಸ್ತು'' ಪಾಲಿಸುವಂತೆ ಜನತೆಗೆ ಮನವಿ ಮಾಡಿದ್ದರು. ಈ ಮನವಿಯಲ್ಲಿ ಜನರು ಚಿನ್ನವನ್ನು ಖರೀದಿಸಬಾರದು ಎಂಬ ಶೀರ್ಷಿಕೆ ಎದ್ದು ಕಾಣುವಂತೆ ಚಿತ್ರಿಸಲಾಗಿದೆ. ಆದರೆ 1960ರ ದಶಕದಲ್ಲಿ ಇಂದಿರಾ ಗಾಂಧಿ ನೇತೃತ್ವದ ಸರ್ಕಾರವು ಚಿನ್ನದ ಮೇಲೆ ಕಠಿಣ ನಿಯಂತ್ರಣಗಳನ್ನು ಹೇರಿತ್ತು. ಆ ನಿಯಮಗಳು ಏನು? ಹೇಗಿತ್ತು ಅನ್ನೋ ಬಗ್ಗೆ ಲೇಖನದ ಉತ್ತರಾರ್ಧದಲ್ಲಿ ವಿವರಿಸಲಾಗುವುದು. ಅದಕ್ಕೂ ಮುನ್ನ ಈ ಕೆಳಗಿನ ಅಂಶವನ್ನು ವಿಶ್ಲೇಷಿಸೋಣ.

ಮೋದಿ ಹೇಳಿದ್ದೇನು? ದೇಶಪ್ರೇಮ, ರಾಷ್ಟ್ರಭಕ್ತಿ, ದೇಶಕ್ಕಾಗಿ ತ್ಯಾಗ ಮುಂತಾದವುಗಳ ವೈಫಲ್ಯದ ನಂತರ ಪ್ರಧಾನಿ ಮೋದಿ ಅವರು ಮೇ 10 ರಂದು ಹೈದರಾಬಾದಿನಲ್ಲಿ ದೇಶದ ಪ್ರಜೆಗಳು ತ್ಯಾಗ ಎಂಬ ಸೊಂಟದ ಪಟ್ಟಿಯನ್ನು ಬಿಗಿ ಮಾಡಬೇಕಾದ ಸಪ್ತಸೂತ್ರಗಳನ್ನು ನೀಡಿದ್ದರು. ಚಿನ್ನದ ಖರೀದಿಯನ್ನು ನಿಲ್ಲಿಸಿ, ಮನೆಯಿಂದಲೇ ಕೆಲಸ ಮಾಡಿ, ಇಂಧನ-ತೈಲ ಬಳಕೆ ಕಡಿಮೆ ಮಾಡಿ, ಅಡುಗೆ ಅನಿಲ ಉಳಿತಾಯ ಮಾಡಿ, ರಸಗೊಬ್ಬರ ಬಳಕೆ ಕಡಿಮೆ ಮಾಡಿ-ಸಾವಯವ ಕೃಷಿ ಅಳವಡಿಸಿಕೊಳ್ಳಿ, ವಿದೇಶಗಳಿಗೆ ಹೋಗುವುದನ್ನು ನಿಲ್ಲಿಸಿ, ಸ್ವದೇಶಿ ವಸ್ತುಗಳನ್ನು ಬಳಸಿ ಅನ್ನೋದು ಮೋದಿ ಕೊಟ್ಟ ತ್ಯಾಗದ ಕರೆಯಾಗಿತ್ತು. ಇದೊಂದು ಕಡೆ ಆದರೆ ಚಿನ್ನ ಮತ್ತು ಬೆಳ್ಳಿ ಆಮದು ಮೇಲಿನ ಸುಂಕವನ್ನು ಕೇಂದ್ರ ಸರ್ಕಾರ ಮೇ 13ರ ಮಧ್ಯರಾತ್ರಿಯಿಂದ ಜಾರಿಗೆ ಬರುವಂತೆ ಶೇಕಡಾ 6ರಿಂದ ಶೇಕಡಾ 15ಕ್ಕೆ ಹೆಚ್ಚಿಸಿದೆ. ಇದು ಇನ್ನೊಂದು ಕಡೆ.

ಮೋದಿ ಅವರ ತ್ಯಾಗದ ಸೂತ್ರಗಳಿಗೆ ಸಾಮಾನ್ಯ ಜನರಿಂದ ಹಿಡಿದು ವಿಪಕ್ಷಗಳೂ ಟೀಕೆ ಮಾಡಿದ್ದವು. ''ಮೋದಿಯವರ ಆಡಳಿತದಲ್ಲಿ ದೇಶದ ಆರ್ಥಿಕ ಸ್ಥಿತಿ ಎಷ್ಟು ಹದಗೆಟ್ಟಿದೆ ಎಂದರೆ, ಜನರಿಗೆ ಚಿನ್ನ ಕೊಳ್ಳಬೇಡಿ ಎಂದು ಹೇಳುವ ಸ್ಥಿತಿ ಬಂದಿದೆ'' ಎಂದು ಕಾಂಗ್ರೆಸ್ ನಾಯಕರು ವ್ಯಂಗ್ಯವಾಡಿದ್ದರು.

ಕಾಂಗ್ರೆಸ್‌ನ ಈ ಟೀಕೆಗೆ ತಿರುಗೇಟು ನೀಡಲು ಬಿಜೆಪಿ ಐಟಿ ಸೆಲ್ ಮತ್ತು ನಾಯಕರು 1967ರ ಇಂದಿರಾ ಗಾಂಧಿಯರು ಹೇಳಿದ್ದರು ಎನ್ನಲಾದ ನಕಲಿ ಪತ್ರಿಕಾ ವರದಿಯನ್ನು ಅಸ್ತ್ರವಾಗಿ ಬಳಸಿಕೊಂಡರು. ಕರ್ನಾಟಕದ ವಿರೋಧ ಪಕ್ಷದ ನಾಯಕ ಆರ್ ಅಶೋಕ್ ಅವರು ಈ ನಕಲಿ ಪೋಸ್ಟರ್ ಹಂಚಿಕೊಂಡು ಕಾಂಗ್ರೆಸ್ ವಿರುದ್ಧ ವಾಗ್ದಾಳಿ ನಡೆಸಿದ್ದರು.

''ಕಾಂಗ್ರೆಸ್ಸಿಗರ ಆರ್ಥಿಕ ಅಜ್ಞಾನ ಮತ್ತು ಅಂಧ ವಿರೋಧಕ್ಕೆ ಇದಕ್ಕಿಂತ ಸಾಕ್ಷಿ ಬೇಕೆ? ಇತಿಹಾಸದ ಅರಿವೂ ಇಲ್ಲದ, ಆರ್ಥಿಕ ನಿರ್ವಹಣೆಯ ಗಂಧ-ಗಾಳಿಯೂ ಗೊತ್ತಿಲ್ಲದ ಇಂದಿನ ಕಾಂಗ್ರೆಸ್ ನಾಯಕರಿಗೆ ಪ್ರಧಾನಿ ನರೇಂದ್ರ ಮೋದಿ ಅವರ ಪ್ರತಿಯೊಂದು ನಡೆಯನ್ನೂ ವಿರೋಧಿಸುವುದೇ ಒಂದು ನಿತ್ಯ ಕಾಯಕವಾಗಿಬಿಟ್ಟಿದೆ. ರಾಷ್ಟ್ರದ ಹಿತದೃಷ್ಟಿಯಿಂದ ಮೋದಿ ಅವರು ನೀಡುವ ದೂರದೃಷ್ಟಿಯ ಆರ್ಥಿಕ ಸಲಹೆಗಳನ್ನು ಲೇವಡಿ ಮಾಡುವ ಈ ಕಾಂಗ್ರೆಸ್ಸಿಗರು ಒಮ್ಮೆ ತಮ್ಮದೇ ಪಕ್ಷದ ಇತಿಹಾಸವನ್ನು ತಿರುವಿ ಹಾಕಲಿ. 1967 ರಲ್ಲಿ ಅಂದಿನ ಪ್ರಧಾನಿ ಇಂದಿರಾ ಗಾಂಧಿಯವರು ದೇಶದ ಆರ್ಥಿಕ ಶಿಸ್ತಿಗಾಗಿ ಚಿನ್ನ ಕೊಳ್ಳಬೇಡಿ ಎಂದು ಜನರಲ್ಲಿ ಮನವಿ ಮಾಡಿದ್ದರು. ದೊರೆ ಮಾಡಿದರೆ ದಂಡವಿಲ್ಲ ಎಂಬಂತೆ, ಇಂದಿರಾ ಗಾಂಧಿ ಅಥವಾ ಸೋನಿಯಾ ಗಾಂಧಿ ಅವರ ಕಾಲದಲ್ಲಿ ಅಂದಿನ ಕಾಂಗ್ರೆಸ್ ಸರ್ಕಾರಗಳು ಕರೆ ನೀಡಿದರೆ ಅದು ''ಆರ್ಥಿಕ ನೀತಿ''. ಆದರೆ ರಾಷ್ಟ್ರದ ಹಿತದೃಷ್ಟಿಯಿಂದ ಮೋದಿ ಅವರು ಕರೆ ನೀಡಿದರೆ ಅದು ಇವರಿಗೆ ತಪ್ಪಾಗಿ ಕಾಣುತ್ತಿರುವುದು ಕಾಂಗ್ರೆಸ್ ನಾಯಕರ ಎಡಬಿಡಂಗಿತನಕ್ಕೆ ಹಿಡಿದ ಕನ್ನಡಿ. ಕೇವಲ ರಾಜಕೀಯ ಕಾರಣಕ್ಕಾಗಿ ದೇಶದ ಆರ್ಥಿಕತೆಯ ಬಗ್ಗೆ ಯಾವುದೇ ತರ್ಕವಿಲ್ಲದೆ ಮಾತನಾಡುವ ಕಾಂಗ್ರೆಸ್ ನಾಯಕರು ಮೊದಲು ಆರ್ಥಿಕತೆಯ ಮೂಲಪಾಠಗಳನ್ನು ಕಲಿಯಲಿ. ಮೋದಿಯವರನ್ನು ವಿರೋಧಿಸುವ ಭರದಲ್ಲಿ ದೇಶದ ಹಿತವನ್ನು ಬಲಿ ಕೊಡಬೇಡಿ '' ಎಂದು ಟ್ವೀಟ್ ಮಾಡಿದ್ದರು.

ಆದರೆ, ಈ ಹಂತದಲ್ಲಿ ಬಿಜೆಪಿ ನಾಯಕರು ತಾವು ಹಂಚಿಕೊಳ್ಳುತ್ತಿರುವುದು ಒಂದು ಫ್ಯಾಬ್ರಿಕೇಟೆಡ್ () ಚಿತ್ರ ಎಂಬ ಕನಿಷ್ಠ ಸತ್ಯಾಂಶವನ್ನು ಪರಿಶೀಲಿಸುವ ಗೋಜಿಗೆ ಹೋಗದಿರುವುದು ದುರದೃಷ್ಟಕರ.

ದಿ ಹಿಂದೂ ಪತ್ರಿಕೆಯ ಸ್ಪಷ್ಟೀಕರಣ:-

ಈ ಚಿತ್ರ ವ್ಯಾಪಕವಾಗಿ ಶೇರ್ ಆದ ಬೆನ್ನಲ್ಲೇ, ದಿ ಹಿಂದೂ ಪತ್ರಿಕಾ ಸಂಸ್ಥೆಯು ಇದು ನಕಲಿ ಎಂದು ಅಧಿಕೃತವಾಗಿ ಸ್ಪಷ್ಟಪಡಿಸಿದೆ. ಈ ಕುರಿತು ಪತ್ರಿಕೆಯ ಹಿರಿಯ ಪತ್ರಕರ್ತ ಬಿ. ಕೋಳಪ್ಪನ್ ಅವರು ಎಕ್ಸ್ () ತಾಣದಲ್ಲಿ ಪೋಸ್ಟ್ ಮಾಡಿ, ''ಸಾಮಾಜಿಕ ಜಾಲತಾಣಗಳಲ್ಲಿ ಹಂಚಿಕೆಯಾಗುತ್ತಿರುವ ಜೂನ್ 6, 1967ರ ಪತ್ರಿಕೆಯ ಪುಟವು ಡಿಜಿಟಲ್ ಆಗಿ ಮಾರ್ಪಡಿಸಲ್ಪಟ್ಟಿದೆ. ಅಂದು ಬಿಡುಗಡೆಯಾದ ನಿಜವಾದ ಪುಟವೇ ಬೇರೆ ಇದೆ. ಆಧುನಿಕ ತಂತ್ರಜ್ಞಾನ ಬಳಸಿ ರಾಷ್ಟ್ರೀಯ ಪತ್ರಿಕೆಯ ಮುಖಪುಟವನ್ನೇ ಬದಲಿಸುವ ಮಟ್ಟಕ್ಕೆ ಸುಳ್ಳು ಸುದ್ದಿಗಳು ತಲುಪಿವೆ'' ಎಂದು ಆತಂಕ ವ್ಯಕ್ತಪಡಿಸಿದ್ದಾರೆ.

ಹಿಂದೂ ಪತ್ರಿಕೆ ಕ್ಲಾರಿಫಿಕೇಷನ್ ಕೊಟ್ಟದ್ದು

ಪತ್ರಿಕಾ ಸಂಸ್ಥೆಯು ತನ್ನ ಓದುಗರಿಗೆ ಎಚ್ಚರಿಕೆ ನೀಡುತ್ತಾ, ''ನಮ್ಮ ಆರ್ಕೈವ್‌ಗಳಲ್ಲಿ ಅಂತಹ ಯಾವುದೇ ಪುಟವಿಲ್ಲ. ಓದುಗರು ಇಂತಹ ಚಿತ್ರಗಳನ್ನು ಹಂಚಿಕೊಳ್ಳುವ ಮೊದಲು ಸತ್ಯಾಸತ್ಯತೆಯನ್ನು ಪರಿಶೀಲಿಸಬೇಕು'' ಎಂದು ಮನವಿ ಮಾಡಿದೆ. ರಾಜಕೀಯ ಪಕ್ಷಗಳು ಪರಸ್ಪರ ಟೀಕೆಗೆ ಇಂತಹ ಚಿತ್ರಗಳನ್ನು ಆಯುಧವಾಗಿ ಬಳಸುವ ಪ್ರವೃತ್ತಿ ಹೆಚ್ಚುತ್ತಿರುವುದು ಆತಂಕಕಾರಿ ಬೆಳವಣಿಗೆಯೇ ಸರಿ.

ಇನ್ನು ಈ ಘಟನೆಯು ಸಾಮಾಜಿಕ ಜಾಲತಾಣಗಳಲ್ಲಿ ಭಾರೀ ಆಕ್ರೋಶಕ್ಕೆ ಕಾರಣವಾಗಿದೆ. ರಾಜಕೀಯ ವಿರೋಧಕ್ಕಾಗಿ ಇತಿಹಾಸವನ್ನು ಮತ್ತು ರಾಷ್ಟ್ರೀಯ ಪತ್ರಿಕೆಗಳ ವಿಶ್ವಾಸಾರ್ಹತೆಯನ್ನು ದುರ್ಬಳಕೆ ಮಾಡಿಕೊಳ್ಳುವುದರಲ್ಲಿ ''ಬಿಜೆಪಿಯವರು ಎತ್ತಿದ ಕೈ'' ಎಂಬ ಟೀಕೆಗಳು ಕೇಳಿಬರುತ್ತಿವೆ. ಸತ್ಯಾಂಶವನ್ನು ಪರಿಶೀಲಿಸದೆ ಜವಾಬ್ದಾರಿಯುತ ಸ್ಥಾನದಲ್ಲಿರುವ ವಿರೋಧ ಪಕ್ಷದ ನಾಯಕರೇ ಇಂತಹ ಸುಳ್ಳು ಮಾಹಿತಿಯನ್ನು ಹಂಚಿಕೊಂಡಿರುವುದು ಸಾರ್ವಜನಿಕ ವಲಯದಲ್ಲಿ ಚರ್ಚೆಗೆ ಗ್ರಾಸವಾಗಿದೆ.

ಅಂದಿನ ಸರ್ಕಾರದ ನಿಜವಾದ ಚಿನ್ನದ ನಿಯಂತ್ರಣ ನೀತಿಗಳು ಹೇಗಿತ್ತು?

ವೈರಲ್ ಆಗಿರುವ ಪತ್ರಿಕೆಯ ಕ್ಲಿಪ್ ನಕಲಿಯಾಗಿದ್ದರೂ ಸಹ, 1960ರ ದಶಕದಲ್ಲಿ ಇಂದಿರಾ ಗಾಂಧಿ ನೇತೃತ್ವದ ಸರ್ಕಾರವು ಚಿನ್ನದ ಮೇಲೆ ಕಠಿಣ ನಿಯಂತ್ರಣಗಳನ್ನು ಹೇರಿತ್ತು ಎಂಬುದು ಐತಿಹಾಸಿಕ ಸತ್ಯ. ಈ ನಿಯಮಗಳು ಹೇಗಿದ್ದವು ಮತ್ತು ಯಾಕೆ ಜಾರಿಗೆ ಬಂದವು ಎಂಬುದು ಆಸಕ್ತಿದಾಯಕವಾಗಿದೆ.

1. ಚಿನ್ನದ ನಿಯಂತ್ರಣ ನಿಯಮಗಳು ( )

ಆ ಕಾಲದಲ್ಲಿ ಭಾರತವು ವಿದೇಶಿ ವಿನಿಮಯದ ತೀವ್ರ ಕೊರತೆಯನ್ನು ಎದುರಿಸುತ್ತಿತ್ತು. ಕಳ್ಳಸಾಗಣೆಯನ್ನು ತಡೆಯಲು ಮತ್ತು ದೇಶದ ಸಂಪತ್ತು ಚಿನ್ನದ ರೂಪದಲ್ಲಿ ವ್ಯರ್ಥವಾಗದಂತೆ ನೋಡಿಕೊಳ್ಳಲು ಸರ್ಕಾರವು ಕಠಿಣ ನಿಯಮಗಳನ್ನು ಜಾರಿಗೆ ತರಲಾಗಿತ್ತೇ ಹೊರತು ಈಗಿನ ಪೋಸ್ಟರ್‌ನಲ್ಲಿರುವಂತೆ ಪ್ರಧಾನಿಯವರು ಪತ್ರಿಕೆಯ ಮೂಲಕ ಜಾಹೀರಾತು ನೀಡಿ ಮನವಿ ಮಾಡಿರಲಿಲ್ಲ.

ಚಿನ್ನದ ಗಟ್ಟಿಗಳ ಮೇಲೆ ನಿಷೇಧ: ನಾಗರಿಕರು ಚಿನ್ನದ ಬಾರ್‌ಗಳು (ಕಟ್ಟಿಗಳು) ಅಥವಾ ನಾಣ್ಯಗಳ ರೂಪದಲ್ಲಿ ಚಿನ್ನವನ್ನು ಸಂಗ್ರಹಿಸಿ ಇಟ್ಟುಕೊಳ್ಳುವುದನ್ನು ಸಂಪೂರ್ಣವಾಗಿ ನಿಷೇಧಿಸಲಾಯಿತು.

ಆಭರಣ ತಯಾರಕರಿಗೆ ಮಿತಿ: ಆಭರಣ ಕೆಲಸ ಮಾಡುವ ಕುಶಲಕರ್ಮಿಗಳು ಗರಿಷ್ಠ 100 ಗ್ರಾಂ ಗಿಂತ ಹೆಚ್ಚು ಚಿನ್ನವನ್ನು ತಮ್ಮ ಬಳಿ ಇಟ್ಟುಕೊಳ್ಳುವಂತಿರಲಿಲ್ಲ.

ವ್ಯಾಪಾರಿಗಳ ಮೇಲೆ ಕಣ್ಗಾವಲು: ಪರವಾನಗಿ ಪಡೆದ ವ್ಯಾಪಾರಿಗಳು ತಮ್ಮ ಕೆಳಗೆ ಕೆಲಸ ಮಾಡುವ ಕಾರ್ಮಿಕರ ಸಂಖ್ಯೆಗೆ ಅನುಗುಣವಾಗಿ ಮಾತ್ರ ಚಿನ್ನವನ್ನು ಹೊಂದಬೇಕಿತ್ತು. ಅಲ್ಲದೆ, ವ್ಯಾಪಾರಿಗಳು ಪರಸ್ಪರ ಚಿನ್ನವನ್ನು ವ್ಯಾಪಾರ ಮಾಡುವುದನ್ನೂ ನಿಷೇಧಿಸಲಾಗಿತ್ತು.

2. ಮೊರಾರ್ಜಿ ದೇಸಾಯಿಯವರ ಪಾತ್ರ

ಚಿನ್ನದ ನಿಯಂತ್ರಣದ ಕಥೆ ಆರಂಭವಾಗಿದ್ದು 1962ರಲ್ಲಿ. ಆಗಿನ ಹಣಕಾಸು ಸಚಿವ ಮೊರಾರ್ಜಿ ದೇಸಾಯಿಯವರು ಮೊದಲ ಬಾರಿಗೆ ಚಿನ್ನದ ನಿಯಂತ್ರಣ ಕ್ರಮಗಳನ್ನು ಪರಿಚಯಿಸಿದರು. ಬ್ಯಾಂಕುಗಳು ಚಿನ್ನದ ಮೇಲೆ ನೀಡಿದ್ದ ಸಾಲಗಳನ್ನು ಹಿಂಪಡೆಯುವಂತೆ ಸೂಚಿಸಲಾಯಿತು. ಚಿನ್ನದ ವಾಯ್ದೆ ವ್ಯಾಪಾರವನ್ನು ( ) ನಿಷೇಧಿಸಲಾಯಿತು. 1963ರಲ್ಲಿ ಸರ್ಕಾರವು 14 ಕ್ಯಾರೆಟ್‌ಗಿಂತ ಹೆಚ್ಚಿನ ಶುದ್ಧತೆಯ ಚಿನ್ನದ ಆಭರಣ ತಯಾರಿಕೆಯನ್ನು ನಿಷೇಧಿಸಿ ಆದೇಶ ಹೊರಡಿಸಿತು. ಅಪ್ಪಟ ಚಿನ್ನದ (22 ಅಥವಾ 24 ಕ್ಯಾರೆಟ್) ಬಳಕೆಯನ್ನ ಕಡಿಮೆ ಮಾಡುವುದು ಇದರ ಉದ್ದೇಶವಾಗಿತ್ತು.

3. 1968ರ ಚಿನ್ನದ ನಿಯಂತ್ರಣ ಕಾಯ್ದೆ:-

ಮುಂದೆ 1968ರಲ್ಲಿ ಇಂದಿರಾ ಗಾಂಧಿ ಸರ್ಕಾರವು ಚಿನ್ನದ ನಿಯಂತ್ರಣ ಕಾಯ್ದೆಯನ್ನು (, 1968) ಅಧಿಕೃತವಾಗಿ ಜಾರಿಗೆ ತಂದಿತು. ಇದು ದೇಶದ ಇತಿಹಾಸದಲ್ಲೇ ಅತ್ಯಂತ ಕಠಿಣ ಆರ್ಥಿಕ ಕಾನೂನುಗಳಲ್ಲಿ ಒಂದಾಗಿತ್ತು. ಈ ಕಾಯ್ದೆಯು ಚಿನ್ನದ ಆಮದು ಮತ್ತು ರಫ್ತಿನ ಮೇಲೆ ಸಂಪೂರ್ಣ ನಿಯಂತ್ರಣ ಸಾಧಿಸಲು ಯತ್ನಿಸಿತ್ತು.

ಇಂದು ಈ ನಕಲಿ ಪತ್ರಿಕೆಯ ಚಿತ್ರ ವೈರಲ್ ಆಗಲು ಪ್ರಮುಖ ಕಾರಣವೆಂದರೆ, ಅಂದಿನ ಮತ್ತು ಇಂದಿನ ರಾಜಕೀಯ ಆರ್ಥಿಕ ನಿರ್ಧಾರಗಳ ನಡುವೆ ಹೋಲಿಕೆ ಮಾಡಲು ಹೊರಟಿರುವುದು. ಪ್ರಧಾನಿ ನರೇಂದ್ರ ಮೋದಿಯವರು ತ್ಯಾಗ, ದೇಶಪ್ರೇಮದ ಹೆಸರಲ್ಲಿ ನಿರ್ಬಂಧಗಳನ್ನು ಪಾಲಿಸಲು ಕರೆ ನೀಡಿದಾಗ, ಅದನ್ನು ಇಂದಿರಾ ಗಾಂಧಿಯವರ ಅಂದಿನ ಕ್ರಮಗಳೊಂದಿಗೆ ಹೋಲಿಸಿ ಜನರಲ್ಲಿ ಗೊಂದಲ ಮೂಡಿಸುವುದು ಬಿಜೆಪಿ ನಾಯಕರು ಹಾಗೂ ಅಂಧಭಕ್ತರ ಪ್ರಯತ್ನವಾಗಿದೆ. ಸಾಮಾಜಿಕ ಜಾಲತಾಣಗಳಲ್ಲಿ ಸುಳ್ಳು ಸುದ್ದಿ ಹಬ್ಬಿಸುವುದರಲ್ಲಿ ಬಿಜೆಪಿ ನಾಯಕರು ಮತ್ತು ಕಾರ್ಯಕರ್ತರು ಎತ್ತಿದ ಕೈ ಎಂಬ ಟೀಕೆ ಈಗ ಮತ್ತೊಮ್ಮೆ ಕೇಳಿಬರುತ್ತಿದೆ. ಚುನಾವಣೆಗಳಾಗಲಿ, ಧಾರ್ಮಿಕ ವಿಷಯಗಳಾಗಲಿ, ವಿರೋಧ ಪಕ್ಷಗಳ ವಿರುದ್ಧದ ಆರೋಪಗಳಾಗಲಿ ಹಲವು ಬಾರಿ ಪರಿಶೀಲಿಸದ ಮಾಹಿತಿ ಮೊದಲು ವೈರಲ್ ಆಗಿ ನಂತರ ಅದು ಸುಳ್ಳು ಎಂದು ಬಹಿರಂಗವಾದ ಮೇಲೆ ಪೆಚ್ಚು ಮೋರೆ ಹಾಕಿಕೊಳ್ಳುವ ಬಿಜೆಪಿಗರ ಉದಾಹರಣೆಗಳು ಸಾಕಷ್ಟಿವೆ.

ಪ್ರಧಾನಿ ಮೋದಿಯವರು ''ವಿಶ್ವದ ಅತ್ಯುತ್ತಮ ಪ್ರಧಾನಿ'' ಎಂದು ಯುನೆಸ್ಕೋ ಘೋಷಿಸಿದೆ ಎಂಬ ಸುಳ್ಳು ಸುದ್ದಿಯನ್ನು ಬಿಜೆಪಿ ಕಾರ್ಯಕರ್ತರು ಮತ್ತು ನಾಯಕರು ವ್ಯವಸ್ಥಿತವಾಗಿ ಹರಡಿದ್ದರು, ನಂತರ ಅದು ಸುಳ್ಳೆಂದು ಸಾಬೀತಾಗಿತ್ತು. ನೋಟು ಅಮಾನ್ಯೀಕರಣದ ಸಮಯದಲ್ಲಿ ಹೊಸ 2,000 ರೂಪಾಯಿ ನೋಟಿನಲ್ಲಿ ನ್ಯಾನೋ ಜಿಪಿಎಸ್ ಚಿಪ್ ಇದೆ ಎಂದು ಬಿಜೆಪಿ ಬೆಂಬಲಿಗರು ಮತ್ತು ಹಲವು ಸಂಸದರ ಜೊತೆಗೆ ಕೆಲ ಮಾಧ್ಯಮಗಳೂ ಪ್ರತಿಪಾದಿಸಿದ್ದರು. ಆದರೆ ಅಂತಹ ಯಾವುದೇ ತಂತ್ರಜ್ಞಾನ ಇಲ್ಲ ಎಂದು ಸ್ವತಃ ಆರ್‌ಬಿಐ ಸ್ಪಷ್ಟಪಡಿಸಿತ್ತು.

ಈ ಹಿಂದೆ ಪ್ರಸಿದ್ಧ ಯೂಟ್ಯೂಬರ್ ಧ್ರುವ್ ರಥೀ ಅವರು ತಮ್ಮ ವೀಡಿಯೊವೊಂದರಲ್ಲಿ ಬಿಜೆಪಿ ಐಟಿ ಸೆಲ್‌ನ ಕಾರ್ಯವೈಖರಿಯನ್ನು ಎಳೆಎಳೆಯಾಗಿ ಬಿಚ್ಚಿಟ್ಟಿದ್ದರು. ಅವರ ಪ್ರಕಾರ, ಈ ಜಾಲವು ಕೇವಲ ಸಾಮಾನ್ಯ ಕಾರ್ಯಕರ್ತರಿಂದ ನಡೆಯುತ್ತಿಲ್ಲ; ಬದಲಿಗೆ ಹಣ ನೀಡಿ ನೇಮಿಸಿಕೊಂಡ ಮತ್ತು ಕಂಪನಿಗಳ ಮೂಲಕ ನಡೆಯುತ್ತಿದೆ.

ಸಾಮಾಜಿಕ ಜಾಲತಾಣಗಳಲ್ಲಿ ಟ್ರೆಂಡ್ ಆಗುವ ಹ್ಯಾಶ್‌ಟ್ಯಾಗ್‌ಗಳು ಹೆಚ್ಚಿನವು ಕೃತಕವಾಗಿ ಸೃಷ್ಟಿಸಿದವು. ಪ್ರತಿ ಟ್ವೀಟ್‌ಗೆ ಇಂತಿಷ್ಟು ಹಣವನ್ನು ನೀಡುವ ಮೂಲಕ ನಿರುದ್ಯೋಗಿ ಯುವಕರನ್ನು ಇಲ್ಲಿ ಬಳಸಿಕೊಳ್ಳಲಾಗುತ್ತಿದೆ. ಪ್ರತೀ ಟ್ವೀಟ್‌ಗೆ 50 ರಿಂದ 70 ರೂಪಾಯಿ ವರೆಗೆ ಹಣ ನೀಡಲಾಗುತ್ತದೆ. ಹೀಗಾಗಿ ಇದು ಕೆಲವರಿಗೆ ''ಪಾಕೆಟ್ ಮನಿ'' ಗಳಿಸುವ ಮಾರ್ಗವಾಗಿಬಿಟ್ಟಿದೆ. ಆದರೆ ಈ ಪ್ರಚಾರದ ಪರಿಣಾಮವಾಗಿ ನಿಜ ಮತ್ತು ಸುಳ್ಳಿನ ನಡುವಿನ ಗಡಿ ಅಸ್ಪಷ್ಟವಾಗುತ್ತಿದೆ ಎಂಬ ಆತಂಕ ವ್ಯಕ್ತವಾಗುತ್ತಿದೆ. ಪಿಆರ್ ಸಂಸ್ಥೆಗಳು ನೇಮಿಸಿಕೊಂಡಿರುವ ಪ್ರಭಾವಿಗಳು ಹಂಚಿಕೊಳ್ಳುವ ಶೇ. 50ಕ್ಕಿಂತ ಹೆಚ್ಚಿನ ಮಾಹಿತಿಗಳು ನಕಲಿ ಅಥವಾ ದಾರಿ ತಪ್ಪಿಸುವಂತಹವು ಆಗಿರುತ್ತವೆ. ನಿರ್ದಿಷ್ಟ ಸಮಯದಲ್ಲಿ, ಸಂಘಟಿತವಾಗಿ ಈ ಟ್ವೀಟ್‌ಗಳು ಪೋಸ್ಟ್ ಆಗುತ್ತವೆ. ಇನ್ನು ಬಿಜೆಪಿ ಐಟಿ ಸೆಲ್‌ನ ಅತಿ ದೊಡ್ಡ ಅಸ್ತ್ರವೆಂದರೆ ಫೋಟೋಶಾಪ್ ಮಾಡಿದ ಚಿತ್ರಗಳು. ವಿಶ್ವ ನಾಯಕರು ಮೋದಿಯವರನ್ನು ಹೊಗಳಿದ್ದಾರೆ ಎಂದು ಸುಳ್ಳು ಸಂದೇಶಗಳನ್ನು ಸೃಷ್ಟಿಸುವುದು ಇವರ ಹಳೆಯ ಚಾಳಿ. ವಿಕಿಲೀಕ್ಸ್‌ನ ಜೂಲಿಯನ್ ಅಸ್ಸಾಂಜೆ ಅವರು ಮೋದಿಯವರನ್ನು ಹೊಗಳಿದ್ದಾರೆ ಎಂಬ ಸುಳ್ಳು ಮಾಹಿತಿ ಇದಕ್ಕೆ ಪ್ರಮುಖ ಉದಾಹರಣೆ. ಕೊನೆಗೆ ಅಸ್ಸಾಂಜೆ ಅಂತಹ ಹೇಳಿಕೆ ನೀಡಿಲ್ಲ ಎಂದು ಫ್ಯಾಕ್ಟ್ ಚೆಕ್ ವೆಬ್‌ಸೈಟ್‌ಗಳು ವರದಿ ಮಾಡಿದ್ದವು.

ಬಿಜೆಪಿ ಐಟಿ ಸೆಲ್‌ನ ಆರಂಭಿಕ ದಿನಗಳಲ್ಲಿ (2004 ರಿಂದ) ಅದರ ಮುಖ್ಯಸ್ಥರಾಗಿದ್ದ ಪ್ರೊದ್ಯುತ್ ಬೋರಾ ಅವರು ಪಕ್ಷವನ್ನು ತೊರೆಯುವಾಗ ಹೇಳಿದ ಮಾತುಗಳು ಇಂದಿನ ಪರಿಸ್ಥಿತಿಗೆ ಹಿಡಿದ ಕೈಕನ್ನಡಿ. ''ಪಕ್ಷಕ್ಕೆ ಹುಚ್ಚು ಹಿಡಿದಿದೆ. ಯಾವುದೇ ಬೆಲೆ ತೆತ್ತಾದರೂ ಗೆಲ್ಲಲೇಬೇಕು ಎಂಬ ಬಯಕೆ ಪಕ್ಷದ ನೈತಿಕತೆಯನ್ನೇ ನಾಶಪಡಿಸಿದೆ. ಅಮಿತ್ ಶಾ ಅವರ ಅಹಂಕಾರ ಮತ್ತು ಮೋದಿಯವರ ನಡೆ ಪ್ರಜಾಪ್ರಭುತ್ವದ ಸಂಪ್ರದಾಯಗಳಿಗೆ ಧಕ್ಕೆ ತರುತ್ತಿವೆ'' ಎಂದು ಅವರು ವಿಷಾದಿಸಿದ್ದರು. ಪ್ರಸ್ತುತ ಅಮಿತ್ ಮಾಳವೀಯ ನೇತೃತ್ವದಲ್ಲಿ ಈ ''ಸುಳ್ಳು ಸುದ್ದಿಗಳ ಪ್ರಸಾರ'' ಮತ್ತಷ್ಟು ತೀವ್ರಗೊಂಡಿದೆ.

ಪ್ರೊದ್ಯುತ್ ಬೋರಾ ನ್ಯೂಸ್ ಕಟ್

ಬಿಜೆಪಿ ಐಟಿ ಸೆಲ್ ಸೃಷ್ಟಿಸುವ ಸುಳ್ಳುಗಳು ಕೇವಲ ವಾಟ್ಸಾಪ್‌ಗೆ ಸೀಮಿತವಾಗದೆ ಮುಖ್ಯವಾಹಿನಿಯ ಮಾಧ್ಯಮಗಳನ್ನೂ ಪ್ರವೇಶಿಸುತ್ತಿವೆ. ಇದಕ್ಕೆ ತ್ರಿಪುರಾದ ಘಟನೆಯೇ ಸಾಕ್ಷಿ. ತ್ರಿಪುರಾದಲ್ಲಿ ಹೆದ್ದಾರಿ ದುರಸ್ತಿಗಾಗಿ ಪ್ರಧಾನಿ ಮೋದಿ ಅವರು ರಾತ್ರಿ 10 ಗಂಟೆಗೆ ಐಎಎಸ್ ಅಧಿಕಾರಿಯೊಬ್ಬರಿಗೆ ಕರೆ ಮಾಡಿದ್ದರು ಎಂಬ ಸುದ್ದಿಯನ್ನು ಜೀ ನ್ಯೂಸ್‌ನಂತಹ ಸುದ್ದಿ ವಾಹಿನಿಗಳು ಅಬ್ಬರದಿಂದ ಪ್ರಸಾರ ಮಾಡಿದವು. ಆದರೆ ಸತ್ಯ ಏನೆಂದರೆ, ಅಂತಹ ಯಾವುದೇ ಕರೆ ಹೋಗಿರಲಿಲ್ಲ ಎಂದು ಸಂಬಂಧಪಟ್ಟ ಅಧಿಕಾರಿಯೇ ಸ್ಪಷ್ಟಪಡಿಸಿದರು. ಇದು ಈ ವ್ಯವಸ್ಥೆಯ ಬೂಟಾಟಿಕೆಯನ್ನು ತೋರಿಸುತ್ತದೆ.

ಗೆಲುವಿಗಾಗಿ ಸುಳ್ಳನ್ನೇ ಬಂಡವಾಳ ಮಾಡಿಕೊಂಡಿರುವ ಬಿಜೆಪಿ ಐಟಿ ಸೆಲ್, ದೇಶದ ಯುವಜನತೆಯನ್ನು ತಪ್ಪು ದಾರಿಗೆ ಎಳೆಯುತ್ತಿದೆ. ರಾಜಕೀಯ ವಿರೋಧಕ್ಕಾಗಿ ರಾಷ್ಟ್ರೀಯ ಪತ್ರಿಕೆಗಳ ಮುಖಪುಟವನ್ನು ಎಡಿಟ್ ಮಾಡುವುದು ಅಥವಾ ಇತಿಹಾಸವನ್ನು ತಿದ್ದುವ ಪ್ರಯತ್ನ ಮಾಡುವುದು ಅಕ್ಷಮ್ಯ ಅಪರಾಧ. ಮೋದಿಯವರ ವರ್ಚಸ್ಸು ಹೆಚ್ಚಿಸಲು ಮಿಂಚಿನ ವೇಗದಂತೆ ಪ್ರಚಾರ ತಂತ್ರಗಳನ್ನು ಬಳಸಲಾಗುತ್ತಿದ್ದರೂ, ಸತ್ಯದ ಮುಂದೆ ಈ ಸುಳ್ಳಿನ ಕೋಟೆಗಳು ಹೆಚ್ಚು ದಿನ ನಿಲ್ಲಲಾರವು. ಜನರು ಪ್ರತಿ ಮಾಹಿತಿಯನ್ನು ಹಂಚಿಕೊಳ್ಳುವ ಮೊದಲು ಅದರ ಸತ್ಯಾಸತ್ಯತೆಯನ್ನು ಪರಿಶೀಲಿಸುವುದು ಇಂದಿನ ತುರ್ತು ಅಗತ್ಯವಾಗಿದೆ.

Printed and Published by: SUNDAR and Owned by: SUNDAR Printed at: SHILPA PUBLICATIONS AND PRINTING PRESS, No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Published at: No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Editor: SUNDAR